# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

ಸಂಪಾದಕರು : ಎಂ.ಎಸ್. ವಿಕಾಸ್

ದಾವಣಗೆರೆ ಸೋಮವಾರ, ಜನವರಿ 13, 2025

ಸಂಪುಟ : 51 ಸಂಚಿಕೆ : 241 ☎ 08192-254736 91642 99999 RNI No: 27369 ಪುಟ : 6 ರೂ : 5.00 www.janathavani.com janathavani@mac.com


ವೀಣಾ ವಾದನ



ದಾವಣಗೆರೆ ಚಿಂದೋಡಿ ಲೀಲಾ ಕಲಾಕ್ಷೇತ್ರದಲ್ಲಿ ಗಾನ ಸೌರಭ ಸಂಗೀತ ವಿದ್ಯಾಲಯದಿಂದ 12ನೇ ವಾರ್ಷಿಕೋತ್ಸವದ ಅಂಗವಾಗಿ ಸಾಮೂಹಿಕ ವೀಣಾ ವಾದನ ನಡೆಯಿತು.

## ಡಿ.ಕೆ. ಶಿವಕುಮಾರ್ ಸಿಎಂ ಆಗಲಿದ್ದಾರೆ: ಶಾಸಕ ಶಿವಗಂಗಾ



ದಾವಣಗೆರೆ, ಜ.12- ವಿಧಾನಸಭಾ ಚುನಾವಣೆಯ ಬಳಿಕ ನಡೆದ ಕೆಲ ಬೆಳವಣಿಗೆಗಳಿಂದ ಸಿದ್ದರಾಮಯ್ಯ ಅವರಿಗೆ ಮುಖ್ಯಮಂತ್ರಿ ಹುದ್ದೆ ಒಲಿದಿದೆ. ಕುರ್ಚಿ ಖಾಲಿಯಾದ ತಕ್ಷಣ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಆಗಲಿದ್ದಾರೆ. ಇದರಲ್ಲಿ ಯಾವುದೇ ಅನುಮಾನವಿಲ್ಲ ಎಂದು ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ ಹೇಳಿದ್ದಾರೆ.

ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಐದು ವರ್ಷಗಳ ಅವಧಿಗೆ ಮುಖ್ಯಮಂತ್ರಿ ಆಗಬೇಕಿತ್ತು. ಪಕ್ಷವನ್ನು ಅಧಿಕಾರಕ್ಕೆ ತರುವಲ್ಲಿ ಅವರ ಪಾತ್ರ ದೊಡ್ಡದಿದೆ ಎಂದರು. ಮೂರು ಕ್ಷೇತ್ರಗಳಲ್ಲೂ ಗೆಲುವು ಸಾಧಿಸುವ ಮೂಲಕ ಉಪಚುನಾವಣೆಯಲ್ಲಿ ಕೂಡ ಡಿ.ಕೆ. (2ನೇ ಪುಟಕ್ಕೆ)

## ಇಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ: ಕುತೂಹಲ



ಬೆಂಗಳೂರು, ಜ. 12- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೋಮವಾರ ಕಾಂಗ್ರೆಸ್ ಶಾಸಕಾಂಗ ಪಕ್ಷದ (ಸಿಎಲ್‌ಪಿ) ಸಭೆ ಕರೆದಿದ್ದು, ಆಡಳಿತಾರೂಢ ಕಾಂಗ್ರೆಸ್ ಪಾಳೆಯದಲ್ಲಿ ಸಿಎಂ ಕುರ್ಚಿಗಾಗಿ ಕಾದಾಟಗಳು ಮುಂದುವರೆದಿರುವ ನಡುವಲ್ಲೇ ಈ ಸಭೆ ಸಾಕಷ್ಟು ಕುತೂಹಲ ಮೂಡಿಸಿದೆ.

ಮುಖ್ಯಮಂತ್ರಿಗಳು ಸಭೆ ಕರೆದಿರುವ ಹಿನ್ನೆಲೆಯಲ್ಲಿ ಕಾಂಗ್ರೆಸ್ ಪಕ್ಷದೊಳಗೆ ಇರುವ ಬಣಗಳು ಸಕ್ರಿಯವಾಗಿವೆ. ಸಿದ್ದರಾಮಯ್ಯ ಪರ ಇರುವ ಬಣವು ದಲಿತ ಮುಖ್ಯಮಂತ್ರಿಗಾಗಿ ಆಗ್ರಹಿಸುತ್ತಿದ್ದು, ಸಭೆ ವೇಳೆ ಈ ಕುರಿತ ಸಂದೇಶವನ್ನು ಪಕ್ಷದ ಹೈಕಮಾಂಡ್‌ಗೆ ಪರೋಕ್ಷವಾಗಿ ರವಾನಿಸುವ ಸಾಧ್ಯತೆಯಿದೆ. (2ನೇ ಪುಟಕ್ಕೆ)

## ಹೆಲ್ಮೆಟ್ ಇಲ್ಲದಿದ್ದರೆ ಇಂಧನ ಇಲ್ಲ ಉತ್ತರ ಪ್ರದೇಶದಲ್ಲಿ ಹೊಸ ನಿಯಮ

ಲಖನೌ, ಜ.12- ಉತ್ತರ ಪ್ರದೇಶ ಸಾರಿಗೆ ಇಲಾಖೆ ವಿನೂತನ ಉಪಕ್ರಮ ಜಾರಿಗೆ ತಂದಿದೆ. 'ಹೆಲ್ಮೆಟ್ ಇಲ್ಲದಿದ್ದರೆ–ಇಂಧನ ಇಲ್ಲ' ಎನ್ನುವ ಯೋಜನೆಯನ್ನು ರಾಜ್ಯದ ನಗರಗಳಲ್ಲಿ ಜಾರಿಗೆ ತಂದಿದೆ.



ರಸ್ತೆ ಅಪಘಾತ ಕಡಿಮೆ ಮಾಡುವ ಸಲುವಾಗಿ ಹಾಗೂ ದ್ವಿಚಕ್ರ ವಾಹನ ಗಳು ಅಪಘಾತ ಸಂಭವಿಸಿದಾಗ ಸಂಭವಿಸುವ ಸಾವು-ನೋವಿನ ಪ್ರಮಾಣ ಕಡಿಮೆ ಮಾಡಲು ಈ ನಿರ್ಧಾರ ಕೈಗೊಳ್ಳಲಾಗಿದೆ. ಬೈಕ್ ಸವಾರ ಅಥವಾ ಹಿಂಬದಿ ಸವಾರ ಹೆಲ್ಮೆಟ್ ಧರಿಸದೇ ಇದ್ದರೆ ಅಂಥವರಿಗೆ ಇಂಧನ ಮಾರಾಟ ಮಾಡಕೂಡದು ಎಂದು ಎಲ್ಲಾ ಪೆಟ್ರೋಲ್ ಬಂಕ್‌ಗಳಿಗೆ ನಿರ್ದೇಶನ ನೀಡಿ ಜ. 8ರಂದು ರಾಜ್ಯದ ಸಾರಿಗೆ ಆಯುಕ್ತ ಬ್ರಜೇಶ್ ನರೈನ್ ಸಿಂಗ್ ಪತ್ರ ಬರೆದಿದ್ದಾರೆ. ಈ ಪತ್ರವನ್ನು ಎಲ್ಲಾ 75 ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಕಳುಹಿಸಿಕೊಡ ಲಾಗಿದ್ದು, ಈ ಬಗ್ಗೆ ತುರ್ತು ಗಮನಹರಿಸಬೇಕು ಎಂದು ಸೂಚಿಸಲಾಗಿದೆ. ಹೆಲ್ಮೆಟ್ ಧರಿಸದೇ ಇರುವುದರಿಂದ ಸಾವು-ನೋವಿನ ಸಂಖ್ಯೆಯ ದತ್ತಾಂಶವನ್ನೂ ಪತ್ರದಲ್ಲಿ ಉಲ್ಲೇಖಿಸಲಾಗಿದೆ.

# ಬಹುತ್ವ, ಭಾವೈಕ್ಯತೆ ಉಳಿಸುವವನೇ ಕನ್ನಡಿಗ

ಜಗಳೂರು, ಜ.12- ಕನ್ನಡದ ಸಂವೇದನೆ ಅರ್ಥಮಾಡಿಕೊಂಡು ಬಹುತ್ವ ಮತ್ತು ಭಾವೈಕ್ಯತೆ, ಬಹುಸಂಸ್ಕೃತಿಯನ್ನು ಉಳಿಸುವವರು ನಿಜವಾದ ಕನ್ನಡಿಗರು ಎಂದು ಖ್ಯಾತ ಸಾಹಿತಿ ನಾಡೋಜ ಡಾ. ಬರಗೂರು ರಾಮಚಂದ್ರಪ್ಪ ಅಭಿಪ್ರಾಯ ವ್ಯಕ್ತಪಡಿಸಿದರು.

ಸೋಮವಾರ ಪಟ್ಟಣದ ಬಯಲು ರಂಗಮಂದಿರದಲ್ಲಿ 14ನೇ ಜಿಲ್ಲಾ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಎಲ್ಲಾ ಜಾತಿ ಧರ್ಮದವರು ಕನ್ನಡ ಉಳಿಸಿದ್ದಾರೆ. ಕನ್ನಡಿಗರನ್ನು ಉಳಿಸಿದರೆ ಕನ್ನಡ ಭಾಷೆ ಉಳಿಯುತ್ತದೆ ಎಂದರು.

**ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಸಮಾರೋಪದಲ್ಲಿ ಸಾಹಿತಿ ಡಾ.ಬರಗೂರು ರಾಮಚಂದ್ರಪ್ಪ**

ಕನ್ನಡ ಭಾಷೆಗೆ ಸಾವಿಲ್ಲ, ಸವಾಲುಗಳು ಇವೆ. ಆಳುವವರನ್ನು ಅರಗಿಸಿಕೊಂಡು ಬೆಳೆದಿರುವ ಶಕ್ತಿ ಕನ್ನಡ ಭಾಷೆಗೆ ಇದೆ. ಸಾವಿರಾರು ವರ್ಷಗಳಿಂದ ಕನ್ನಡ ಭಾಷೆ ಹಲವಾರು ಸವಾಲುಗಳನ್ನು ಎದುರಿಸುತ್ತಿದೆ ಎಂದರು.

ಪ್ರಪಂಚದಲ್ಲಿ 6703 ಭಾಷೆಗಳಿವೆ. ಎಷ್ಟೋ ಭಾಷೆಗಳು ವಿನಾಶ ಹೊಂದಿವೆ. ಆದರೆ ಭಾಷಾ ವಿಜ್ಞಾನಿಗಳ ಅನ್ವೇಷಣೆಯಂತೆ ಜಗತ್ತಿನ ಮೊದಲ 20 ಭಾಷೆಗಳಲ್ಲಿ ಕನ್ನಡವೂ ಒಂದು ಎಂಬುದನ್ನು ನಂಬಬೇಕಿದೆ ಎಂದರು.

ಸಾಹಿತ್ಯ ಸಮ್ಮೇಳನಗಳು ಕೋಟಿ ಕೋಟಿ ಹಣ ದಿಂದ ಕನ್ನಡ ಭಾಷೆಯ ಮೌಲ್ಯ ಅಳೆಯದೆ, ಸರಳವಾಗಿದ್ದು ಸಾಮಾಜಿಕ, ಸಾಂಸ್ಕೃತಿಕ ವೇದಿಕೆಯಾಗಬೇಕು ಎಂಬುದು ನನ್ನ ಆಶಯ ಎಂದರು.

ರಾಜಪ್ರಭುತ್ವದ ಒಡೆಯನಾಗಿದ್ದುಕೊಂಡು ನಾಲ್ವಡಿ ಕೃಷ್ಣ ರಾಜ್ ಒಡೆಯರ್ ಅವರು ಪ್ರಜಾಸತ್ತಾತ್ಮಕ ಸ್ವಾಯತ್ತ ಸಂಸ್ಥೆ ಕಸಾಪ ಸ್ಥಾಪಿಸಿದರು. ಮಾಜಿ ಸಿಎಂ ದೇವರಾಜ ಅರಸು ಅವರ ಕಲ್ಪನೆಯಂತೆ ಅಕಾಡೆಮಿಗಳು ಸ್ಥಾಪನೆಯಾದವು. ಸಾಂಸ್ಕೃತಿಕ ಅಕಾಡೆಮಿಗಳ ಮೇಲೆ ಆಡಳಿತ ಸರ್ಕಾರಗಳಿಂದ ಆರ್ಥಿಕ (2ನೇ ಪುಟಕ್ಕೆ)

**ಕನ್ನಡ ಭಾಷೆಗೆ ಶಾಸ್ತ್ರೀಯ ಸ್ಥಾನಮಾನ ಸಿಗಬೇಕಿದೆ. ಕದಂಬ, ಚಾಲುಕ್ಯರ ಕಾಲದಿಂದಲೂ ಜಿನಗಿ,ಹಗರಿ ನದಿಗಳ ಸಂಗಮವಾಗಿರುವ ಕವಿ ಮಹಲಿಂಗ ರಂಗನ ಸಮಾಧಿ ಸ್ಥಳ ಕೊಣಚಗಲ್ಲಿನಲ್ಲಿ ಮುಂದಿನ ಜಿಲ್ಲಾ ಉತ್ಸವ ಆಯೋಜಿಸಲು ಜಿಲ್ಲಾಧಿಕಾರಿಗಳು ಕ್ರಮವಹಿಸಬೇಕು.**

- ಟಿ.ಗುರುಸಿದ್ದನಗೌಡ್ರು, ಮಾಜಿ ಶಾಸಕ ಜಗಳೂರು

**ಈ ಸಮ್ಮೇಳನ ನನ್ನ ಸ್ಮೃತಿಪಟಲದಲ್ಲಿ ಜೀವನವಿಡೀ ಅಚ್ಚಳಿಯದೆ ಉಳಿದಿದೆ. ಅಕ್ಷರ ಜಾತ್ರೆಯು ಎರಡು ದಿನಗಳ ಕಾಲ ಸಾಂಸ್ಕೃತಿಕ ಸುಗ್ಗಿಯಂತಾಗಿದೆ. ಜಗಳೂರಿನ ಕೆರೆಗಳು ಕೋಡಿ ಬಿದ್ದಿವೆ. ಬುಡಕಟ್ಟು ಸಂಸ್ಕೃತಿಯನ್ನು ಗರ್ಭದಲ್ಲಿಟ್ಟುಕೊಂಡಿರುವ ಬರದ ನಾಡು ಬರಡಲ್ಲ. ಕೋಮುವಾದದ ನಂಜು ಬಿತ್ತದಂತೆ ಸಾಂಸ್ಕೃತಿಕ ಮೌಲ್ಯ ಸಾರುವ, ಕನ್ನಡದ ಅಸ್ಮಿತೆ ಉಳಿಸೋಣ.**

- ಡಾ.ಎ.ಬಿ. ರಾಮಚಂದ್ರಪ್ಪ, ಸಮ್ಮೇಳನದ ಸರ್ವಾಧ್ಯಕ್ಷ

### ಅಷ್ಟ ನಿರ್ಣಯಗಳು

- ಈ ವರ್ಷದಲ್ಲಿಯೇ ಮೂರನೇ ವಿಶ್ವ ಸಮ್ಮೇಳನವನ್ನು ದಾವಣಗೆರೆಯಲ್ಲಿ ಆಯೋಜಿಸಬೇಕು ಹಾಗೂ ಸರ್ಕಾರ ಕೂಡಲೇ ದಿನಾಂಕ ಘೋಷಿಸಬೇಕು.
- ಕನ್ನಡ ಮಾಧ್ಯಮದಲ್ಲಿ ವಿದ್ಯಾರ್ಜನೆ ಮಾಡಿರುವ ವಿದ್ಯಾರ್ಥಿಗಳಿಗೆ ವೃತ್ತಿ ಶಿಕ್ಷಣ ಮತ್ತು ಸರಕಾರಿ ಉದ್ಯೋಗದಲ್ಲಿ ನೀಡುತ್ತಿರುವ ಮೀಸಲಾತಿಯನ್ನು ಶೇ.5 ರಿಂದ 15 ಕ್ಕೆ ಏರಿಸುವ ಮೂಲಕ ಕನ್ನಡ ಭಾಷೆಯನ್ನು ಅನ್ನದ ಭಾಷೆಯನ್ನಾಗಿಸಲು ಕ್ರಮಕೈಗೊಳ್ಳಬೇಕು.
- ದಾವಣಗೆರೆಯಲ್ಲಿ ಕೃಷಿ ಉತ್ಪನ್ನಾಧಾರಿತ ಹಾಗೂ ಉದ್ಯೋಗ ಸೃಷ್ಟಿಸುವ ಕೈಗಾರಿಕೆ ಸ್ಥಾಪನೆಯಾಗಬೇಕು.
- ದಾವಣಗೆರೆ ನಗರವನ್ನು ಎರಡನೇ ರಾಜಧಾನಿಯನ್ನಾಗಿಸಬೇಕು.
- ಜಗಳೂರು ತಾಲ್ಲೂಕಿನ ಎಲ್ಲಾ ಪ್ರವಾಸೋದ್ಯಮ ಸ್ಥಳಗಳನ್ನು ಅಭಿವೃದ್ದಿಪಡಿಸಿ ಪ್ರವಾಸಿ ತಾಣವನ್ನಾಗಿಸಲು ಮೂಲಸೌಕರ್ಯ ಒದಗಿಸಬೇಕು.
- ಜಗಳೂರು ತಾಲೂಕಿನ ಅಪರೂಪದ ಪ್ರಾಣಿ ಕೊಂಡ ಕುರಿ ಸಂರಕ್ಷಣೆಗೆ ಮುಂದಾಗಬೇಕು. ಸರ್ಕಾರಿ ಕಾರ್ಯಕ್ರಮಗಳಲ್ಲಿ ಕೊಂಡಕುರಿ ಲಾಂಛನವನ್ನು ಕಡ್ಡಾಯವಾಗಿ ಬಳಸಲು ಆದೇಶಿಸಬೇಕು.
- ದಾವಣಗೆರೆಯಲ್ಲಿ ಜಿಲ್ಲೆಯ ಎಲ್ಲಾ ತಾಲ್‌ಲೂಕುಗಳಲ್ಲಿ ಸುಸಜ್ಜಿತ ಕನ್ನಡ ಭವನ ನಿರ್ಮಿಸಲು ಅಗತ್ಯ ಸಹಕಾರ ಮತ್ತು ಅನುದಾನ ನೀಡಬೇಕು.
- ಕಸಾಪದ ಎಲ್ಲಾ ಹಂತದ ಸಮ್ಮೇಳನಗಳನ್ನು ಸರ್ಕಾರ ಅನುಮೋದಿಸಬೇಕು.



ಜಗಳೂರಿನಲ್ಲಿ ನಡೆದ ಸಾಹಿತ್ಯ ಸಮ್ಮೇಳನದ ಸಮಾರೋಪ ಸಮಾರಂಭದಲ್ಲಿ ಸಾಹಿತಿ ಡಾ.ಬರಗೂರು ರಾಮಚಂದ್ರಪ್ಪ ಮಾತನಾಡಿದರು.

# ಹಿರಿಯರ ಆದರ್ಶಗಳೇ ನಮ್ಮ ಜೀವನಕ್ಕೆ ಮಾರ್ಗದರ್ಶನ

## ದತ್ತಿ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್



ದಾವಣಗೆರೆ, ಜ.12- ಹಿರಿಯರ ಆದರ್ಶಗಳೇ ನಮ್ಮೆಲ್ಲರ ಜೀವನಕ್ಕೆ ಮಾರ್ಗದರ್ಶನ ಆಗಬೇಕು ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಹೇಳಿದರು.

ಶರಣ ಸಾಹಿತ್ಯ ಪರಿಷತ್ ವತಿಯಿಂದ ನಗರದ ಗುರು ಬಸವ ಮಂಟಪದಲ್ಲಿ ಭಾನುವಾರ ಆಯೋಜಿಸಿದ್ದ ಲಿಂ. ಕೆ.ಜಿ. ಪರಮೇಶ್ವರಪ್ಪ ಹಾಗೂ ಲಿಂ. ಕೆ.ಜಿ. ಲೋಕೇಶ್ವರಪ್ಪ ಅವರ ದತ್ತಿ ಮತ್ತು ವಿಶೇಷ ಉಪನ್ಯಾಸ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರಸ್ತುತ ದಿನಗಳಲ್ಲಿ ಹಿರಿಯರ ಮಾರ್ಗದರ್ಶನ ಪಾಲಿಸದ ಮಕ್ಕಳು, ಸಂಸ್ಕೃತಿ-ಸಂಸ್ಕಾರಗಳಿಂದ ವಂಚಿತರಾಗುತ್ತಿದ್ದರಿಂದ ತಂದೆ-ತಾಯಿಗಳು ವೃದ್ಧಾಶ್ರಮದ ಪಾಲಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು. ಇಂದಿನ ಮಕ್ಕಳು ಪಾಶ್ಚಾತ್ಯ ಸಂಸ್ಕೃತಿಯನ್ನು ಕಡೆಗಣಿಸಿ, ಭಾರತೀಯ ಸಂಸ್ಕೃತಿ-ಸಂಸ್ಕಾರ ಸೇರಿದಂತೆ ಜೀವನಕ್ಕೆ ಬೇಕಾದ ಉತ್ತಮ ಮೌಲ್ಯಗಳನ್ನು ತಿಳಿದುಕೊಳ್ಳಬೇಕು ಎಂದು ಹೇಳಿದರು.

'ನನ್ನ ಕುಟುಂಬದ ಹಿರಿಯರಿಂದ ಜೀವನಕ್ಕೆ ಬೇಕಾದ ಸಾಕಷ್ಟು ಕೌಶಲ್ಯಗಳನ್ನು ಕಲಿತಿದ್ದೇನೆ ಮತ್ತು ಕುಟುಂಬದ ಒಗ್ಗಟ್ಟು ಹೇಗಿರಬೇಕು ಎಂಬುದನ್ನು ನನ್ನ ತಂದೆ, ಚಿಕ್ಕಪ್ಪ ಹಾಗೂ ದೊಡ್ಡಪ್ಪನವರಿಂದ ಕಲಿತಿದ್ದೇನೆ' ಎಂದು ತಿಳಿಸಿದರು.

ಕಕ್ಕರಗೊಳ್ಳದಲ್ಲಿ ಗೌಡ್ರು ಕುಟುಂಬ ಊರಿನ ಜನರ ಸಮಸ್ಯೆಗಳನ್ನು ಪರಿಹರಿಸಿ, ನ್ಯಾಯ ಒದಗಿಸುವ ಮೂಲಕ ಪಂಚಾಯ್ತಿ ಮಾಡುತ್ತಿದ್ದ ತಮ್ಮ ಹಿರಿಯರನ್ನು ಸ್ಮರಿಸಿದರು.

ಶರಣ ಸಾಹಿತ್ಯ ಪರಿಷತ್‌ನ ಜಿಲ್ಲಾಧ್ಯಕ್ಷ ಕೆ.ಬಿ.ಪರಮೇಶ್ವರಪ್ಪ ಪ್ರಾಸ್ತಾವಿಕ ಮಾತನಾಡಿ, ಶಾಲಾ-ಕಾಲೇಜುಗಳಲ್ಲಿ ದತ್ತಿ ಕಾರ್ಯಕ್ರಮ ಆಯೋಜಿಸುವ ಮೂಲಕ ಮಕ್ಕಳಲ್ಲಿ ವಚನ ಸಾಹಿತ್ಯದ ಅರಿವು ಮೂಡಿಸಲಾಗುತ್ತಿದೆ ಎಂದು ಹೇಳಿದರು.

'ಸಾಂಸ್ಕೃತಿಕ ನಾಯಕ ಬಸವಣ್ಣನವರು ಮತ್ತು ಜೀವನ ಮೌಲ್ಯಗಳು' ಎಂಬ ವಿಷಯ ಕುರಿತು ವಿಶ್ರಾಂತ ಪ್ರಾಚಾರ್ಯ ಲೋಕೇಶ್ ಒಡೆಯರ್ ವಿಶೇಷ ಉಪನ್ಯಾಸ ನೀಡಿದರು. ದತ್ತಿ ದಾನಿಗಳಾದ ಗಿರಿಜಮ್ಮ ಪರಮೇಶ್ವರಪ್ಪ ಹಾಗೂ (2ನೇ ಪುಟಕ್ಕೆ)

# ಮಲಗಿದ್ದ ಹಸುಗಳ ಕೆಚ್ಚಲು ಕೊಯ್ದ ಕಿಡಿಗೇಡಿಗಳು

## ಚಾಮರಾಜ ಪೇಟೆಯಲ್ಲಿ ನಡೆದ ಘಟನೆ, ರಾತ್ರಿಯಿಡೀ ರಕ್ತದ ಮಡುವಿನಲ್ಲಿ ನರಳಾಡಿದ ಹಸುಗಳು

ಬೆಂಗಳೂರು, ಜ.12- ಮಲಗಿದ್ದ ಮೂರು ಹಸುಗಳ ಕೆಚ್ಚಲು ಕೊಯ್ದ ಅಮಾನವೀಯ ಘಟನೆ ನಗರದ ಚಾಮ ರಾಜಪೇಟೆಯ ವಿನಾಯಕನಗರದಲ್ಲಿ ನಡೆದಿದೆ.

ತಡರಾತ್ರಿ ಈ ಅಮಾನವೀಯ ಘಟನೆ ನಡೆದಿದೆ ಎನ್ನಲಾಗಿದ್ದು, ರಸ್ತೆಯಲ್ಲಿ ಮಲಗಿದ್ದ ಮೂರು ಹಸುಗಳ ಕೆಚ್ಚಲುಗಳನ್ನು ಕೊಯ್ದು ಕಿಡಿಗೇಡಿಗಳು ವಿಕೃತಿ ಮೆರೆದಿದ್ದಾರೆ.

ರಾತ್ರಿಯಿಡೀ ಹಸುಗಳು ರಕ್ತದ ಮಡುವಿನಲ್ಲಿ ನರಳಾಡಿವೆ. ಇಂದು ಬೆಳಗ್ಗೆ ಘಟನೆ ಬೆಳಕಿಗೆ ಬಂದಿದೆ. ಸದ್ಯ ಹಸುಗಳಿಗೆ ಚಾಮರಾಜಪೇಟೆಯ ಪಶು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

ಪಾಪಿಗಳ ಈ ಕೃತ್ಯಕ್ಕೆ ಸ್ಥಳೀಯರು ಹಿಡಿಶಾಪ ಹಾಕುತ್ತಿದ್ದಾರೆ. ಸ್ಥಳದಲ್ಲಿ ಜನರು ಜಮಾವಣೆಗೊಂಡಿದ್ದು, ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಈ ನಡುವೆ ಸ್ಥಳಕ್ಕೆ ಹಿಂದೂ ಕಾರ್ಯಕರ್ತರು ಧಾವಿಸಿದ್ದು, ಕೃತ್ಯವನ್ನು ಖಂಡಿಸಿದ್ದಾರೆ.

ಘಟನಾ ಸ್ಥಳಕ್ಕೆ ಸಂಸದ ಪಿ.ಸಿ. ಮೋಹನ್ ಭೇಟಿ ನೀಡಿದ್ದು, ಮಾತುಕತೆ ನಡೆಸಿದರು. ಬಳಿಕ ಮಾಧ್ಯಮ ಗಳೊಂದಿಗೆ ಮಾತನಾಡಿದ ಅವರು, ಇದೊಂದು ಅಮಾನವೀಯ ಕೃತ್ಯ. ಕೂಡಲೇ ಕಿಡಿಗೇಡಿಗಳ ಬಂಧನವಾಗಬೇಕು. ಈ ಸರ್ಕಾರ ಬಂದ ಮೇಲೆ ಇದೆಲ್ಲಾ ಆಗುತ್ತಿದೆ. ಕಿಡಿಗೇಡಿಗಳ ಬಂಧನವಾಗುವವರೆಗೆ (2ನೇ ಪುಟಕ್ಕೆ)

### ತಪ್ಪಿತಸ್ಥರಿಗೆ ಶಿಕ್ಷೆ: ಸಿಎಂ

**ಹಗರಿಬೊಮ್ಮನಹಳ್ಳಿ, ಜ.12- ಪ್ರಾಣಿ ಹಿಂಸೆ ಮಾಡುವುದು ಅಪರಾಧ, ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಶಿಕ್ಷೆಗೆ ಒಳಪಡಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಭಾನುವಾರ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಚಾಮರಾಜಪೇಟೆಯಲ್ಲಿ ಕೆಚ್ಚಲು ಕೊಯ್ದ ಘಟನೆಗೆ ಸಂಬಂಧಿಸಿದಂತೆ ತಪ್ಪಿತಸ್ಥರ ಮಾಹಿತಿ ದೊರೆತಿಲ್ಲ. ಪೊಲೀಸ್ ಆಯುಕ್ತರು ತಪ್ಪಿತಸ್ಥರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕೆಂದು ಸೂಚಿಸಲಾ ಗಿದೆ. ಹಿಂದೂ ಸಂಘಟನೆಗಳ ಪ್ರತಿಭಟನೆ ರಾಜಕೀಯ ಪ್ರೇರಿತವಾಗಿದೆ ಎಂದರು.**

### ನೀಚರನ್ನು ಬಂಧಿಸದಿದ್ದರೆ ಜಮೀರ್ ವಿರುದ್ಧ ಹೋರಾಟ



ಧಾರವಾಡ, ಜ.12- ಚಾಮರಾಜ ಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದಿರುವ ಘಟನೆ ಗಮನಕ್ಕೆ ಬಂದಿದ್ದು. ಇದು ನೀಚ ಕೃತ್ಯ. ಇದು ರಾಕ್ಷಸ ಕೃತ್ಯಕ್ಕೆ ಉದಾಹರಣೆ ಎಂದು ಶ್ರೀರಾಮ ಸೇನೆ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಕಿಡಿಕಾರಿದ್ದಾರೆ. ಭಾನುವಾರ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, (2ನೇ ಪುಟಕ್ಕೆ)



### ಕ್ರಮ ಕೈಗೊಳ್ಳದಿದ್ದರೆ ರಾಜ್ಯಾದ್ಯಂತ ಕರಾಳ ಸಂಕ್ರಾಂತಿ: ಆರ್. ಅಶೋಕ್



ಬೆಂಗಳೂರು, ಜ.12- ಚಾಮರಾಜಪೇಟೆಯಲ್ಲಿ ಹಸುಗಳ ಕೆಚ್ಚಲು ಕೊಯ್ದ ಜಿಹಾದಿಗಳ ವಿರುದ್ಧ ಸರ್ಕಾರ ಕಠಿಣ ಕ್ರಮ ವಹಿಸದಿದ್ದರೆ, ರಾಜ್ಯದಾದ್ಯಂತ ಕರಾಳ ಸಂಕ್ರಾಂತಿ ಆಚರಿಸಲಾಗುವುದು ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಎಚ್ಚರಿಸಿದ್ದಾರೆ.

ಘಟನೆ ನಡೆದ ಸ್ಥಳಕ್ಕೆ ಭೇಟಿ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ದೇಶ ಗೋವನ್ನು ಪವಿತ್ರ ಎಂದು ಪರಿಗಣಿಸಿದೆ. ಸಂಕ್ರಾಂತಿ ಹಬ್ಬದಲ್ಲೂ ಗೋವನ್ನು ಪೂಜಿಸಲಾಗುತ್ತದೆ. ಕಾಂಗ್ರೆಸ್ ಸರ್ಕಾರ ಹೊಸ ವರ್ಷಕ್ಕೆ ಬೆಲೆ ಏರಿಕೆಯ ಕೊಡುಗೆ ನೀಡಿದೆ. ಅದೇ ರೀತಿ ಸಂಕ್ರಾಂತಿ ಹಬ್ಬದ ಸಮಯದಲ್ಲಿ ಹಸುವಿನ ಕೆಚ್ಚಲು ಕೊಯ್ದುಹಾಕುವ ಕೊಡುಗೆಯನ್ನು ನೀಡಿದೆ. ಇಂತಹ ಜಿಹಾದಿ ಮನಸ್ಥಿತಿಯನ್ನು ನಾನು ಈವರೆಗೆ ನೋಡಿಲ್ಲ ಎಂದರು.

ನೂರಾರು ವರ್ಷಗಳಿಂದ ಚಾಮರಾಜಪೇಟೆಯಲ್ಲಿ ಪಶು ಆಸ್ಪತ್ರೆ ಇದೆ. ಈ ಭೂಮಿಯನ್ನು ವಕ್ಫ್ ಮಂಡಳಿಗೆ ಸೇರಿಸಲು ಪ್ರಯತ್ನ ನಡೆದಿತ್ತು. ಆಗ ಸರ್ಕಾರದ ವಿರುದ್ಧ ಪ್ರತಿಭಟಿಸುವುದರ ಜೊತೆಗೆ, ಕೋರ್ಟ್ ಮೊರೆ (2ನೇ ಪುಟಕ್ಕೆ)

# ಸರ್ಕಾರಿ ಶಾಲೆ ಅಭಿವೃದ್ಧಿಗೆ ಸಂಘ-ಸಂಸ್ಥೆ ಸಹಕಾರ ಅಗತ್ಯ: ಶಾಸಕ ಬಸವಂತಪ್ಪ

ದಾವಣಗೆರೆ, ಜ.12- ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಂಘ - ಸಂಸ್ಥೆಗಳೂ ಸಹಕಾರ ನೀಡಬೇಕು ಎಂದು ಮಾಯ ಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ತಿಳಿಸಿದರು.

ಜಿ.ಪಂ., ತಾ.ಪಂ ಹಾಗೂ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ಸಹಯೋಗದಲ್ಲಿ ತಾಲ್ಲೂಕಿನ ಕೋಲ್ಕುಂಟೆ ಗ್ರಾಮದಲ್ಲಿ ಭಾನುವಾರ ರಾಷ್ಟ್ರೀಯ ಫೌಂಡೇಶನ್ ವತಿಯಿಂದ 1 ಕೋಟಿ ರೂ. ವೆಚ್ಚದಲ್ಲಿ ಸರ್ಕಾರಿ ಶಾಲೆಯ 4 ಹೈಟೆಕ್ ಕೊಠಡಿ ಮತ್ತು ಶೌಚಗೃಹ ನಿರ್ಮಾಣಕ್ಕೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.



ಕೇವಲ ಸರ್ಕಾರದ ಅನುದಾನದಿಂದಲೇ ಸರ್ಕಾರಿ ಶಾಲೆಗಳ ಅಭಿವೃದ್ಧಿ ಅಸಾಧ್ಯ. ಆದ್ದರಿಂದ ಸಂಘ-ಸಂಸ್ಥೆಗಳು ಹಾಗೂ ಎನ್‌ಜಿಒ ಗಳು ಶಿಥಿಲಗೊಂಡ ಸರ್ಕಾರಿ ಶಾಲೆಗಳನ್ನು ಅಭಿವೃದ್ಧಿ ಪಡಿಸಲು ಮುಂದೆ ಬರಬೇಕು ಎಂದು ಹೇಳಿದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯಲ್ಲಿ ಸಾಕಷ್ಟು ಸರ್ಕಾರಿ ಶಾಲೆಗಳು ಶಿಥಿಲಗೊಂಡು ದುಸ್ಥಿತಿಯಲ್ಲಿ ಇವೆ. ಮಳೆ ಬಂದರೆ ಸೋರುತ್ತವೆ. ಇಂತಹ ಕಟ್ಟಡಗಳನ್ನು ಪುನರ್ ನಿರ್ಮಾಣ ಮಾಡಲು ಶಿಕ್ಷಣ ಪ್ರೇಮಿಗಳು ಹಾಗೂ ದಾನಿಗಳು ಕೈಜೋಡಿಸಬೇಕು ಎಂದರು.

ಗ್ರಾಮೀಣ ಪ್ರದೇಶದ ಬಡ ಮಕ್ಕಳು ಶಿಕ್ಷಣ ಪಡೆದು ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂಬ ಉದ್ದೇಶದಿಂದ ರಾಷ್ಟ್ರೀಯ ಆಹ್ವಾನ ಫೌಂಡೇಶನ್ ವತಿಯಿಂದ 1 ಕೋಟಿ ರೂ. (2ನೇ ಪುಟಕ್ಕೆ)

# ಪಾಕ್ ವೀಸಾ ಪ್ರಕ್ರಿಯೆ ಸರಳಗೊಳಿಸಿದ ಬಾಂಗ್ಲಾ

ಲಾಹೋರ್, ಜ.12- ಪಾಕಿಸ್ತಾನದೊಂದಿಗೆ ವಾಣಿಜ್ಯ ಮತ್ತು ಆರ್ಥಿಕ ಸಂಬಂಧವನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ, ಬಾಂಗ್ಲಾದೇಶದ ಮಧ್ಯಂತರ ಸರ್ಕಾರವು ಪಾಕ್ ಜನರಿಗೆ ವೀಸಾ ಪ್ರಕ್ರಿಯೆಯನ್ನು ಸರಳಗೊಳಿಸಿದೆ.

ಬಾಂಗ್ಲಾದಲ್ಲಿ ಹಿಂದೂಗಳು ಹಾಗೂ ಧಾರ್ಮಿಕ ಅಲ್ಪಸಂಖ್ಯಾತರ ಮೇಲಿನ ದಾಳಿಯಿಂದಾಗಿ ಭಾರತದೊಂದಿಗಿನ ಸಂಬಂಧ ಹಳಸಿರುವ ಹೊತ್ತಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ.

ವೀಸಾ ಅನುಮೋದಿಸಲು ಪಾಕ್ ರಾಯಭಾರ ಕಚೇರಿಗೆ ಢಾಕಾ ಅನುಮತಿ ನೀಡುವ ಅಗತ್ಯವಿತ್ತು. ಅದನ್ನು ಈಗ ಬಾಂಗ್ಲಾ ಸರ್ಕಾರ ತೆಗೆದುಹಾಕಿದೆ ಎಂದು ಪಾಕಿಸ್ತಾನದಲ್ಲಿ ಬಾಂಗ್ಲಾದೇಶದ ಹೈಕಮೀಷನರ್ ಆಗಿರುವ ಇಕ್ಬಾಲ್ ಹುಸೇನ್ ತಿಳಿಸಿದ್ದಾರೆ. ಲಾಹೋರ್‌ನಲ್ಲಿ ಶನಿವಾರ ನಡೆದ ವಾಣಿಜ್ಯ ಸಮಾವೇಶದಲ್ಲಿ ಅವರು ಮಾತನಾಡಿದ್ದಾರೆ.

ಉಭಯ ದೇಶಗಳ ನಡುವಣ ಸಂಬಂಧವು ದಶಕಗಳಿಂದ ತೃಪ್ತಿಕರವಾಗಿಲ್ಲ ಎಂಬುದನ್ನು ಒತ್ತಿ ಹೇಳಿರುವ ಅವರು, ಮುಖ್ಯ ಸಲಹೆಗಾರ ಮೊಹಮ್ಮದ್ ಯೂನಸ್ ನೇತೃತ್ವದ ಬಾಂಗ್ಲಾ ಮಧ್ಯಂತರ ಸರ್ಕಾರವು ಪಾಕ್ ಜೊತೆಗಿನ ಬಾಂಧವ್ಯವನ್ನು ಉತ್ತಮಪಡಿಸಲು ಉತ್ಸುಕವಾಗಿದೆ ಎಂದೂ ಹೇಳಿದ್ದಾರೆ.

# ದೈಹಿಕ, ಮಾನಸಿಕ ಸ್ಥಿತಿ ಉತ್ತಮಗೊಳಿಸಲು ನಾಟಿ ಔಷಧಿ ಉಪಯುಕ್ತ

## ಗಿಡ ಮೂಲಿಕೆಗಳ ಉಚಿತ ಕಷಾಯ ವಿತರಣೆ ಕಾರ್ಯಕ್ರಮದಲ್ಲಿ ವರ ಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ



ಹರಪನಹಳ್ಳಿ, ಜ.12- ಮನುಷ್ಯನ ದೈಹಿಕ ಮತ್ತು ಮಾನಸಿಕ ಸ್ಥಿತಿಯನ್ನು ಉತ್ತಮಗೊಳಿಸಲು ಪಾರಂಪರಿಕ ನಾಟಿ ಔಷಧಿ ಉಪಯುಕ್ತವಾಗಲಿದೆ ಎಂದು ಸ್ಥಳೀಯ ತೆಗ್ಗಿನ ಮಠದ ಪೀಠಾಧಿಪತಿ ಶ್ರೀ ವರ ಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯಪಟ್ಟರು.

ಕರ್ನಾಟಕ ಪಾರಂಪರಿಕ ನಾಟಿ ವೈದ್ಯರ ಸಂಘದಿಂದ ಪಟ್ಟಣದ ತೆಗ್ಗಿನಮಠದ ಆವರಣದಲ್ಲಿ ಶನಿವಾರ ಆಯೋಜಿಸಿದ್ದ 108 ಗಿಡ ಮೂಲಿಕೆಗಳಿಂದ ತಯಾರಿಸಿದ ಉಚಿತ ಕಷಾಯ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಶ್ರೀಗಳು ಮಾತನಾಡಿದರು.

ಪಾರಂಪರಿಕ ನಾಟಿ ಔಷಧಿ ಪದ್ಧತಿ ಶತ-ಶತಮಾನಗಳಿಂದ ತಲೆಮಾರುಗಳ ಮೂಲಕ ಭೌಗೋಳಿಕ ಮತ್ತು ನೈಸರ್ಗಿಕವಾಗಿ ಬೆಳೆದು ಬಂದಿದೆ. ಪ್ರಸಕ್ತ ದಿನಗಳಲ್ಲಿ ಗಿಡಮೂಲಿಕೆಗಳ ಪ್ರಚಾರದ ಕೊರತೆಯಿಂದ ಇಂದು ಹೆಚ್ಚಿನ ಜನರಿಗೆ ಇದು ತಲುಪಿಲ್ಲ ಎಂದು ಹೇಳಿದರು.

> **ಸಾವಯವ ಕೃಷಿಯಿಂದ ಆರೋಗ್ಯ ಉತ್ತಮ ವಾಗಲಿದೆ. ಹಾಗಾಗಿ ಎಲ್ಲರೂ ಸಾವಯವ ಕೃಷಿ ಪದ್ಧತಿ ಮುಂದುವರೆಸಬೇಕು.**
> **- ನಾಗನಗೌಡ ಪಾಟೀಲ್., ಸೊರಬ ತಾಲ್ಲೂಕಿನ ನಾಟಿ ವೈದ್ಯ**

ದೇಹದ ಸಮತೋಲನ ಕಾಪಾಡಿಕೊಳ್ಳಬೇಕಾದರೆ ಗಿಡಮೂಲಿಕೆಗಳಿಂದ ತಯಾರಿಸಿದ ನಾಟಿ ಔಷಧಿ ಪಡೆಯಬೇಕು ಇದರಿಂದ ದೇಹಕ್ಕೆ ಯಾವುದೇ ಅಡ್ಡ ಪರಿಣಾಮ ಬೀರುವುದಿಲ್ಲ ಎಂದ ಅವರು, ಈ ಕಲೆಯನ್ನು ಹೆಚ್ಚು ಪ್ರಚಾರ ಮಾಡುವ ಮೂಲಕ ಸದೃಢ ಸಮಾಜ ನಿರ್ಮಿಸಬೇಕಿದೆ ಎಂದರು.

ತೆಗ್ಗಿನ ಮಠದ ಕಾರ್ಯದರ್ಶಿ ಟಿ.ಎಂ. ಚಂದ್ರಶೇಖರಯ್ಯ ಮಾತನಾಡಿ, ಭಾರತೀಯ ವೈದ್ಯಕೀಯ ಪದ್ಧತಿಯನ್ನು ಪಾರಂಪರಿಕವಾಗಿ ಆಚರಣೆ ಮಾಡುತ್ತಾ ಬಂದಿದ್ದು, ಸರ್ಕಾರ ಇದಕ್ಕೆ ಹೆಚ್ಚಿನ ಮಹತ್ವ ನೀಡಬೇಕಿದೆ ಎಂದು ಹೇಳಿದರು.

ಕಪತಾಗುಡ್ಡ, ಸಂಡೂರು ಕುಮಾರಸ್ವಾಮಿ ಗುಡ್ಡ, ಬಾಬಾಬುಡನ್ ಗಿರಿ ಬೆಟ್ಟಗಳಲ್ಲಿ ಗಣಿಗಾರಿಕೆಯಿಂದಾಗಿ ಔಷಧಿವುಳ್ಳ ಗಿಡ ಮರಗಳು ನಶಿಸಿ ಹೋಗುತ್ತಿವೆ. ಸರ್ಕಾರ ಈ ಬಗ್ಗೆ ಗಮನ ಹರಿಸಿ, ಔಷಧಿ ಗಿಡಗಳನ್ನು ಮುಂದಿನ ಪೀಳಿಗೆಗಾಗಿ ಸಂರಕ್ಷಿಸಬೇಕಿದೆ ಎಂದರು.

ಭಾರತದ ಮಣ್ಣಿನಲ್ಲಿ ಔಷಧಿ ಗುಣವಿದೆ. ಹಾಗಾಗಿ ಈ ನೆಲದಲ್ಲಿ ಔಷಧಿ ಗಿಡಗಳಿವೆ. ಅಂದಿನ ನಾಟಿ ವೈದ್ಯರು, ರೋಗಕ್ಕೆ ತಕ್ಕಂತೆ ನಾಟಿ ಔಷಧಿ ಹೇಗೆ ನೀಡಬೇಕು ಎಂಬುದನ್ನು ಬರೆದಿಟ್ಟಿದ್ದಾರೆ ತಿಳಿಸಿದರು. ನಾಟಿ ವೈದ್ಯೆ ಶಿವಲೀಲಾ ಮಾತನಾಡಿ, ನಾಟಿ ಔಷಧಿಗಳು ಸಮಾಜದ ಮುಖ್ಯ ವಾಹಿನಿಗೆ ಬರಬೇಕಿದೆ, ನಾಟಿ ಔಷಧಿ ಮನುಷ್ಯ ಆರೋಗ್ಯಕ್ಕೆ ಉತ್ತಮ ಎಂದರು.

ಈ ವೇಳೆ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಕೃಷ್ಣಪ್ಪ, ತಾಲ್ಲೂಕು ಅಧ್ಯಕ್ಷ ಮಹಮದ್ ಇಬ್ರಾಹಿಂ, ಕಲ್ಲಹಳ್ಳಿ ಗೋಣಿಬಸಪ್ಪ, ಸಣ್ಣಜ್ಜಯ್ಯ, ಚಿರಬಿ ವೀರಣ್ಣ, ಕಿತ್ತೂರು ಕೊಟ್ರಪ್ಪ, ಧರ್ಮಪ್ಪ, ರಿಯಾಜ್, ಕೂಡ್ಲಿಗಿಯ ಮುನಿಯಪ್ಪ, ನಾಗರಾಜ, ಹರಿಹರದ ಗಿಡ್ಡಪ್ಪ, ರಾಜಣ್ಣ, ದಾವಣಗೆರೆ ರಿಯಾಜ್, ಕೆ. ಕಲ್ಲಹಳ್ಳಿಯ ಕೆ.ಎಂ.ಗುರುಸಿದ್ದಯ್ಯ, ನಾಗನಗೌಡ, ನಿವೃತ್ತ ಶಿಕ್ಷಕ ಬಿ. ಪ್ರಕಾಶ, ನಾಗರಾಜ, ಕಾನಹಳ್ಳಿ ಈರಮ್ಮ, ಶಾಂತಮ್ಮ, ಹುಲಿಕಟ್ಟಿ ಸಿದ್ದಪ್ಪ, ಬಿ.ಆರ್.ಪಿ ಅಣ್ಣಪ್ಪ ಇದ್ದರು.

# ರಾಣೇಬೆನ್ನೂರಿನಲ್ಲಿ ಇಂದಿನಿಂದ ಜಾತ್ರೋತ್ಸವ



ನಗರದೇವತೆ ತುಂಗಾಜಲ ಚೌಡೇಶ್ವರಿ ಹಾಗೂ ಗಂಗಾಜಲ ಚೌಡೇಶ್ವರಿ ದೇವಿಯರ ಜಾತ್ರಾ ಮಹೋತ್ಸವವು ಇಂದಿನಿಂದ ಇದೇ ದಿನಾಂಕ 18 ಶನಿವಾರದವರೆಗೆ ವಿಜೃಂಭಣೆಯಿಂದ ನಡೆಯಲಿದೆ.

ಬೆಳಿಗ್ಗೆ 10 ಗಂಟೆಗೆ ತುಂಗಾಜಲ ಚೌಡೇಶ್ವರಿ ದೇವಿಯ ಮೆರವಣಿಗೆ ಮಾರುತಿ ನಗರದ ಊರಮನೆಯಿಂದ ಹೊರಟು, ನಗರದ ಸಂಪೂರ್ಣ ಭಕ್ತರಿಗೆ ದರ್ಶನ ಭಾಗ್ಯ ಕಲ್ಪಿಸಿ, ನಾಳೆ ದಿನಾಂಕ 14 ರ ಮಂಗಳವಾರ ಬೆಳಿಗ್ಗೆ ಜಾತ್ರಾ ಸ್ಥಳ ತುಂಗಾಜಲ ಆಲಯದಲ್ಲಿ ವಿರಾಜಮಾನಳಾಗುವಳು.

ಅದೇ ರೀತಿ ಸೋಮವಾರ ಸಂಜೆ ತಳವಾರ ಓಣಿಯ ಊರ ಮನೆಯಿಂದ ಹೊರಡುವ ಚೌಡೇಶ್ವರಿ ದೇವಿ ಸಹ ಮಂಗಳವಾರ ಬೆಳಿಗ್ಗೆ ಜಾತ್ರಾಸ್ಥಳ ತುಂಗಾಜಲದ ಆಲಯದಲ್ಲಿ ಪ್ರತಿಷ್ಠಾಪನೆಗೊಳ್ಳುವಳು.

ದಿನಾಂಕ 18 ರ ಶನಿವಾರವದರೆಗೆ ಉಡಿ ತುಂಬುವ, ಬಳೆ ಇಡಿಸುವ, ಹರಕೆ ಸಲ್ಲಿಸುವ, ಓಕುಳಿ ಮುಂತಾದ ಧಾರ್ಮಿಕ ಕಾರ್ಯಕ್ರಮಗಳು ಎರಡೂ ದೇವಾಲಯಗಳಲ್ಲಿ ನಡೆಯಲಿದ್ದು, ಇಬ್ಬರು ದೇವತೆಯರು ಶನಿವಾರದಂದು ಮರಳಿ ಊರ ಮನೆಗಳಿಗೆ ಆಗಮಿಸುವರು.

ದೇವಿಯರಿಗೆ ಮಂಗಳವಾರ ಸಸ್ಯಹಾರಿ ಎಡೆ, ಬುಧವಾರ ಮಾಂಸಾಹಾರದ ಎಡೆ ಕೊಡುವ ಪದ್ದತಿ ಭಕ್ತರಿಂದ ನಡೆದಿರುತ್ತದೆ.

# ಬನದ ಹುಣ್ಣಿಮೆ : ನಗರದಲ್ಲಿ ಇಂದು ಸಾಮೂಹಿಕ ಶ್ರೀ ಗಾಯತ್ರಿ ಪೂಜೆ



ನಗರದ ಶ್ರೀ ಗಾಯತ್ರಿ ಪರಿವಾರದಿಂದ ಬನದ ಹುಣ್ಣಿಮೆ ಅಂಗವಾಗಿ ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರ ಮಠದಲ್ಲಿ ಇಂದು ಸಾಮೂಹಿಕ ಶ್ರೀ ಗಾಯತ್ರಿ ಪೂಜೆ, ಉಪಾಸನೆ ನಡೆಯಲಿದೆ ಎಂದು ಶ್ರೀ ಗಾಯತ್ರಿ ಪರಿವಾರದ ಅಧ್ಯಕ್ಷ ಡಾ. ರಮೇಶ್ ಪಟೇಲ್ ತಿಳಿಸಿದ್ದಾರೆ.

ಪರಿವಾರದ ಸಂಚಾಲಕರಾದ ವಿ. ವೀರಭದ್ರಪ್ಪ ಮತ್ತು ಕುಟುಂಬದವರು ಈ ಬಾರಿಯ ಪೂಜಾ ಸೇವಾಕರ್ತರಾಗಿದ್ದಾರೆ ಎಂದು ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

# ಚಾಲಕರ ದಿನವನ್ನಾಗಿ ಘೋಷಿಸಲು ಒತ್ತಾಯ

ದಾವಣಗೆರೆ, ಜ.12- ನಾಡಿನ ಚಾಲಕರ ಪರವಾಗಿ ಚಾಲಕರ ನಿಗಮ ಸ್ಥಾಪಿಸುವಂತೆ ಮನವಿ ಮಾಡಿದ್ದ ಕರ್ನಾಟಕ ಚಾಲಕರ ಒಕ್ಕೂಟದ ಮನವಿಗೆ ಸ್ಪಂದಿಸಿದ ಸರ್ಕಾರ, ನೂತನ ನಿಗಮ ಮಂಡಳಿಗೆ ಮುಂದಿನ ಬಜೆಟ್‌ನಲ್ಲಿ ಭರಪೂರ ಅನುದಾನ ನೀಡಬೇಕೆಂದು ಕರ್ನಾಟಕ ಚಾಲಕರ ಒಕ್ಕೂಟ ಸರ್ಕಾರಕ್ಕೆ ಒತ್ತಾಯಿಸಿದೆ. ನಾಡಿನ ಹಾಗೂ ದೇಶದ ನರನಾಡಿಯಂತಿರುವ ಚಾಲಕರ ಹಿತ ಕಾಪಾಡುವ ನಿಟ್ಟಿನಲ್ಲಿ 'ಚಾಲಕರ ದಿನ'ವನ್ನು ಸರ್ಕಾರ ಘೋಷಿಸಬೇಕು ಎಂದು ಸರ್ಕಾರಕ್ಕೆ ಒತ್ತಾಯಿಸಿದೆ. ಜಿಲ್ಲಾ ಘಟಕದ ವತಿಯಿಂದ ಚಾಲಕರ ಸದಸ್ಯತ್ವ ಅಭಿಯಾನ ಆರಂಭವಾಗಿದ್ದು, ಸದಸ್ಯತ್ವಕ್ಕಾಗಿ 94830 88828, 99022 58771, 99006 38409 ಸಂಪರ್ಕಿಸಲು ತಿಳಿಸಿದೆ.

# ಮಾಕನೂರು ಮಲ್ಲೇಶಪ್ಪ ಶಿಕ್ಷಣ ಕಾಲೇಜಿಗೆ ಶೇ. 100 ಫಲಿತಾಂಶ

ದಾವಣಗೆರೆ, ಜ. 12- ದಾವಣಗೆರೆ ವಿಶ್ವವಿದ್ಯಾನಿಲಯದ 2022-24 ನೇ ಸಾಲಿನ ಡಿಸೆಂಬರ್ ತಿಂಗಳಲ್ಲಿ ನಡೆದ ಬಿ.ಇಡಿ ನಾಲ್ಕನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ನಗರದ ಮಾಕನೂರು ಮಲ್ಲೇಶಪ್ಪ ಶಿಕ್ಷಣ ಮಹಾವಿದ್ಯಾಲಯಕ್ಕೆ ಶೇ. 100 ರಷ್ಟು ಫಲಿತಾಂಶ ಬಂದಿದೆ. ಪರೀಕ್ಷೆಯಲ್ಲಿ ಎಸ್.ಎ. ಕಾವ್ಯ ಸಿಜಿಪಿಎ 8.92, ಐಶ್ವರ್ಯ ಸಿಜಿಪಿಎ 8.80, ಕಾವ್ಯ ಬಸವನಗೌಡ ಪಾಟೀಲ್ ಸಿಜಿಪಿಎ 8.80 ಅಂಕಗಳನ್ನು ಪಡೆದಿದ್ದಾರೆ. ವಿದ್ಯಾರ್ಥಿಗಳನ್ನು ಡಾ. ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ, ಪ್ರಾಚಾರ್ಯ ಡಾ.ಕೆ.ಟಿ. ನಾಗರಾಜನಾಯ್ಕ ಅಭಿನಂದಿಸಿದ್ದಾರೆ.

# ಬಾಲ್ಯದಲ್ಲಿ ಕಲಿತ ಸಂಸ್ಕಾರ ಜೀವನ ಪೂರ್ತಿ ಜೊತೆಗಿರುತ್ತದೆ

## ಎಲೆಬೇತೂರು ತರಳಬಾಳು ಶಾಲೆಯ ವಿದ್ಯಾರ್ಥಿ ಸಂಘದ ಕಾರ್ಯಕ್ರಮದಲ್ಲಿ ಸಲಹಾ ಸಮಿತಿ ಅಧ್ಯಕ್ಷ ಎಂ.ಬಸವರಾಜಪ್ಪ

ಎಲೆಬೇತೂರು, ಜ. 12 ಬಾಲ್ಯದಲ್ಲಿ ಕಲಿತ ಸಂಸ್ಕಾರಗಳು ಜೀವನ ಪೂರ್ತಿ ಜೊತೆಯಾಗಿ ಬರುತ್ತವೆ. ಒಳ್ಳೆಯ ಸಂಸ್ಕಾರಗಳನ್ನು ಕಲಿಯಲು ಶಾಲಾ ಅವಧಿ ಸುವರ್ಣ ಕಾಲ ಎಂದು ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆಯ ಸ್ಥಳಿಯ ಸಲಹಾ ಸಮಿತಿಯ ಅಧ್ಯಕ್ಷ ಎಂ.ಬಸವರಾಜಪ್ಪ ಹೇಳಿದರು.

ಇಲ್ಲಿನ ಶ್ರೀ ತರಳಬಾಳು ಜಗದ್ಗುರು ವಿದ್ಯಾಸಂಸ್ಥೆಯ ಆಶ್ರಯದಲ್ಲಿ ನಡೆಯುತ್ತಿರುವ ಶ್ರೀ ಕೊಂಡಜ್ಜಿ ಬಸಪ್ಪ ಪ್ರೌಢಶಾಲೆ ಮತ್ತು ಶ್ರೀ ತರಳಬಾಳು ಆಂಗ್ಲ ಮಾಧ್ಯಮ ನರ್ಸರಿ, ಹಿರಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ 2024-25 ನೇಯ ಸಾಲಿನ ವಿದ್ಯಾರ್ಥಿ ಸಂಘದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳು ವ್ಯಕ್ತಿತ್ವ ನಿರ್ಮಾಣಕ್ಕೆ ಪೂರಕವಾಗಿವೆ. ಈ ಹಿನ್ನೆಲೆಯಲ್ಲಿ ಪ್ರತಿವರ್ಷ ಶಾಲಾ ವಾರ್ಷಿಕೋತ್ಸವ ವನ್ನು ಆಯೋಜಿಸುತ್ತಾ ಬರಲಾಗಿದೆ ಎಂದು ಅವರು ತಿಳಿಸಿದರು. ಶಾಲೆಯ ಹಳೆಯ ವಿದ್ಯಾರ್ಥಿಗಳು ಓದಿದ ಶಾಲೆಯನ್ನು ಮರೆಯದೇ ಶಾಲೆಗೆ 55 ಇಂಚಿನ ಟಿವಿ ಕೊಡಿಸಿರುವುದು ನಿಜಕ್ಕೂ ಅಭಿನಂದನೀಯವಾದುದು. ಇದೇ ರೀತಿ ಇನ್ನುಳಿದ ವಿದ್ಯಾರ್ಥಿಗಳು ಶಾಲೆಯ ಅಭಿವೃದ್ಧಿಗೆ ಬೇಕಾದ ನೆರವನ್ನು ನೀಡುವ ಕೆಲಸ ಮಾಡಬೇಕು ಎಂದು ತಿಳಿಸಿದರು.

ಕಾರ್ಯಕ್ರಮ ಉದ್ಘಾಟಿಸಿದ ಶಾಲೆಯ ಉಪಾಧ್ಯಕ್ಷ ಕೆ ಜಿ ಶೇಖರಪ್ಪ ಮಾತನಾಡಿ, ವಾರ್ಷಿಕೋತ್ಸವ ಶಾಲೆಯ ವರ್ಷದ ಕಾರ್ಯಚಟುವಟಿಕೆಗಳ ಕೈಗನ್ನಡಿ ಇದ್ದಂತೆ. ವಿದ್ಯೆ ಕಲಿಯುವುದು ನೌಕರಿಗಾಗಿ ಅಲ್ಲ, ಸುಂದರ ಬದುಕಿಗಾಗಿ, ಉತ್ತಮ ಪ್ರಜೆಗಳಾಗಲು. ಶಿಕ್ಷಕರು ವಿದ್ಯಾರ್ಥಿಗಳನ್ನು ದಂಡಿಸಿದರೆ ಶಿಕ್ಷಕರನ್ನು ಮರು ಪ್ರಶ್ನಿಸಬಾರದು. ಅವರು ವಿದ್ಯಾರ್ಥಿಗಳ ಹಿತದೃಷ್ಟಿಯಿಂದಲೇ ದಂಡಿಸುತ್ತಾರೆ ಎನ್ನುವುದನ್ನು ಪೋಷಕರು ಮರೆಯಬಾರದು ಎಂದರು.

ವಿದ್ಯಾರ್ಥಿ ಸಂಘಗಳ ಸಮಾರೋಪ ಭಾಷಣ ಮಾಡಿದ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಗೌರವ ಸಲಹೆಗಾರ ಹೆಚ್. ಕೆ. ಲಿಂಗರಾಜ್ ಮಾತನಾಡಿ, ನಾನು ಕಳೆದ ಮೂವತ್ತು ವರ್ಷಗಳ ಹಿಂದೆ ಈ ಶಾಲೆಗೆ ಶಿಕ್ಷಣಾಧಿಕಾರಿಯಾಗಿ ಭೇಟಿ ನೀಡಿದ್ದೆ. ಅಂದಿನ ಶಾಲೆಗೂ ಇಂದಿನ ಶಾಲೆಗೂ ಅಜಗಜಾಂತರ ವ್ಯತ್ಯಾಸವನ್ನು ಕಾಣುತ್ತಿದ್ದೇನೆ. ದಾನಿಗಳ ತವರೂರು ಎಲೆಬೇತೂರು. ಈ ಶಾಲೆಗೆ ಸ್ಥಳ ದಾನ ಮಾಡಿದ ಕುರುವೆತ್ತಪ್ಪನವರ ಮನೆತನವನ್ನು ಕೃತಜ್ಞತೆಯಿಂದ



ನೆನಪಿಸಿಕೊಳ್ಳ ಬೇಕು. ದಾನ ಪಡೆದುಕೊಳ್ಳುವುದಕ್ಕಿಂತ ದಾನ ನೀಡುವುದು ಹೆಚ್ಚು ಸಂತೋಷದಾಯಕವಾದುದು ಎಂದರು.

ತರಳಬಾಳು ಶಾಲೆಯ ಸ್ಥಳೀಯ ಸಲಹಾ ಸಮಿತಿ ಅಧ್ಯಕ್ಷ ಹೆಚ್. ಬಸವರಾಜಪ್ಪ, ತಿಪ್ಪಗೊಂಡನಹಳ್ಳಿ ಪ್ರಗತಿಪರ ರೈತರಾದ ಸುಮ ಯತೀಶ್, ದಾಸೋಹಿಗಳಾದ ರಾಂಪುರದ ಆರ್ ಜಿ ನರೇಂದ್ರ, ಕಲ್ಪನಹಳ್ಳಿಯ ಡಾ. ಎಂ.ಕೆ. ನಾಗ ಭೂಷಣ್ ಮತ್ತು ಎಲೆಬೇತೂರು ಗ್ರಾ.ಪಂ. ಅಧ್ಯಕ್ಷರಾದ ಕೆ.ಎಂ. ರೇವಣಸಿದ್ಧಪ್ಪ ಅವರುಗಳನ್ನು ಅಭಿನಂದಿಸಲಾಯಿತು.

ದಾಸೋಹಿಗಳ ಪರವಾಗಿ ಡಾ. ನಾಗಭೂಷಣ್, ವಿದ್ಯಾರ್ಥಿಗಳ ಮಿತ್ರಕೂಟದ ಪರವಾಗಿ ಹಿರಿಯ ವಿದ್ಯಾರ್ಥಿ ಮಂಜುನಾಥ್ ಮಾತನಾಡಿದರು.

ಕಳೆದ ಸಾಲಿನ ಎಸ್ ಎಸ್ ಎಲ್ ಸಿ ಪರೀಕ್ಷೆ ಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಾದ ಡಿ ಎಸ್ ಸುಪ್ರಭೆ, (ಕನ್ನಡ ಮಾಧ್ಯಮ) ಶೇ. 98.5 (ದಾವಣಗೆರೆ ಜಿಲ್ಲೆಯ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಪ್ರಥಮ), ಟಿ ವಿದ್ಯಾ, (ಕನ್ನಡ ಮಾಧ್ಯಮ) ಶೇ. 88., ಭೂಮಿಕಾ ಎನ್ ಗದುಗೇರ (ಕನ್ನಡ ಮಾಧ್ಯಮ) ಶೇ. 86. ಮತ್ತು ಕೆ ಆರ್ ಅನನ್ಯ, (ಆಂಗ್ಲ ಮಾಧ್ಯಮ) 93.60, ಹೆಚ್ ಪಿ ಆದರ್ಶ, (ಆಂಗ್ಲ ಮಾಧ್ಯಮ) 88.32, ಟಿ ನಿತಿನ್, (ಆಂಗ್ಲ ಮಾಧ್ಯಮ) 80.96 ಇವರನ್ನು ಅಭಿನಂದಿಸಲಾಯಿತು.

ವೇದಿಕೆಯ ಮೇಲೆ ಉಭಯ ಶಾಲಾ ಸ್ಥಳಿಯ ಸಲಹಾ ಸಮಿತಿಯ ಬಿ. ವಿರೂಪಾಕ್ಷಪ್ಪ, ಎಸ್. ಎಂ.ಮರುಳಸಿದ್ಧಪ್ಪ, ಕೆ.ಎನ್ ಸೋಮಶೇಖರಪ್ಪ, ಬಿ. ಪ್ರಭು, ಮರಡಿ ಅಶೋಕ್ ಕುಮಾರ್, ಕೆ.ಜಿ ಚನ್ನಪ್ಪ, ಡಾ. ಎಂ. ಕೆ ನಾಗಭೂಷಣ್, ಹಳ್ಳಿಕೇರಿ ರಾಜಣ್ಣ, ಹೆಚ್. ಎಸ್. ಚೇತನ್ ಕುಮಾರ್, ಮಹೇಶ್ ಎಲಿಗಾರ್, ಮಾಗೋಡು ಕೊಟ್ರೇಶ್, ಷಡಕ್ಷರಪ್ಪ ಬೇತೂರು, ಮಠದ ಬಸವರಾಜಯ್ಯ, ಆಶಾ ನಾರಪ್ಪ, ನೀಲವಾಡಿ ಷಣ್ಮುಖಪ್ಪ, ಡಿ.ಎಸ್ ಜಯಪ್ರಕಾಶ್, ಆರ್. ಜಿ ನರೇಂದ್ರ, ಎಲೆಬೇತೂರು ಗ್ರಾಮಪಂಚಾಯಿತಿ ಅಧ್ಯಕ್ಷ ಕೆ. ಎಂ. ರೇವಣಸಿದ್ಧಪ್ಪ ಮೊದಲಾದವರು ಉಪಸ್ಥಿತರಿದ್ದರು.

ಶಿಕ್ಷಕಿ ಉಷಾ ವಚನ ಗೀತೆ ಹಾಡಿದರು. ಮುಖ್ಯೋಪಾಧ್ಯಾಯಿನಿ ಎಂ.ಬಿ. ಪ್ರೇಮ ಸ್ವಾಗತಿ ಸಿದರು. ಪ್ರಾಸ್ತಾವಿಕವಾಗಿ ಅಧ್ಯಾಪಕ ಡಾ. ಎಸ್. ಓ. ಷಣ್ಮುಖಪ್ಪ ಮಾತನಾಡಿದರು. ವಿದ್ಯಾರ್ಥಿಗಳಾದ ಆರ್. ಆಶಾ ಮತ್ತು ಬಿ. ಸಿಂಧು ವಾಚಿಸಿದರು. ಅಧ್ಯಾಪಕ ಹೆಚ್. ಎಸ್. ದ್ಯಾಮೇಶ್, ಎಸ್. ಆರ್. ನಾಗರಾಜ್ ಮತ್ತು ಚಿನ್ಮಯಿ ನಿರೂಪಿಸಿದರು. ಮುಖ್ಯ ಶಿಕ್ಷಕಿ ಬಿ. ಎಂ. ಶಶಿಕಲಾ ವಂದಿಸಿದರು.

# ಕಾಂಗ್ರೆಸ್ ಸರ್ಕಾರ ಬಡವರು, ದೀನ ದಲಿತರು, ಹಿಂದುಳಿದವರ ಧ್ವನಿಯಾಗಿ ಕೆಲಸ ಮಾಡಲಿದೆ : ಶಾಸಕ ಪ್ರಕಾಶ ಕೋಳಿವಾಡ



ರಾಣೇಬೆನ್ನೂರು, ಜ. 12- ಕಾಂಗ್ರೆಸ್ ಸರ್ಕಾರ ಬಡವರು, ದೀನ ದಲಿತರು, ಹಿಂದುಳಿದವರ ಧ್ವನಿಯಾಗಿ ಕೆಲಸ ಮಾಡಲಿದೆ ಎಂದು ಶಾಸಕ ಪ್ರಕಾಶ ಕೋಳಿವಾಡ ಹೇಳಿದರು.

ತಾಲ್ಲೂಕಿನ ಚನ್ನಾಪುರ, ಉದಗಟ್ಟಿ, ಹೀಲದಹಳ್ಳಿ, ಹೊಳೆ ಆನ್ವೇರಿ ಸೇರಿದಂತೆ ಅನೇಕ ವಿವಿಧ ಕಾಮಗಾರಿಗಳಿಗೆ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷದ ತತ್ವ, ಸಿದ್ಧಾಂತಗಳಿಗೆ ಜನರು ಬೆಂಬಲಿಸಿದ್ದಾರೆ. ಇದನ್ನು ಸಹಿಸದ ವಿಪಕ್ಷಗಳು ಗ್ಯಾರಂಟಿ ಯೋಜನೆಗಳ ಬಗ್ಗೆ ಇಲ್ಲ ಸಲ್ಲದ ಆಪಾದನೆ ಮಾಡುತ್ತಿದ್ದು, ರಾಜ್ಯದಲ್ಲಿ ನಡೆಯುತ್ತಿರುವ ಅನೇಕ ಅಭಿವೃದ್ಧಿ ಕಾರ್ಯಗಳೇ ಇದಕ್ಕೆ ಉತ್ತರ ಎಂದರು.

2023-24 ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅನುಷ್ಠಾನ ಮಾಡುತ್ತಿರುವ ಪ್ರಗತಿ ಕಾಲೋನಿ ಯೋಜನೆ ಅಡಿ ತಾಲೂಕಿನ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲಾಗುವುದು ಎಂದರು.

ಗ್ರಾ.ಪಂ ಅಧ್ಯಕ್ಷೆ ಚಂದ್ರಕಲಾ ನಂದ್ಯಾಲ, ಉಪಾಧ್ಯಕ್ಷ ಗುಡ್ಡಪ್ಪ ಕರೂರ, ಸಮಾಜ ಕಲ್ಯಾಣ ಅಧಿಕಾರಿ ಮಾಲತೇಶ ಬಾರ್ಕಿ, ವಾಗೀಶ ಬಿ.ಬಿ ಶೆಟ್ಟರ್, ಪಿಡಿಓ ಹರೀಶ ಗೊಗ್ಗದ, ಮುಖಂಡರಾದ ಬಸಪ್ಪ ಶಿಡಗನಾಳ, ಕರಿಯಪ್ಪ ಆರೇರ, ಶಿಲ್ಪಾ ನಾಯಕ, ಹನುಮಂತಪ್ಪ ನಾಯಕ, ಜಯಪ್ಪ ಸೊಲಬಣ್ಣನವರ ಸೇರಿದಂತೆ ಅನೇಕರು ಇದ್ದರು.

# ಚಿತ್ರದುರ್ಗದಲ್ಲಿ ಬ್ರಹ್ಮೋತ್ಸವ

ಮೆದೇಹಳ್ಳಿ ರಸ್ತೆಯಲ್ಲಿ ರುವ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ 25ನೇ ವರ್ಷದ 60 ದಿನಗಳ ಬ್ರಹ್ಮೋತ್ಸವವು ಇಂದು ನಡೆಯಲಿದೆ. ಮಾಲಾಧಾರಿ ಗಳಿಗೆ ದೇವಸ್ಥಾನದಲ್ಲಿ ಪ್ರತಿನಿತ್ಯ ಉಚಿತ ಅನ್ನದಾನ ಜರುಗಲಿದೆ.

ಇಂದು ಸಂಜೆ 6ಕ್ಕೆ ನಗರದಲ್ಲಿ ಅಯ್ಯಪ್ಪ ಸ್ವಾಮಿ ಆಭರಣ ಮೆರವಣಿಗೆ ಆಯೋಜಿಸಿದೆ. ದಿನಾಂಕ 14 ರಂದು ಮಕರ ಸಂಕ್ರಮಣದ ಅಂಗವಾಗಿ ಸ್ವಾಮಿ ಸನ್ನಿಧಿಯಲ್ಲಿ ಲಕ್ಷ ದೀಪೋತ್ಸವ ನಡೆಯಲಿದೆ.

# ಕ್ರೀಡೆಗಳಲ್ಲಿ ಭಾಗವಹಿಸಲು ಪೋಷಕರ ಪ್ರೋತ್ಸಾಹಬೇಕು



ದಾವಣಗೆರೆ, ಜ.12- ಮಕ್ಕಳನ್ನು ಅಂಕ ಗಳನ್ನು ಪಡೆಯಲು ಪ್ರೋತ್ಸಾಹಿಸುವುದರ ಜೊತೆಗೆ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆ ಗಳಲ್ಲಿ ಭಾಗವಹಿಸುವಂತೆ ಶಿಕ್ಷಕರು - ಪೋಷಕರು ಪ್ರೋತ್ಸಾಹಿಸಬೇಕು ಎಂದು ಪೊಲೀಸ್ ಇನ್ಸ್‌ಪೆಕ್ಟರ್ ವೈ.ಎಸ್. ಶಿಲ್ಪ ತಿಳಿಸಿದರು.

ನಗರದ ಮಾಗನೂರು ಬಸಪ್ಪ ಶಾಲಾ ಸಮುಚ್ಚಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಸಾಂಸ್ಕೃತಿಕ ಹಾಗೂ ಕ್ರೀಡಾಕೂಟದ ಬಹುಮಾನ ವಿತರಣಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿ, ಅವರು ಮಾತನಾಡಿದರು.

ಮಕ್ಕಳು ಮೊಬೈಲ್ ಗೀಳನ್ನು ಬಿಟ್ಟು ಓದಿನ ಕಡೆಗೆ ಗಮನ ಹರಿಸಬೇಕು ಎಂದು ಕಿವಿಮಾತು ಹೇಳಿದ ಅವರು, ಮಕ್ಕಳಲ್ಲಿ ಸಾಮಾಜಿಕ ಹಾಗೂ ನೈತಿಕ ಮೌಲ್ಯಗಳನ್ನು ಬೆಳೆಸಿದಾಗ ಶಿಕ್ಷಣಕ್ಕೆ ಒಂದು ಅರ್ಥ ಬರುವುದು. ಹಾಗಾಗಿ ಹೆಚ್ಚಿನ ಜವಾಬ್ದಾರಿ ಶಿಕ್ಷಕರ ಮೇಲಿರುತ್ತದೆ ಎಂದರು.

> **ಮಾಗನೂರು ಶಾಲೆ ಕ್ರೀಡಾಕೂಟದಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ವೈ.ಎಸ್. ಶಿಲ್ಪ**

ಶಾಲೆಯ ಗೌರವ ಕಾರ್ಯದರ್ಶಿ ಎಂ.ಬಿ. ಸಂಗಮೇಶ್ವರ ಗೌಡರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ವಿದ್ಯಾರ್ಥಿಗಳು ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಿ, ಬಹುಮಾನಗಳನ್ನು ಪಡೆದುಕೊಳ್ಳ ಬೇಕು. ಜೊತೆಗೆ ಸಮಾಜದಲ್ಲಿ ಉತ್ತಮ ನಾಗರಿಕರಾಗಿ ಬದುಕಬೇಕೆಂದು ಕರೆ ನೀಡಿದರು.

ದೈಹಿಕ ಶಿಕ್ಷಕ ಎಂ ಎಸ್. ಕರಿಬಸವ ಸ್ವಾಮಿ ಕ್ರೀಡಾ ವಾರ್ಷಿಕ ವರದಿ ಓದಿದರು. ಸಂಸ್ಥೆಯ ಹಳೆಯ ವಿದ್ಯಾರ್ಥಿಗಳಾದ ತಾಂತ್ರಿಕ ತಜ್ಞ ಬೆಂಗಳೂರಿನ ಸದ್ವಿಕಾಸ್ ಕೆ.ಎ ಮತ್ತು ಬೆಂಗಳೂರು ಮೆಡಿಕಲ್ ಕಾಲೇಜಿನ ಡಾ. ರಾಕೇಶ್ ಜಿ.ವಿ ಅವರು ಅತಿಥಿಗಳಾಗಿ ಆಗಮಿಸಿದ್ದರು.

ಸಂಸ್ಥೆಯ ಆಡಳಿತಾಧಿಕಾರಿ ಎಸ್.ಆರ್. ಶಿರಗಂಬಿ, ಶಾಲಾ ಮುಖ್ಯಸ್ಥರಾದ ಎ.ಎಸ್. ಕುಸುಮ, ಎಸ್.ಮಂಜುನಾಥ್ ಹಾಗೂ ಶಿಕ್ಷಕ ವೃಂದದವರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಾದ ಕೆ.ಎ, ಮಾನ್ವಿಸಾಗರ್, ತೇಜಸ್ವಿನಿ ಟಿ. ಸ್ವಾಮಿ, ಡಿ. ಜೀವಿತಾ, ಎ.ಬಿ ತ್ರೈಯಂಬಿಕೇಶ್ವರಿ, ಎಂ.ಧನುಷ್ ರೆಡ್ಡಿ, ಯು.ಪಿ ಯುವರಾಜ್ ಇವರು ಗಳು ವಿವಿಧ ಸ್ಥರಗಳಲ್ಲಿ ಕಾರ್ಯ ನಿರ್ವಹಿಸಿದರು.

## 19ನೇ ವರ್ಷದ ಪುಣ್ಯಸ್ಮರಣೆ



**ಎಸ್.ಎಸ್. ಮಂಜುನಾಥ್ M.A (ಕಬಡ್ಡಿ ಮಂಜು)**

(ಇನ್ಸ್‌ಪೆಕ್ಟರ್ ಆಫ್ ಸೆಂಟ್ರಲ್ ಎಕ್ಸೈಜ್ & ಕಸ್ಟಮ್ಸ್) ದಾವಣಗೆರೆ. (ನಿಧನ 13.01.2006)

ನೀವು ನಮ್ಮನ್ನಗಲಿ 19 ವರ್ಷಗಳಾದರೂ, ನಿಮ್ಮ ನೆನಪು ನಮ್ಮ ಹೃದಯದಲ್ಲಿ ಸದಾ ಹಸಿರಾಗಿದೆ. ನಿಮ್ಮ ಸ್ಮರಣೆಯೇ ನಮಗೆ ದಾರಿ ದೀಪ...

ಶ್ರೀಮತಿ ಶೈಲಜಾ ಮಂಜುನಾಥ್ ಗೋಪನಾಳು, ಮಗ-ನೂತನ್ ಕುಮಾರ್
ಮೋಹನ್‌ರಾಜು ಜಿ.ಎಸ್. ಮತ್ತು ಸಹೋದರರು, ಸಹೋದರಿಯರು, ಶ್ಯಾಮೇನಹಳ್ಳಿ ಬಂಧು-ಮಿತ್ರರು, ಗೋಪನಾಳು,
ಟಿ. ದ್ಯಾಮಪ್ಪ ಮತ್ತು ಮಕ್ಕಳು, ಹೂವಿನಹಡಗಲಿ.
ಬಿ.ಇ. ಶಿವಕುಮಾರ್ ನಿವೃತ್ತ E.E., ಮತ್ತು ಸಹೋದರರು, ಮರವಂಜಿ.
ಸೃಷ್ಟಿ ಕಬಡ್ಡಿ ಅಕಾಡೆಮಿ ಸದಸ್ಯರು, ಮಿತ್ರರು ಮತ್ತು ಕ್ರೀಡಾ ಪಟುಗಳು, ದಾವಣಗೆರೆ.

## ಹನ್ನೆರಡನೇ ವರ್ಷದ ಪುಣ್ಯಸ್ಮರಣೆ



**ಡಿ.ಎಲ್. ಲೆಕ್ಕದಪ್ಪ**

ನಿಧನ : 13.01.2013

ನೀವು ನಮ್ಮನ್ನಗಲಿ ಇಂದಿಗೆ 12 ವರ್ಷಗಳಾದವು. ನಿಮ್ಮ ಆದರ್ಶ ಮತ್ತು ನಡೆ ನುಡಿಯೇ ನಮಗೆ ದಾರಿ ದೀಪವಾಗಿವೆ. ಸದಾ ನಿಮ್ಮ ಸ್ಮರಣೆಯಲ್ಲಿರುವ...

ಇಲ್ಲಿಯ ತನಕ ಹಲವಾರು ಪುಸ್ತಕಗಳ ಓದಿದೆ, ಊರೂರುಗಳ ಸುತ್ತಿದೆ, ಏನೂ ಕಲಿಯಲಿಕ್ಕೆ ಆಗಲಿಲ್ಲಾ.

ಹತ್ತಿರದಿಂದ ಕೆಲವು ಮುಖಗಳ ನೋಡಿದೆ, ತಿಳಿದೆ, ನೂರಾರು ಪಾಠ ಕಲಿತೆ, ಅರಿತುಕೊಂಡೆ ಪರರ‍್ಯಾರು, ನಮ್ಮವರ‍್ಯಾರು?...

- ದಾಲೆಬ

ಪುತ್ರ : ಬಸವರಾಜೇಂದ್ರ ಲೆಕ್ಕದ
ಸೊಸೆ : ಸುಧಾ ಬಸವರಾಜೇಂದ್ರ
ಮೊಮ್ಮಕ್ಕಳಾದ : ಚಿನ್ಮಯ್ ಬಿ. ಲೆಕ್ಕದ್, ಚಿಂತನ ಬಿ. ಲೆಕ್ಕದ್,
99720 89722, 91132 03775, ದಾವಣಗೆರೆ.

## ಕೋಲ್ಕುಂಟೆ ಗ್ರಾಮದ ಬೆಳಕೆರೆ ಸಿದ್ದಮ್ಮ ನಿಧನ



ದಾವಣಗೆರೆ ತಾಲ್ಲೂಕು ಕೋಲ್ಕುಂಟೆ ಗ್ರಾಮದ ವಾಸಿ ಬೆಳಕೆರೆ ಸಿದ್ದಮ್ಮ (93) ಇವರು ದಿನಾಂಕ : 12.01.2025ರ ಭಾನುವಾರ ರಾತ್ರಿ 7 ಗಂಟೆಗೆ ನಿಧನರಾದರು. ನಾಲ್ವರು ಪುತ್ರರು, ನಾಲ್ವರು ಪುತ್ರಿಯರು ಹಾಗೂ ಅಪಾರ ಬಂಧುಗಳನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 13.01.2025ರ ಸೋಮವಾರ ಮಧ್ಯಾಹ್ನ 1 ಗಂಟೆಗೆ ಮೃತರ ಸ್ವಗ್ರಾಮದ ಸ್ವಂತ ಜಮೀನಿನಲ್ಲಿ ನೆರವೇರಿಸಲಾಗುವುದು.

# ನಗರದಲ್ಲಿಂದು ವಿನಾಯಕ ಸ್ಕೂಲ್ ವಾರ್ಷಿಕೋತ್ಸವ

ಕೊಂಡಜ್ಜಿ ರಸ್ತೆಯ ವಿನಾಯಕ ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವ ಕಾರ್ಯಕ್ರಮವು ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಇಂದು ಬೆಳಿಗ್ಗೆ 10 ಗಂಟೆಗೆ ನಡೆಯಲಿದೆ. ಶಾಲಾ ಕಾರ್ಯದರ್ಶಿ ಡಾ. ವೀರೇಶ್ ಬಿ. ಬಿರಾದಾರ್ ಅಧ್ಯಕ್ಷತೆ ವಹಿಸಲಿದ್ದಾರೆ.

ಸೇಂಟ್ ಜಾನ್ಸ್ ಕಾನ್ವೆಂಟ್ ಕಾರ್ಯದರ್ಶಿ ಉಮಾಪತಯ್ಯ, ಎಜು ಏಷ್ಯಾ ಕಾರ್ಯದರ್ಶಿ ಎಂ.ಎನ್. ಸಂತೋಷ್ ಕುಮಾರ್, ಅತ್ತಿಗೆರೆಯ ನಿರ್ಮಲಾ ಕೇಸರಿ ವಿದ್ಯಾಸಂಸ್ಥೆ ಕಾರ್ಯದರ್ಶಿ ಎ.ಎನ್. ಪ್ರಸನ್ನ ಕುಮಾರ್, ನಂದಗೋಕುಲ ಸ್ಕೂಲ್ ಕಾರ್ಯದರ್ಶಿ ಬಿ.ಅನುಸೂಯ, ಆದಿಕೇಶವ ಅಕಾಡೆಮಿ ಸಿಇಓ ಜಿ.ಡಿ. ಜ್ಯೋತಿಕುಮಾರ್, ಯರಗುಂಟೆ ಕ್ಲಸ್ಟರ್ ಸಿಆರ್‌ಪಿ ಸೈಫುಲ್ಲಾ, ವಕೀಲರಾದ ಎಸ್.ಸಿ. ಚನ್ನಮಲ್ಲೇಶ್, ಪೊಲೀಸ್ ಇನ್ಸ್‌ಪೆಕ್ಟರ್ ರವಿನಾಯ್ಕ್, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ ಸಮನ್ವಯಾಧಿಕಾರಿ ಡಾ. ಕೆ. ಬಸವರಾಜಪ್ಪ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

# ರಾಷ್ಟ್ರೀಯ ಮಾರ್ಷಲ್ ಆರ್ಟ್ಸ್ ಸ್ಪರ್ಧೆ ಪ್ರತೀಕ್‌ಗೆ ಬಂಗಾರದ ಪದಕ



ದಾವಣಗೆರೆ, ಜ. 12- ಅಸ್ಸಾಂನ ಗುವಹಾಟಿಯಲ್ಲಿ ನಡೆದ 6ನೇ ವಾರ್ಷಿಕ ರಾಷ್ಟ್ರೀಯ ಮಾರ್ಷಲ್ ಆರ್ಟ್ಸ್ ಸ್ಪರ್ಧೆಯಲ್ಲಿ ಕರ್ನಾಟಕ ರಾಜ್ಯದಿಂದ ಜಿಎಂ ವಿಶ್ವವಿದ್ಯಾಲಯದ ಎಂಬಿಎ ವಿಭಾಗದ ದ್ವಿತೀಯ ವರ್ಷದ ವಿದ್ಯಾರ್ಥಿ ಪ್ರತೀಕ್ ಎಸ್.ವಿ. ಪ್ರತಿನಿಧಿಸಿ ಮೋಯ್ ಥೈ ಕಿಕ್ ಬಾಕ್ಸಿಂಗ್ 69 ಕೆ.ಜಿ. ಒಳಗಿನ ವಿಭಾಗದಲ್ಲಿ ಬಂಗಾರದ ಪದಕ ಪಡೆದಿದ್ದಾರೆ.

## ಮುರುಘಾಮಠದಲ್ಲಿ ಇಂದು ಶಿವಶರಣ ಮೇದಾರ ಕೇತಯ್ಯನವರ ಜಯಂತಿ



ಚಿತ್ರದುರ್ಗ ಬೃಹನ್ಮಠದ ವತಿಯಿಂದ ಶಿವಶರಣ ಮೇದಾರ ಕೇತಯ್ಯನವರ ಜಯಂತಿಯನ್ನು ಇಂದು ಬೆಳಿಗ್ಗೆ 8.30 ಕ್ಕೆ ಶ್ರೀಮಠದ ಮುರಗಿ ಶಾಂತವೀರ ಮುರುಘರಾಜೇಂದ್ರ ಮಹಾಸ್ವಾಮಿಗಳವರ ಲೀಲಾ ವಿಶ್ರಾಂತಿ ತಾಣದ ಆವರಣದಲ್ಲಿ ಆಯೋಜಿಸಲಾಗಿದೆ.

ಆಡಳಿತ ಮಂಡಳಿಯ ಅಧ್ಯಕ್ಷ ಶಿವಯೋಗಿ. ಸಿ. ಕಳಸದ ಅವರು ಅಧ್ಯಕ್ಷತೆ ವಹಿಸಲಿದ್ದು, ಸಾನ್ನಿಧ್ಯವನ್ನು ಸದಸ್ಯರಾದ ಡಾ. ಬಸವಕುಮಾರ ಸ್ವಾಮೀಜಿ, ಸಮ್ಮುಖವನ್ನು ಮೇದಾರ ಗುರುಪೀಠದ ಶ್ರೀ ಇಮ್ಮಡಿ ಬಸವ ಮೇದಾರ ಕೇತೇಶ್ವರ ಸ್ವಾಮೀಜಿ ವಹಿಸಲಿದ್ದಾರೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

## ಅಂಬಿಗರ ಚೌಡಯ್ಯ ಜಯಂತಿ ನಗರದಲ್ಲಿ ಇಂದು ಪೂರ್ವಭಾವಿ ಸಭೆ

ದಾವಣಗೆರೆ ಜಿಲ್ಲಾ ಗಂಗಾಮತಸ್ಥರ (ಬೆಸ್ತರ) ಸಂಘದಿಂದ ಇದೇ ದಿನಾಂಕ 21 ರಂದು ನಡೆಯಲಿರುವ ನಿಜ ಶರಣ ಅಂಬಿಗರ ಚೌಡಯ್ಯ ಜಯಂತ್ಯುತ್ಸವದ ಪೂರ್ವಭಾವಿ ಸಭೆ ಇಂದು ಸಂಜೆ 4 ಗಂಟೆಗೆ ನಗರದ ಜಿಲ್ಲಾಡಳಿತ ಭವನದಲ್ಲಿ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಅಧ್ಯಕ್ಷತೆಯಲ್ಲಿ ನಡೆಯಲಿದೆ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಜೆ. ಉಮೇಶ್ ತಿಳಿಸಿದ್ದಾರೆ.

# ಮಲೇಬೆನ್ನೂರು ವೀರಭದ್ರೇಶ್ವರ ದೇವಸ್ಥಾನದಲ್ಲಿ ನಾಳೆ ವಿಶೇಷ ಸಂಕ್ರಾಂತಿ

ಮಲೇಬೆನ್ನೂರು, ಜ.12- ಪಟ್ಟಣದ ಹೊರವಲಯದಲ್ಲಿರುವ ಶ್ರೀ ಭದ್ರಕಾಳಿ ಸಮೇತ ವೀರಭದ್ರೇಶ್ವರ ದೇವಸ್ಥಾನದಲ್ಲಿ ನಾಡಿದ್ದು ದಿನಾಂಕ 14 ರ ಮಂಗಳವಾರ ಮಕರ ಸಂಕ್ರಾಂತಿಯ ಪ್ರಯುಕ್ತ ವಿಶೇಷ ಪೂಜಾ ಕಾರ್ಯಕ್ರಮಗಳನ್ನು ಈ ವರ್ಷವೂ ಹಮ್ಮಿಕೊಳ್ಳಲಾಗಿದೆ ಎಂದು ದೇವಸ್ಥಾನ ಟ್ರಸ್ಟ್ ಕಮಿಟಿ ಉಪಾಧ್ಯಕ್ಷ ಬಿ.ಚಿದಾನಂದಪ್ಪ ತಿಳಿಸಿದರು.

ಗುರುವಾರ ದೇವಸ್ಥಾನದಲ್ಲಿ ಕರೆದಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದಿನಾಂಕ 14ರ ಮಂಗಳವಾರ ಪ್ರಾತಃ ಕಾಲದಲ್ಲಿ ಎಲ್ಲಾ ದೇವರುಗಳಿಗೆ ಅಭಿಷೇಕ, ಬೆಳಿಗ್ಗೆ 8 ರಿಂದ 10.30 ರವರೆಗೆ ಆದಿತ್ಯ ಸೂರ್ಯನಾರಾಯಣ ಹೋಮ ಪೂರ್ಣಾವತಿ ನಡೆಯಲಿದೆ ಎಂದರು.

ಬೆಳಿಗ್ಗೆ 11 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಶ್ರೀ ರವಿಶಂಕರ್ ಗುರೂಜಿ ಅವರ ಆಶ್ರಮದ ಶಿಷ್ಯರಿಂದ ಸತ್ಸಂಗ ಕಾರ್ಯಕ್ರಮ ಇರುತ್ತದೆ.

ಅಂದು ಬೆಳಿಗ್ಗೆ 9 ರಿಂದ ರಾತ್ರಿ 8 ಗಂಟೆವರೆಗೆ ಸಂಕ್ರಾಂತಿ ಹಬ್ಬದ ವಿಶೇಷ ಪ್ರಸಾದಗಳ ಅನ್ನ ಸಂತರ್ಪಣೆ ಏರ್ಪಡಿಸಲಾಗಿದ್ದು, ಸುಮಾರು 15 ರಿಂದ 20 ಸಾವಿರ



ಜನ ಭಕ್ತರು ಭಾಗವಹಿಸುವ ನಿರೀಕ್ಷೆ ಇದೆ ಎಂದು ಬಿ.ಚಿದಾನಂದಪ್ಪ ಮಾಹಿತಿ ನೀಡಿದರು.

**ಬೃಹತ್ ಆರೋಗ್ಯ ಮೇಳ, ರಕ್ತದಾನ ಶಿಬಿರ :** ಇದೇ ದಿನಾಂಕ 14ರ ಸಂಕ್ರಾಂತಿ ಹಬ್ಬದ ದಿನದಂದು ವೀರಭದ್ರೇಶ್ವರ ದೇವಸ್ಥಾನದ ಆವರಣದಲ್ಲಿ ಮಲೇಬೆನ್ನೂರು ಲಯನ್ಸ್ ಕ್ಲಬ್ ವತಿಯಿಂದ ವಿವಿಧ ಸೇವಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಲಯನ್ಸ್ ವಲಯಾಧ್ಯಕ್ಷ ಚಿಟ್ಟಕ್ಕಿ ನಾಗರಾಜ್ ತಿಳಿಸಿದರು.

ಮಲೇಬೆನ್ನೂರಿನ ಶ್ರೀ ವೀರಭದ್ರೇಶ್ವರ ಚಾರಿಟೇಬಲ್ ಟ್ರಸ್ಟ್ ಹಾಗೂ ಕಡ್ಲಿ ಐವಿಎಫ್ ಸೆಂಟರ್ (ದಾವಣಗೆರೆ) ಮತ್ತು ಕೃಷ್ಣ ಹೆಲ್ತ್‌ಕೇರ್, ಡಯಾಗ್ನೋಸ್ಟಿಕ್ ಸೆಂಟರ್ ಇವರುಗಳ ಸಂಯುಕ್ತಾಶ್ರಯದಲ್ಲಿ ಬೃಹತ್ ಆರೋಗ್ಯ ಮೇಳ ಹಾಗೂ ಸ್ವಯಂ ಪ್ರೇರಿತ ರಕ್ತದಾನ ಶಿಬಿರ ಮತ್ತು ಉಚಿತ ಬಂಜೆತನ ನಿವಾರಣಾ ಸಮಾಲೋಚನಾ ಶಿಬಿರಗಳನ್ನು ಅಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯವರೆಗೆ ಏರ್ಪಡಿಸಲಾಗಿದೆ.

ಇದೇ ವೇಳೆ ಲಯನ್ಸ್ ಜಿಲ್ಲೆಗೆ ಹೊಸದಾಗಿ ಖರೀದಿಸಿರುವ ರಕ್ತ ನಿಧಿ ಕೇಂದ್ರದ ಅಂಬ್ಯುಲೆನ್ಸ್ ವಾಹನವನ್ನು ಲೋಕಾರ್ಪಣೆ ಮಾಡಲಾಗುವುದೆಂದು ಡಾ. ಟಿ.ಬಸವರಾಜ್, ಓ.ಜಿ.ರುದ್ರಗೌಡ್ರು ತಿಳಿಸಿದರು.

ದೇವಸ್ಥಾನ ಟ್ರಸ್ಟ್‌ನ ಬಿ.ಪಂಚಪ್ಪ, ಬಿ.ನಾಗೇಂದ್ರಪ್ಪ, ಬಿ.ವಿ.ರುದ್ರೇಶ್, ಬಿ.ಉಮಾಶಂಕರ್, ಬಿ.ಶಂಭುಲಿಂಗಪ್ಪ, ಬಿ.ಮಲ್ಲಿಕಾರ್ಜುನ್, ಲಯನ್ಸ್ ಕ್ಲಬ್ ಅಧ್ಯಕ್ಷೆ ಪಾರ್ವತಮ್ಮ ಇ.ಎಂ.ಮರುಳಸಿದ್ದೇಶ್, ಕಾರ್ಯದರ್ಶಿ ರೂಪಾ ಪಾಟೀಲ್, ಎನ್.ಜಿ.ಬಸವನಗೌಡ್ರು, ಡಾ. ಹೆಚ್.ಜೆ.ಚಂದ್ರಕಾಂತ್, ಸಿರಿಗೆರೆ ಸಿದ್ದಪ್ಪ ಮತ್ತಿತರರು ಸುದ್ದಿಗೋಷ್ಠಿಯಲ್ಲಿದ್ದರು.

## ಎಸ್ಸೆಸ್ ವೈದ್ಯಕೀಯ ಮತ್ತು ಸಂಶೋಧನಾ ಕೇಂದ್ರದ ಇಎನ್‌ಟಿ ವಿಭಾಗದಿಂದ ಜನ ಜಾಗೃತಿ



ದಾವಣಗೆರೆ, ಜ. 12- ಎಸ್.ಎಸ್ ಕೇರ್ ಟ್ರಸ್ಟ್ ವತಿಯಿಂದ ಇ.ಎನ್.ಟಿ ವಿಭಾಗದಲ್ಲಿ ನವಜಾತ ಶಿಶುಗಳಲ್ಲಿ ಶ್ರವಣ ಪರೀಕ್ಷೆ ಮಾಡುವ ಹಾಗೂ ಶ್ರವಣದೋಷಕ್ಕೆ ಪರಿಹಾರಗಳ ಬಗ್ಗೆ ಉಪನ್ಯಾಸ ನೀಡುವ ಮೂಲಕ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಇ.ಎನ್.ಟಿ ವಿಭಾಗದ ಮುಖ್ಯಸ್ಥರಾದ ಡಾ. ಯೋಗೀಶ್ ಬಿ.ಎಸ್, ಡಾ.ಮುನೀಶ್, ಡಾ.ಅಜಿತ್ , ಡಾ ನಾಗರಾಜ್ , ಡಾ.ಕೀರ್ತಿ, ಡಾ.ಲತಾಬಾಯಿ ಹಾಗೂ ಎಸ್ ಎಸ್ ಕೇರ್ ಟ್ರಸ್ಟ್ ಕೋರ್ ಕಮಿಟಿ ಮೆಂಬರ್ ಆದ ಮಕ್ಕಳ ವಿಭಾಗದ ಡಾ.ಲತಾ ಜಿ. ಎಸ್ ಅವರು ಉಪಸ್ಥಿತರಿದ್ದರು. ಸ್ನಾತಕೋತ್ತರ ವಿದ್ಯಾರ್ಥಿಗಳು, ಆಸ್ಪತ್ರೆಯ ವೈದ್ಯಕೀಯ ಮತ್ತು ವೈದ್ಯಕೀಯೇತರ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಈ ಕಾರ್ಯಕ್ರಮದಲ್ಲಿ ನವಜಾತ ಶಿಶುವಿನಲ್ಲಿ NJF(OAE) ಹಾಗೂ ಬೆರಾ ಎಂಬ ಶ್ರವಣ ಪರೀಕ್ಷೆಯ ಮಹತ್ವ, ನಿರ್ಲಕ್ಷಿಸಿದರೆ ಆಗುವ ತೊಂದರೆಗಳು ಹಾಗೂ ಶ್ರವಣೋಪಕರಣಗಳ ಬಗ್ಗೆ ಡಾ.ಕೀರ್ತಿಯವರು ನೆರೆದಿದ್ದ ಜನರಿಗೆ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತ ಮಂಡಳಿ, ವೈದ್ಯಕೀಯ ನಿರ್ದೇಶಕರಾದ ಡಾ.ಅರುಣ್ ಕುಮಾರ್ ಅಜ್ಜಪ್ಪನವರು ಮತ್ತು ಪ್ರಾಂಶುಪಾಲರಾದ ಡಾ.ಪ್ರಸಾದ್ ಬಿ.ಎಸ್. ಉಪಸ್ಥಿತರಿದ್ದರು.

## ಕ್ರೀಡೆ ವಿದ್ಯಾರ್ಥಿಗಳ ಜೀವನದಲ್ಲಿ ಸಹಾಯಕಾರಿ



### ಬಸವಪ್ರಭು ಸ್ವಾಮೀಜಿ

ದಾವಣಗೆರೆ, ಜ.12- ಸಾಹಸ ಕ್ರೀಡೆ ವಿದ್ಯಾರ್ಥಿಗಳ ಜೀವನದಲ್ಲಿ ತುಂಬಾ ಸಹಾಯಕಾರಿಯಾಗುತ್ತದೆ. ಕೇವಲ ಪುಸ್ತಕಕ್ಕೆ ಅಂಟಿಕೊಳ್ಳಬೇಡಿ. ವಿದ್ಯೆ ಎಷ್ಟು ಮುಖ್ಯವೋ ಕ್ರೀಡೆಯೋ ಅಷ್ಟೇ ಮುಖ್ಯ ಎಂದು ವಿರಕ್ತಮಠದ ಬಸವಪ್ರಭು ಸ್ವಾಮೀಜಿ ತಿಳಿಸಿದರು.

ಅವರು ನಗರದ ಹಿಮಾಲಯನ್ ಅಡ್ವೆಂಚರ್ ಅಂಡ್ ನೇಚರ್ ಅಕಾಡೆಮಿ ವತಿಯಿಂದ 2025ರ ಪಾಕೆಟ್ ಕ್ಯಾಲೆಂಡರ್ ಬಿಡುಗಡೆ ಮಾಡಿ ವಿದ್ಯಾರ್ಥಿಗಳಿಗೆ ಆಶೀರ್ವಚನ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಸಂಸ್ಥೆ ಗೌರವಾಧ್ಯಕ್ಷ ಹೆಚ್.ಬಿ. ಮಂಜುನಾಥ್ ಮಾತನಾಡಿ, ಪರಿಸರ ಮತ್ತು ಸಾಹಸಕ್ಕೂ ಸಂಬಂಧವಿದೆ. ಸಾಹಸ ಕ್ರೀಡೆಗಳು ಬೆಟ್ಟ, ಗುಡ್ಡ, ಕಾಡು, ಜರಿ ತೊರೆ, ನೀರು ಗಾಳಿ ಹೀಗೆ ಪರಿಸರ ಸವಿಯುತ್ತಾ ಸಾಹಸ ಮಾಡಬಹುದು ಪರಿಸರ ಉಳಿಸಿ ಬೆಳೆಸಿ ಎಂದು ಮಾತಾನಾಡಿದರು.

ಈ ಸಂದರ್ಭದಲ್ಲಿ ಅಧ್ಯಕ್ಷ ರಾಜಶೇಖರ್, ಪ್ರಧಾನ ಕಾರ್ಯದರ್ಶಿ ಎನ್. ಕೆ. ಕೊಟ್ರೇಶ್, ಸಹ ಕಾರ್ಯದರ್ಶಿ ಪಂಚಾಕ್ಷರಿ, ಸದಸ್ಯರಾದ ಜಿ.ಟಿ. ಮಲ್ಲೇಶ್, ಕಾಶಿನಾಥ್, ನವೀನ್, ಪವನ್, ಪೂಜಾ, ಶೋಭಾ, ಸನ್ನಿಧಿ ಹಾಗೂ ರವಿತೇಜ ಟೆಕ್ಸ್‌ಟೈಲ್ಸ್‌ನ ರುದ್ರೇಶ್ ಮತ್ತಿತರರು ಉಪಸ್ಥಿತರಿದ್ದರು.

## ಶೈಕ್ಷಣಿಕ ಕ್ರಾಂತಿಗೆ ಮುನ್ನುಡಿ ಬರೆದ ಸಾವಿತ್ರಿಬಾಯಿ ಪುಲೆ



### ಪ್ರೊ. ವಿದ್ಯಾಧರ ವೇದವರ್ಮ

ದಾವಣಗೆರೆ, ಜ.12- ಸ್ತ್ರೀ ಸಮಾನತೆ, ಸ್ತ್ರೀ ಹಕ್ಕುಗಳ ರಕ್ಷಣೆ ಸಂವಿಧಾನದ ಆಶಯವಾಗಿದ್ದು, ಇದಕ್ಕೆ ಮಾತೆ ಸಾವಿತ್ರಿ ಬಾಯಿ ಪುಲೆ ಅವರು ಅಡಿಪಾಯ ಹಾಕಿದರು ಎಂದು ಆರ್.ಎಲ್. ಕಾಲೇಜಿನ ಪ್ರಾಧ್ಯಾಪಕ ವಿದ್ಯಾಧರ ವೇದವರ್ಮ ತಿಳಿಸಿದರು.

ಅವರು ನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಾನವ ಬಂಧುತ್ವ ವೇದಿಕೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಅಕ್ಷರದವ್ವ ಸಾವಿತ್ರಿ ಬಾಯಿ ಪುಲೆ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ದೇಶದ ಮೊದಲ ಮಹಿಳಾ ಶಿಕ್ಷಕಿ ಎಂದು ಕರೆಯಲ್ಪಡುವ ಸಾವಿತ್ರಿ ಬಾಯಿ ಪುಲೆ ಅವರು ಹೆಣ್ಣು ಮಕ್ಕಳ ಶಿಕ್ಷಣ ಮತ್ತು ಹಕ್ಕುಗಳಿಗಾಗಿ ತನ್ನ ಜೀವನದುದ್ದಕ್ಕೂ ದಣಿವರಿಯದ ಹೋರಾಟ ನಡೆಸಿದರು. ಅವರು ತಳ ಸಮುದಾಯದ ಹೆಣ್ಣು ಮಕ್ಕಳಿಗಾಗಿ ಶಾಲೆ, ಕೂಲಿ ಕಾರ್ಮಿಕರನ್ನು ವಿದ್ಯಾವಂತರನ್ನಾಗಿಸಲು ರಾತ್ರಿ ಶಾಲೆ ಸ್ಥಾಪಿಸಿದ ಕೀರ್ತಿ ಪುಲೆ ಅವರಿಗೆ ಸಲ್ಲುತ್ತದೆ. ಅಂದು ಅವರ ಹೋರಾಟದ ಫಲವಾಗಿ ಇಂದು ಭಾರತದ ಮಹಿಳೆಯರು ಸಮಾಜದ ಎಲ್ಲಾ ಕ್ಷೇತ್ರದಲ್ಲಿ ಸಮಾನತೆ ಪಡೆಯುವಂತಾಗಿದೆ ಎಂದರು. ಈ ಸಂದರ್ಭ ದಲ್ಲಿ ಜಿಲ್ಲಾ ಸಂಚಾಲಕ ಲಕ್ಷ್ಮಣ್ ರಮಾವತ, ತಾಲ್ಲೂಕು ಸಂಚಾಲಕ ಹನುಮಂತಪ್ಪ, ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಂಶುಪಾಲ ಪ್ರೊ. ಮಂಜಪ್ಪ ಉಪಸ್ಥಿತರಿದ್ದರು.

# ವಿದ್ಯಾರ್ಥಿಗಳು ಹಿಂಜರಿಕೆ ಮನೋಭಾವ ತೊರೆಯಲಿ

### ಪ್ರಾಯೋಜಿತ ವಿಶ್ವವಿದ್ಯಾನಿಲಯ ಮಟ್ಟದ ಚರ್ಚಾ ಸ್ಪರ್ಧೆ ಕಾರ್ಯಕ್ರಮದಲ್ಲಿ ಪ್ರೊ. ಎಸ್. ಸುಚಿತ್ರಾ

ದಾವಣಗೆರೆ, ಜ.12- ವಿದ್ಯಾರ್ಥಿಗಳು ಹಿಂಜರಿಕೆ ಮನೋಭಾವ ತೊರೆದು ಸ್ಪರ್ಧೆಗಳಲ್ಲಿ ಭಾಗವಹಿಸುವುದನ್ನು ರೂಢಿಸಿಕೊಳ್ಳಬೇಕು. ಆಗ ಮಾತ್ರ ಹೊಸ-ಹೊಸ ವಿಚಾರಗಳನ್ನು ತಿಳಿಯಲು ಸಾಧ್ಯ ಎಂದು ದಾವಣಗೆರೆ ವಿವಿಯ ಪ್ರೊ.ಎಸ್. ಸುಚಿತ್ರಾ ಹೇಳಿದರು.

ಇಲ್ಲಿನ ದಾವಣಗೆರೆ ವಿಶ್ವವಿದ್ಯಾನಿಲಯದಲ್ಲಿ ಕರ್ನಾಟಕ ರಾಜ್ಯ ಸಹಕಾರ ಮಹಾಮಂಡಳಿ ನಿಯಮಿತದಿಂದ ಪ್ರಾಯೋಜಿತ ವಿಶ್ವವಿದ್ಯಾನಿಲಯ ಮಟ್ಟದ ಸಹಕಾರ ವಿಷಯದ ಕುರಿತು ನಡೆದ ಚರ್ಚಾ ಸ್ಪರ್ಧೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಸ್ಪರ್ಧೆಗಳಲ್ಲಿ ಸೋಲು, ಗೆಲುವು ಸಹಜ, ಮಕ್ಕಳು ಸಕ್ರೀಯವಾಗಿ ಸ್ಪರ್ಧೆಗಳಲ್ಲಿ



ಭಾಗವಹಿಸಿದರೇ ಅವರಲ್ಲಿ ಅಡಗಿರುವ ಜ್ಞಾನ ಭಂಡಾರ ವೃದ್ಧಿಸುತ್ತದೆ. ಹಾಗಾಗಿ ವಿದ್ಯಾರ್ಥಿಗಳಲ್ಲಿ ಅಡಕವಾಗಿರುವ ವಿದ್ವತ್ತನ್ನು ಹೊರ ಹಾಕಲು ಚರ್ಚಾ ಸ್ಪರ್ಧೆಗಳು ಉತ್ತಮ ವೇದಿಕೆ ಎಂದರು.

ಸಹಕಾರ ಮಂಡಳಿಯ ನಿರ್ದೇಶಕ ಶ್ರೀನಿವಾಸ್‌ಮೂರ್ತಿ ಮಾತನಾಡಿ, ಸಹಕಾರ ಕ್ಷೇತ್ರ ಎಂಬುದು ಕೊನೆಯೇ ಇಲ್ಲದ ವಿಷಯ, ಯಾವ ವಿಷಯವಾದರೂ ಸಹಕಾರ ಕ್ಷೇತ್ರದ ಅಡಿಯಲ್ಲಿ ಬರುತ್ತವೆ. ಸಹಕಾರ ಕ್ಷೇತ್ರವು ಅನೇಕ ಆಯಾಮಗಳಲ್ಲಿ ಬೆಳವಣಿಗೆಯಾಗುತ್ತಿದೆ ಎಂದು ಹೇಳಿದರು.

ಕೊಟ್ಟೂರಿನ ಇಂದು ಪದವಿ ಕಾಲೇಜಿನ ಪ್ರಾಧ್ಯಾಪಕ ಹಾಗೂ ಸಾಹಿತಿ ಪದ್ಮಣ್ಣ ಹಿರೇಗಿಡ್ಡಪ್ಪನವರು ವಿಶೇಷ ಉಪನ್ಯಾಸ ನೀಡಿದರು. ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು.

ಈ ವೇಳೆ ಕುಲಸಚಿವ ಪ್ರೊ.ಸಿ.ಕೆ ರಮೇಶ, ಡಾ.ಯು.ಎಸ್. ಮಹಾಬಲೇಶ್ವರ, ಡಾ.ಸಿದ್ದಪ್ಪ ಭೀ. ಕಕ್ಕಳಮೇಲಿ, ಡಾ.ನಾಗಭೂಷಣ್‌ಗೌಡ, ಹಣಕಾಸು ಅಧಿಕಾರಿ ಡಿ. ಮುದ್ದನಗೌಡ್ರ, ದಾವಣಗೆರೆ ಜಿಲ್ಲಾ ಸಹಕಾರ ಒಕ್ಕೂಟದ ಸಿಇಓ ಹಾಲಪ್ಪ ಕೋಡಿಹಳ್ಳಿ ಇದ್ದರು.

# ಹೊಂಡದ ಹೂಳೆತ್ತುವ ಕಾಮಗಾರಿ ಪರಿಶೀಲನೆ : ಕೆ.ಎಸ್. ಬಸವಂತಪ್ಪ

ದಾವಣಗೆರೆ, ಜ. 12 - ಹೂಳು ತುಂಬಿದ್ದ ಹೊಂಡವನ್ನು ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ಕೆಂಗಾಪುರ ಗ್ರಾಮಸ್ಥರು ಹೂಳೆತ್ತುವ ಕಾಮಗಾರಿಗೆ ಚಾಲನೆ ನೀಡಿದ್ದಾರೆ.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಿಂದ 'ನಮ್ಮೂರ ನಮ್ಮ ಕೆರೆ' ಯೋಜನೆಯಡಿ ಹೊಂಡದ ಜೀರ್ಣೋದ್ಧಾರಕ್ಕೆ ಆಯ್ಕೆಯಾಗಿದ್ದು, ಸಂಸ್ಥೆಯಿಂದ ಎಸ್ಟಿಮೇಟ್ ತಯಾರಿಸುತ್ತಿದ್ದಾರೆ. ಅದರ ಪೂರ್ವದಲ್ಲಿ ಗ್ರಾಮಸ್ಥರು ಹೂಳೆತ್ತಲು ಚಾಲನೆ ನೀಡಿದ್ದಾರೆ.

ಗ್ರಾಮಕ್ಕೆ ಭೇಟಿ ನೀಡಿದ ಶಾಸಕ ಕೆ.ಎಸ್. ಬಸವಂತಪ್ಪ, ಹೊಂಡದ ಹೂಳೆತ್ತುವ ಕಾಮಗಾರಿ ಪರಿಶೀಲನೆ ನಡೆಸಿದರು. ಈ ವೇಳೆ ಅನುದಾನ ಬಿಡುಗಡೆ ಮಾಡುವಂತೆ ಗ್ರಾಮಸ್ಥರು



ಮನವಿ ಮಾಡಿದರು. ಕೂಡಲೇ ಶಾಸಕರು, ಸಣ್ಣ ನೀರಾವರಿ ಇಲಾಖೆ ಸಹಾಯಕ ಇಂಜಿನಿಯರ್ ಅವರನ್ನು ದೂರವಾಣಿ ಮೂಲಕ ಸಂಪರ್ಕ ಮಾಡಿ, ಹೊಂಡ ಹೂಳೆತ್ತುವ ಕಾಮಗಾರಿಗೆ ಅನುದಾನ ಒದಗಿಸಿ, ಹೊಂಡದ ಸುತ್ತ ತಡೆಗೋಡೆ ನಿರ್ಮಿಸಿ ತಂತಿ ಬೇಲಿ ಹಾಕುವಂತೆ ಸೂಚನೆ ನೀಡಿದರು. ಅಲ್ಲದೇ ತಾವು ಕೂಡ ಅನುದಾನ ನೀಡುವುದಾಗಿ ಭರವಸೆ ನೀಡಿದರು.

ಹೊಂಡ ಒತ್ತುವರಿಯಾಗಿದ್ದು, ಒತ್ತುವರಿ ತೆರವುಗೊಳಿಸಿ ಹದ್ದುಬಸ್ತ್ ಮಾಡುವಂತೆ ತಹಶೀಲ್ದಾರ್ ಅವರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಬಸವಾಪಟ್ಟಣ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ಜಿ.ನಾಗಣ್ಣ, ಗ್ರಾ.ಪಂ. ಸದಸ್ಯ ಪರಮೇಶ್ವರಪ್ಪ, ಜಯಣ್ಣ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಗಣೇಶ್ ನಾಯ್ಕ್, ಮಂಜಣ್ಣ, ಪರಸಪ್ಪ, ಅಣ್ಣಪ್ಪ, ಮುರುಘ ರಾಜೇಂದ್ರಪ್ಪ ಹಾಗೂ ಗ್ರಾಮಸ್ಥರು ಇದ್ದರು.

## ಕನ್ನಡವನ್ನು ನಿರಂತರವಾಗಿ ಬಳಸುವ ಮೂಲಕ ತಾಯಿ ನುಡಿ ಸಂರಕ್ಷಿಸೋಣ



### ಡಾ. ಹೆಚ್.ಎಸ್. ಮಂಜುನಾಥ ಕುರ್ಕಿ

ದಾವಣಗೆರೆ, ಜ. 12- ಕನ್ನಡ ಭಾಷೆಗೆ ಸಾವಿಲ್ಲ. ನಾವು ಕನ್ನಡ ನುಡಿಯನ್ನು ನಿರಂತರವಾಗಿ ಬಳಸುವ ಮೂಲಕ ತಾಯಿ ನುಡಿಯನ್ನು ಸಂರಕ್ಷಿಸೋಣ ಎಂದು ಡಾ. ಹೆಚ್.ಎಸ್.ಮಂಜುನಾಥ ಕುರ್ಕಿ ಹೇಳಿದರು.

ಅವರು ನಗರದ ಶಬರಿಮಲೆ ಅಯ್ಯಪ್ಪ ಸ್ವಾಮಿ ದೇವಸ್ಥಾನದ ಸಾಹಿತ್ಯದ ವೇದಿಕೆಯಿಂದ ಏರ್ಪಡಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಹಾಗೂ ಮಾತೃವಾತ್ಸಲ್ಯ ಕವನ ಸಂಕಲನ ಬಿಡುಗಡೆ ಸಮಾರಂಭದ ಉದ್ಘಾಟನೆ ನೆರವೇರಿಸಿ ಮಾತನಾಡುತ್ತಿದ್ದರು.

ತಂದೆಯಂತೆ ಹೀರೋ, ತಾಯಿಯಂತಹ ದೇವರನ್ನು ನಾವು ಎಲ್ಲಿಯೂ ಕಾಣಲು ಸಾಧ್ಯವಿಲ್ಲ. ತಾಯಿಯ ಕರುಳಬಳ್ಳಿ, ತಾಯಿಯ ತುತ್ತು, ಮುತ್ತು, ಅವಳು ಕಲಿಸಿ ಮಾತು, ಸಂಸ್ಕೃತಿ, ಪ್ರೀತಿ-ವಾತ್ಸಲ್ಯಗಳಿಗೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದರು.

ಲೇಖಕ ಸುಮತೀಂದ್ರ ಅವರಿಂದ ರಚಿತವಾದ ಮಾತೃವಾತ್ಸಲ್ಯ ಕವನ ಸಂಕಲನವನ್ನು ಚುಟುಕು ಸಾಹಿತ್ಯ ಪರಿಷತ್ ಅಧ್ಯಕ್ಷ ರಾಜಶೇಖರ್ ಗುಂಡಗಟ್ಟಿ ಬಿಡುಗಡೆ ಮಾಡಿದರು. ಅತಿಥಿಗಳಾಗಿ ಕವಯತ್ರಿ ಶ್ರೀಮತಿ ಸಂಧ್ಯಾ ಸುರೇಶ್ ಉಪಸ್ಥಿತರಿದ್ದು ಮಾತನಾಡಿದರು. ಸಾಹಿತಿ ಆರ್.ಆರ್. ಇನಾಂದಾರ್ ಅಧ್ಯಕ್ಷತೆ ವಹಿಸಿದ್ದರು. ಕೃತಿಯ ಲೇಖಕ ಸುಮತೀಂದ್ರ ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿದರು. ಶ್ರೀಮತಿ ಗಿರಿಜಾ ಸಿದ್ದಲಿಂಗಪ್ಪ ಕಾರ್ಯಕ್ರಮ ನಿರೂಪಿಸಿದರು.

## ಕನ್ನಡ ಶಿಕ್ಷಕರ ನೇಮಕವಾಗಲಿ



ದಾವಣಗೆರೆ, ಜ.12- ಇಲ್ಲಿನ ಗ್ರಾಮಾಂತರ ವ್ಯಾಪ್ತಿಯಲ್ಲಿನ ವಡ್ಡನಹಳ್ಳಿ ಅಂಗವಿಕಲರ ತರಬೇತಿ ಕೇಂದ್ರದಲ್ಲಿ ಕೂಡಲೇ ಕನ್ನಡ ಶಿಕ್ಷಕರನ್ನು ನೇಮಕಗೊಳಿಸಬೇಕು ಮತ್ತು ಕೇಂದ್ರದಲ್ಲಿ ಎಲ್ಲರೂ ಕನ್ನಡ ಬಳಕೆ ಮಾಡಲೇ ಬೇಕೆಂದು ಕರ್ನಾಟಕ ರಕ್ಷಣಾ ವೇದಿಕೆ ಒತ್ತಾಯಿಸಿದೆ.

ಈ ತರಬೇತಿ ಕೇಂದ್ರದಲ್ಲಿ ಉತ್ತರ ಭಾರತೀಯರು ಮತ್ತು ತಮಿಳುನಾಡಿನಿಂದ ಬಂದಂತಹ ಶಿಕ್ಷಕರೇ ಇದ್ದು, ನಾಡಿನ ವಿಕಲಚೇತನ ಮಕ್ಕಳಿಗೆ ಕನ್ನಡ ಬೋಧಿಸುವ ಶಿಕ್ಷಕರು ಇಲ್ಲದಂತಾಗಿದೆ. ಇಲ್ಲಿ ನಡೆಯುವ ಪ್ರತಿ ಕಾರ್ಯಕ್ರಮದಲ್ಲೂ ಕನ್ನಡ ಭಾಷೆ ಬಳಸದಿದ್ದಕ್ಕೆ ಅಧಿಕಾರಿಗಳ ವಿರುದ್ಧ ಕರವೇ ಕಿಡಿ ಕಾರಿದೆ.

ಈ ಕುರಿತು ವಿಕಲಚೇತನ ಮತ್ತು ಅಂದ ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿಯನ್ನು ಕೇಳಿದರೆ, ಈಗಾಗಲೇ ನಾವು ಅನೇಕ ಬಾರಿ ಈ ಬಗ್ಗೆ ಮಾಹಿತಿಯನ್ನು ತಿಳಿಸಿದ್ದೇವೆ. ಆದರೆ ಅದು ಕೇಂದ್ರ ಸರ್ಕಾರಕ್ಕೆ ಒಳಪಡುವುದರಿಂದ ನಮ್ಮ ಅಧೀನದಲ್ಲಿಲ್ಲ ಎಂದು ಹೇಳಿದ್ದಾರೆ. ಅಧಿಕಾರಿಗಳ ಮಾತನ್ನು ಒಪ್ಪದ ಕರವೇ ಜಿಲ್ಲಾಧ್ಯಕ್ಷ ಎಂ.ಎಸ್. ರಾಮೇಗೌಡ ಮಾತನಾಡಿ, ರಾಜ್ಯದಲ್ಲಿ ಕನ್ನಡವೇ ಆಡಳಿತ ಭಾಷೆಯಾಗಿದ್ದು, ಕೇಂದ್ರ ಸರ್ಕಾರಕ್ಕೆ ಒಳಪಟ್ಟ ಇಲಾಖೆಗಳು ಯಾವುದೇ ಇರಲಿ, ರಾಜ್ಯದಲ್ಲಿ ತ್ರಿಭಾಷಾ ಸೂತ್ರ ಅನುಸರಿಬೇಕು. ಇಲ್ಲದಿದ್ದಲ್ಲಿ ಅಂತಹ ಕಚೇರಿಗಳಿಗೆ ಕರವೇ ಮುತ್ತಿಗೆ ಹಾಕಿ ಪ್ರತಿಭಟನೆ ನಡೆಸಲಿದೆ ಎಂದು ಎಚ್ಚರಿಕೆ ನೀಡಿದರು. ರಾಜ್ಯದಲ್ಲಿ ಯಾವ ಇಲಾಖೆ ಅಥವಾ ಪರಭಾಷಿಗರೆ ಬರಲಿ ಕನ್ನಡಕ್ಕೆ ಅಗ್ರಸ್ಥಾನ ನೀಡಬೇಕು. ಇಲ್ಲವಾದರೆ ಅಂತವರಿಗೆ ಕರ್ನಾಟಕ ರಕ್ಷಣಾ ವೇದಿಕೆ ತಕ್ಕ ಪಾಠ ಕಲಿಸಲಿದೆ ಎಂದು ಕರವೇ ತಿಳಿಸಿದೆ.

**IN THE COURT IF THE SECOND ADDITIONAL SENIOR CIVIL JUDGE, AT DAVANGERE**

**P & S C. 09 / 2024**

**Petitioner :** Sri. B. Jeethendra Kumar S/o Bheemaraj Devichand, Aged about 42 years, Businessman, Door No. 708/A6-402, S.S. Shraddha Apartmant, Muddalli Tota, P.J. Extension, DAVANGERE.

-V/s-

**Respondents :** Nil

**CITATION PUBLISHED UNDER SECTION 372 OF THE INDIAN SUCCESSION ACT 1925**

Whereas the above named petitioner has filed the petition under Section 372 of the Indian Succession Act, for issue of Succession certificate in his favour in respect of the amount in deposit in Public Provident Fund Account bearing No. 0506680733 In Head Post Office, Davangere and the amount in deposit in Savings Bank Account bearing No. 0506747472 in Head Post Office, Davangere of Smt. Kamala Bai Bheemaraj Devichand.

Now the above case is posted to 04th Day of February 2025. Anyone having any right, title, interest and claim over the above stated benefits are hereby called upon to take notice that the above case is posted 04 Day of February 2025 and they can appear on the above stated date at 11.00 A.M. either personally or through an Advocate.

Given under my hand seal on 9th Day of January 2025 at Davangere.

Place : Davangere.
Date : 09-01-2025

**Advocate of Petitioner**
**J. N.Vasanth kumar**

**By order of the court**
**Chief Ministerial Officer**
**Principal Senior Civil Judge and CJM Court, Davangere.**

# ಮಕ್ಕಳು ವಿದ್ಯೆಯ ಜೊತೆ ಸಂಸ್ಕಾರ ರೂಢಿಸಿಕೊಂಡರೆ ಶಿಕ್ಷಣ ಪರಿಪೂರ್ಣ

### ಜಯಪ್ರಕಾಶ್ ನಾರಾಯಣ

ದಾವಣಗೆರೆ, ಜ. 12- ವಿದ್ಯಾರ್ಥಿಗಳು ಕೇವಲ ಅಂಕ ಪಟ್ಟಿಗೆ ಸೀಮಿತವಾಗದೇ ವಿದ್ಯಾಭ್ಯಾಸದ ಜತೆಯಲ್ಲಿ ನಮ್ಮ ನಾಡು-ನುಡಿಯ ಬಗ್ಗೆ ಕಾಳಜಿ ಸಂಸ್ಕೃತಿ, ಸಂಸ್ಕಾರ ರೂಢಿಸಿಕೊಂಡರೆ ಶಿಕ್ಷಣಕ್ಕೆ ಪರಿಪೂರ್ಣತೆ ಬರುತ್ತದೆ. ಈ ಕೇರಳ ಗಡಿನಾಡಲ್ಲಿ ಹಳೆಗನ್ನಡ ಕವನ ರಚನೆಯ ಕಮ್ಮಟ ಹಮ್ಮಿಕೊಂಡ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯು ಮಕ್ಕಳಲ್ಲಿ ಸಾಹಿತ್ಯದ ಪರಿಜ್ಞಾನ ಕನ್ನಡ ಭಾಷೆ ಮೂಡಿಸುತ್ತಿರುವುದು ಶ್ಲಾಘನೀಯ ಎಂದು ಕೇರಳ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಜಯಪ್ರಕಾಶ್ ನಾರಾಯಣ ತಮ್ಮ ಮನದಾಳದ ಮಾತು ಹಂಚಿಕೊಂಡರು.

ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಅಂಗ ಸಂಸ್ಥೆ ಕೇರಳ ಗಡಿನಾಡ ಶಾಖೆಯ ಆಶ್ರಯದಲ್ಲಿ ಇತ್ತೀಚೆಗೆ ಕಾಸರಗೋಡು ಜಿಲ್ಲೆಯ ಮೀಯಪದವು ವಿ.ಎ.ಯು.ಪಿ.ಎಸ್. ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ



ಹಮ್ಮಿಕೊಳ್ಳಲಾದ ಕಲಾಕುಂಚ ಕೇರಳ ಗಡಿನಾಡಿನ ಶಾಖೆಯ 3ನೇ ವರ್ಷದ ವಾರ್ಷಿಕೋತ್ಸವ ಮತ್ತು ಕವನ ರಚನಾ ಕಮ್ಮಟ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಉಪಸ್ಥಿತರಿದ್ದು ಅವರು ಮಾತನಾಡಿದರು.

ವಿ.ಎ.ಯು.ಪಿ.ಎಸ್. ಶಿಕ್ಷಣ ಸಂಸ್ಥೆಯ ವ್ಯವಸ್ಥಾಪಕ ಶ್ರೀಧರ್‌ರಾವ್, ಕಲಾಕುಂಚ ಕೇರಳ ಗಡಿನಾಡಿನ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಜಯಲಕ್ಷ್ಮಿ ಕಾರಂತ್, ಶಿಕ್ಷಣ ಸಂಸ್ಥೆಯ ಮುಖ್ಯೋಪಾಧ್ಯಾಯ ಅರವಿಂದಾಕ್ಷ ಭಂಡಾರಿ, ನಿವೃತ್ತ ಪ್ರಾಚಾರ್ಯ ಪಿ.ಎನ್.ಮುಡತ್ತಾಯ, ಕಲಾಕುಂಚ ಕೇರಳದ ಗಡಿನಾಡಿನ ಶಾಖೆಯ ಗೌರವ ಅಧ್ಯಕ್ಷ ವಿ.ಬಿ.ಕುಳಮರ್ವ, ಕವಿಗೋಷ್ಠಿಯ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಲಕ್ಷ್ಮೀ ವಿ.ಭಟ್ ಮುಂತಾದವರು ಮಾತನಾಡಿದರು.

ಕಲಾಕುಂಚದ ಸಂಸ್ಥಾಪಕ ಸಾಲಿಗ್ರಾಮ ಗಣೇಶ್ ಶೆಣೈ ಉಪಸ್ಥಿತರಿದ್ದರು. ಕು. ಸಾನಿಧ್ಯ ಮತ್ತು ಸಿಂಚನ ಪ್ರಾರ್ಥಿಸಿದರು. ಶ್ರೀಮತಿ ಜಯಲಕ್ಷ್ಮಿ ಕಾರಂತ್ ಸ್ವಾಗತಿಸಿದರು. ಶ್ರೀಮತಿ ಜಯಲಕ್ಷ್ಮಿ ರಾಮಚಂದ್ರ ಹೊಳ್ಳ ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

# ಹಳ್ಳಿ ಮಕ್ಕಳು ಐಎಎಸ್ ಮಾಡಬೇಕೆಂಬುದು ನನ್ನ ಕನಸು

## ಜಿ.ಬಿ. ವಿನಯ್ ಕುಮಾರ್




ಚನ್ನಗಿರಿ, ಜ. 12 - ಗ್ರಾಮೀಣ ಪ್ರದೇಶದ ಹಾಗೂ ಸಣ್ಣ ಪಟ್ಟಣದ ಮಕ್ಕಳು ಐಎಎಸ್‌ನಂತಹ ಉನ್ನತ ಉದ್ಯೋಗ ಪಡೆಯಬೇಕೆಂಬುದೇ ನನ್ನ ಕನಸು. ಈ ನಿಟ್ಟಿನಲ್ಲಿ ಶ್ರಮಿಸುತ್ತಿದ್ದೇನೆ ಎಂದು ಇನ್‌ಸೈಟ್ಸ್ ಸಂಸ್ಥೆ ಸಂಸ್ಥಾಪಕ ಹಾಗೂ ಸ್ವಾಭಿಮಾನಿ ಬಳಗದ ರಾಜ್ಯಾಧ್ಯಕ್ಷ ಜಿ. ಬಿ. ವಿನಯ್ ಕುಮಾರ್ ತಿಳಿಸಿದರು.

ತಾಲ್ಲೂಕಿನ ಮಾಚನಾಯಕನಹಳ್ಳಿ ಕಾವಲು ಗ್ರಾಮದ ಸಿವಿಎಸ್ ಪಬ್ಲಿಕ್ ಸ್ಕೂಲ್‌ನಲ್ಲಿ ಏರ್ಪಡಿಸಿದ್ದ ಸಿವಿಎಸ್ ಪರ್ವ, ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಉತ್ತಮ ಶಿಕ್ಷಣದಿಂದ ಗ್ರಾಮೀಣ ಪ್ರದೇಶದ ಮಕ್ಕಳು ವಂಚಿತರಾಗುತ್ತಿದ್ದಾರೆ. ಈ ಮಕ್ಕಳೂ ಐಎಎಸ್ ಓದುವಂತಾಗಬೇಕು. ಶಾಲೆಗೆ ಹಾಗೂ ಗ್ರಾಮಕ್ಕೆ ಕೀರ್ತಿ ತರುವಂತಾಗಬೇಕು ಎಂದು ಹೇಳಿದರು.

ಶಾಲೆಗಳಿಗೆ ಮಕ್ಕಳನ್ನು ಸೇರಿಸಿದರೆ ಸಾಕು ಎಂಬ ಮನೋಭಾವನೆ ಪ್ರತಿಯೊಬ್ಬ ಪೋಷಕರಲ್ಲಿಯೂ ಇರುವುದು ಸರಿಯಲ್ಲ. ಮಕ್ಕಳನ್ನು ಪ್ರತಿಭಾವಂತರನ್ನಾಗಿಸಿ, ಬುದ್ಧಿವಂತರನ್ನಾಗಿ ಮಾಡಿ ಎಂಬ ಜವಾಬ್ದಾರಿಯನ್ನು ಶಾಲೆ ಮತ್ತು ಶಿಕ್ಷಕರ ಮೇಲೆ ಹಾಕಿ ನುಣುಚಿಕೊಳ್ಳುತ್ತಿರುವುದು ಕಂಡು ಬರುತ್ತದೆ. ಈ ರೀತಿ ಮಾಡಿದರೆ ಮಕ್ಕಳು ಪ್ರತಿಭಾವಂತರಾಗಲು ಸಾಧ್ಯವಿಲ್ಲ. ಮನೆಯಲ್ಲಿಯೂ ಮಕ್ಕಳ ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡಾ ಚಟುವಟಿಕೆಗಳಿಗೆ ಪ್ರೋತ್ಸಾಹಿಸಬೇಕು ಎಂದು ಹೇಳಿದರು.

ನಾನು ದಾವಣಗೆರೆಯ ಕಕ್ಕರಗೊಳ್ಳದ ದನದ ಕೊಟ್ಟಿಗೆಯಲ್ಲಿ ಬೆಳೆದವನು. ಜವಾಹಾರ್ ನವೋದಯ ವಿದ್ಯಾಲಯದಲ್ಲಿ ಓದಿದ್ದೆ. ಬಡತನ ಕಾರಣದಿಂದ ಒಳ್ಳೆಯ ಶಿಕ್ಷಣ ಸಿಗಲಿಲ್ಲ. ಬಡತನ ಮನೆಯಲ್ಲಿ ಇದ್ದರೂ ಸಂಸ್ಕೃತಿ ಇರಬೇಕು. ಮನೆಯಲ್ಲಿ ಪುಸ್ತಕಗಳ ಸಂಗ್ರಹವಿರಬೇಕು. ನೀವು ಸ್ವಯಂಪ್ರೇರಿತರಾಗಿ ಪುಸ್ತಕ ಓದಿದರೆ ಮಕ್ಕಳೂ ಸಾಹಿತ್ಯದ ಮೇಲೆ ಆಸಕ್ತಿ ಬೆಳೆಸಿಕೊಳ್ಳುತ್ತಾರೆ. ಕಥೆ, ಸಾಮಾನ್ಯ ಜ್ಞಾನ, ಇತಿಹಾಸ, ಪುರಾಣಕ್ಕೆ ಸಂಬಂಧಿಸಿದಂತೆ ಪುಸ್ತಕಗಳನ್ನು ಖರೀದಿಸಿ ಪೋಷಕರು ಓದುವ ಹವ್ಯಾಸ ಹೊಂದಿದ್ದರೆ, ಮಕ್ಕಳು ಇದನ್ನು ಪಾಲಿಸುತ್ತಾರೆ ಎಂದು ಕಿವಿಮಾತು ಹೇಳಿದರು.

ನಾನು ಐಎಎಸ್ ಅಧಿಕಾರಿಯಾಗಬೇಕೆಂಬ ಕನಸು ಕಂಡು ತಯಾರಾದೆ. ಕೇವಲ 2 ಅಂಕಗಳಿಂದ ರ್‍ಯಾಂಕ್ ಕೈತಪ್ಪಿ ಹೋಯಿತು. ಆ ಬಳಿಕ ಕೆಎಎಸ್ ಅಧಿಕಾರಿಯಾದೆ. ಎರಡು ವರ್ಷ ಪಿಡಿಒ ಆಗಿ ಕೆಲಸ ಮಾಡಿದೆ. ಆ ಬಳಿಕ ತನ್ನದೇ ಆದ ಸಂಸ್ಥೆ ಹುಟ್ಟು ಹಾಕಿದೆ. 40 ವಿದ್ಯಾರ್ಥಿಗಳಿಂದ ಆರಂಭವಾದ ಸಂಸ್ಥೆಯು ಇಂದು 10 ಸಾವಿರ ವಿದ್ಯಾರ್ಥಿಗಳು ಇದ್ದಾರೆ. ಸಾವಿರಕ್ಕೂ ಹೆಚ್ಚು ಐಎಎಸ್ ಅಧಿಕಾರಿಗಳು ರೂಪುಗೊಳ್ಳುವಂತಾಗಲು ಕಾರಣವಾಗಿದ್ದೇ ಪುಸ್ತಕ ಓದುವ ಬಗ್ಗೆ ಇದ್ದ ಪ್ರೀತಿ ಎಂದು ತಿಳಿಸಿದರು.

ಹೆಚ್ಚಾಗಿ ಪುಸ್ತಕ ಹಾಗೂ ದಿನಪತ್ರಿಕೆಗಳನ್ನು ಓದುವುದರಿಂದ ಸಾಮಾನ್ಯ ಜ್ಞಾನ ಬೆಳೆಯುತ್ತದೆ. ಸಂಸ್ಕೃತಿಯೂ ಬರುತ್ತದೆ. ಆಗ ನೀವು ಯಾರ ಕೈಕಾಲು ಹಿಡಿಯಬೇಕಿಲ್ಲ. ಸ್ವಾವಲಂಬಿಗಳಾಗಬಹುದು. ಒಂದು ವರ್ಷದಿಂದ 12ವರ್ಷದವರೆಗೆ ಮಕ್ಕಳು ತಂದೆ, ತಾಯಿಯನ್ನು ರೋಲ್ ಮಾಡೆಲ್ ಆಗಿ ನೋಡ್ತಾರೆ. ಹಾಗಾಗಿ, ಮಕ್ಕಳ ಮುಂದೆ ಎಚ್ಚರಿಕೆಯಿಂದ ವರ್ತಿಸಬೇಕು. ಮಕ್ಕಳ ಮನಸ್ಸು ಕದಡಿದರೆ ಭವಿಷ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಭವಿಷ್ಯವೇ ಹಾಳಾಗಿ ಹೋಗುತ್ತದೆ ಎಂದು ಎಚ್ಚರಿಸಿದರು.

ಲೋಕಸಭೆ ಚುನಾವಣೆ ಎದುರಿಸುವುದು ಸಾಮಾನ್ಯ ಅಲ್ಲ. ಸಾಮಾನ್ಯ ಕುಟುಂಬದಿಂದ ಬಂದವನು. ಶಾಸಕ, ಸಂಸದರು, ಮುಖ್ಯಮಂತ್ರಿ ಬೆಂಬಲ ಇರಲಿಲ್ಲ. 43 ಸಾವಿರ ಜನರು ಮೊದಲ ಪ್ರಯತ್ನದಲ್ಲಿಯೇ ಮತ ಹಾಕಿದರು. ಸ್ವಲ್ಪ ಹೆಚ್ಚು ಪ್ರಯತ್ನ ಪಟ್ಟಿದ್ದರೆ ಇನ್ನೂ ಜಾಸ್ತಿ ಮತಗಳು ಬರುತ್ತಿದ್ದವು ಎಂದು ತಿಳಿಸಿದರು.

ಐಎಎಸ್ ಅಧಿಕಾರಿಗಳಾಗಬೇಕು. ಬೇರೆಯವರಿಗೆ ಕೆಲಸ ಕೊಡುವ ಉದ್ಯಮಿಯಾಗಬೇಕು. ನಾಯಕತ್ವ ಗುಣ ಇರಬೇಕು. ಆಗ ಸ್ವಾಭಿಮಾನದ ಜೊತೆಗೆ ಸ್ವಾವಲಂಬನೆ ಸಾಧಿಸಬಹುದು. ಇನ್ನೊಬ್ಬರ ಬಳಿ ಹೋಗಿ ಗುಲಾಮರಾಗುವುದು ತಪ್ಪುತ್ತದೆ. ಮತ್ತೊಬ್ಬರ ಮುಂದೆ ಕೈಯೊಡ್ಡಬಾರದು. ಇನ್ನೊಬ್ಬರ ಮೇಲೆ ಅವಲಂಬಿತರಾಗಬಾರದು. ಇದಕ್ಕೆ ಅವಕಾಶ ಕೊಡಬೇಡಿ. ಮಕ್ಕಳು ಸ್ವತಂತ್ರರಾಗಿ ಬದುಕಿನಲ್ಲಿ ಮುಂದೆ ಬರುವಂತಾಗಬೇಕು ಎಂದು ಕಿವಿಮಾತು ಹೇಳಿದರು.

ಸಿವಿಎಸ್ ಎಜುಕೇಷನ್ ಸೊಸೈಟಿ ಅಧ್ಯಕ್ಷ ಎ.ಸಿ. ಚಂದ್ರು ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಕಾರ್ಯದರ್ಶಿ ಡಿ.ಆರ್. ರೂಪ, ಚನ್ನಗಿರಿ ಕ್ಷೇತ್ರ ಶಿಕ್ಷಣಾಧಿಕಾರಿ ಎಲ್. ಜಯಪ್ಪ, ಚನ್ನಗಿರಿ ಪೊಲೀಸ್ ಉಪಾಧೀಕ್ಷಕ ಸ್ಯಾಮ್ ವರ್ಗೀಸ್, ಬಿಜೆಪಿ ಯುವ ಮೋರ್ಚಾ ಅಧ್ಯಕ್ಷ ನವೀನ್ ಕುಮಾರ್, ಸಿವಿಎಸ್ ಪಬ್ಲಿಕ್ ಸ್ಕೂಲ್‌ನ ಮುಖ್ಯೋಪಾಧ್ಯಾಯ ಜಿ. ಅರುಣ್, ಶಿಕ್ಷಕರು ಹಾಗೂ ಪೋಷಕರು ಹಾಜರಿದ್ದರು.

# ಒತ್ತಡದ ಬದುಕಿಗೆ ಯೋಗಾಭ್ಯಾಸ ಸಹಕಾರಿ



## ಪಾಲಿಕೆ ವಿಪಕ್ಷ ನಾಯಕ ಕೆ. ಪ್ರಸನ್ನಕುಮಾರ್

ದಾವಣಗೆರೆ, ಜ.12- ಇಂದಿನ ಒತ್ತಡದ ಬದುಕಿನಲ್ಲಿ ಪ್ರತಿನಿತ್ಯ ಯೋಗಾಭ್ಯಾಸ ಮಾಡುವುದರಿಂದ ಉತ್ತಮ ಸ್ವಾಸ್ಥ್ಯ ಕಾಪಾಡಿಕೊಳ್ಳಬಹುದು ಎಂದು ಪಾಲಿಕೆ ವಿಪಕ್ಷ ನಾಯಕ ಕೆ. ಪ್ರಸನ್ನಕುಮಾರ್ ತಿಳಿಸಿದರು.

ನಗರದ ಪಿ.ಜೆ. ಬಡಾವಣೆಯ ಸರ್.ಎಂ. ವಿಶ್ವೇಶ್ವರಯ್ಯ ಉದ್ಯಾನವನದಲ್ಲಿ ಭಾನುವಾರ ಮಕರ ಸಂಕ್ರಾಂತಿ ಹಾಗೂ ರಾಷ್ಟ್ರೀಯ ಯುವ ದಿನಾಚರಣೆ ನಿಮಿತ್ತ ಆಯೋಜಿಸಿದ್ದ ಉಚಿತ ಯೋಗ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಮನುಷ್ಯ ಸದಾ ಚಟುವಟಿಕೆಯಿಂದ ಇದ್ದರೆ, ನಕಾರಾತ್ಮಕ ಚಿಂತನೆ ಹಾಗೂ ಭಾವನೆಗಳಿಂದ ದೂರವಿರಬಹುದು. ಆರೋಗ್ಯ ಸಮೃದ್ಧಿಗೆ ಯೋಗ ಸಹಕಾರಿ ಎಂದು ಹೇಳಿದರು. ಸದಾ ಉತ್ತಮ ಚಿಂತನೆ ಮಾಡಬೇಕು. ಪ್ರತಿ ದಿನ ಸೂರ್ಯೋದಯಕ್ಕೂ ಮುನ್ನವೇ ಏಳುವ ಹವ್ಯಾಸ ರೂಢಿಸಿಕೊಂಡರೆ ಆರೋಗ್ಯದ ಸಮತೋಲನ ಕಾಪಾಡಿಕೊಳ್ಳಬಹುದು ಎಂದು ಕಿವಿಮಾತು ಹೇಳಿದರು.

ಯೋಗ ವಿದ್ಯಾರ್ಥಿಗಳಾದ ವಿ.ಕೆ. ರಾಹುಲ್, ಎಸ್. ಸಂವೇದಿತಾ, ಕಾವ್ಯ, ಚೇತನ್ ಇತರರು ಸೂರ್ಯ ನಮಸ್ಕಾರ ಯೋಗ ಪದ್ಧತಿಯನ್ನು ಪ್ರದರ್ಶಿಸಿದರು. ಪ್ರಾರಂಭದಲ್ಲಿ ವಿಶ್ವಶಾಂತಿ ಹಾಗೂ ಆರೋಗ್ಯ ಸಮೃದ್ಧಿಗಾಗಿ ಅಗ್ನಿಹೋತ್ರ ಹೋಮ ಮಾಡಲಾಯಿತು.

ಈ ವೇಳೆ ಔಷಧಿ ವ್ಯಾಪಾರಿಗಳ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎನ್.ಪಿ. ಪ್ರಸನ್ನ ಆಚಾರ್, ಬಿಜೆಪಿ ಯುವ ಮೋರ್ಚಾ ಜಿಲ್ಲಾ ಕಾರ್ಯದರ್ಶಿ ಸಚಿನ್ ವೆರ್ಣೇಕರ್ ಮತ್ತು ಕಾರ್ಯನಿರತ ಪತ್ರಕರ್ತರ ಸಂಘದ ಉಪಾಧ್ಯಕ್ಷ ಹೆಚ್.ಎನ್. ಪ್ರಕಾಶ್, ಯೋಗ ಶಿಕ್ಷಕ ವಿ. ಲಲಿತ್ ಕುಮಾರ್ ಜೈನ್ ಇದ್ದರು.

# ದೇಶದ ಅಭಿವೃದ್ಧಿಗೆ ಯುವಕರ ಶಕ್ತಿ ಮುಖ್ಯ

## 162ನೇ ಸ್ವಾಮಿ ವಿವೇಕಾನಂದ ಜಯಂತಿ, ನಗರದಲ್ಲಿ ಸಂಭ್ರಮದ ಶೋಭಾಯಾತ್ರೆ



ದಾವಣಗೆರೆ, ಜ.12- ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ವತಿಯಿಂದ ಸ್ವಾಮಿ ವಿವೇಕಾನಂದರ 162ನೇ ಜಯಂತಿ ಪ್ರಯುಕ್ತ ಭಾನುವಾರ ನಗರದಲ್ಲಿ ಶೋಭಾಯಾತ್ರೆ ಸಂಭ್ರಮದಿಂದ ಜರುಗಿತು.

ಮಾಗನೂರು ಬಸಪ್ಪ ಕಾಲೇಜಿನ ಪ್ರಾಚಾರ್ಯ ಪ್ರಸಾದ್ ಬಂಗೇರ ಅವರು ಜಯದೇವ ವೃತ್ತದಲ್ಲಿ ಬೆಳಗ್ಗೆ ಶೋಭಾಯಾತ್ರೆಗೆ ವಿಧ್ಯುಕ್ತ ಚಾಲನೆ ನೀಡಿದರು. ಮೆರವಣಿಗೆಯಲ್ಲಿ 250ಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು. ಈ ವೇಳೆ ಸ್ವಾಮಿ ವಿವೇಕಾನಂದರಿಗೆ ಹಾಕುವ ಜೈಕಾರಗಳು ಹಾಗೂ ಅಲಂಕಾರಗೊಂಡ ಸ್ವಾಮಿ ವಿವೇಕಾನಂದರ ಭಾವಚಿತ್ರ ಯಾತ್ರೆ ಸೊಬಗನ್ನು ಹೆಚ್ಚಿಸಿತ್ತು.

ಇದೇ ವೇಳೆ ಮಾತನಾಡಿದ ಪ್ರಸಾದ್ ಬಂಗೇರ ಅವರು, ದೇಶದ ಅಭಿವೃದ್ಧಿಗೆ ಯುವಕರ ಶಕ್ತಿ ಬಹಳ ಮುಖ್ಯ. ದೇಶದ ಅಭಿವೃದ್ಧಿ ಮತ್ತು ಪ್ರಗತಿ ಯುವಕರ ಕೊಡುಗೆಯನ್ನು ಅವಲಂಬಿಸಿರುತ್ತದೆ ಎಂದು ಹೇಳಿದರು.

ಯುವ ಸಮೂಹದ ಸಾಮರ್ಥ್ಯದ ಬಗ್ಗೆ ವಿಶ್ವಕ್ಕೆ ಸಾರಿದವರಲ್ಲಿ ಸ್ವಾಮಿ ವಿವೇಕಾನಂದರೇ ಮೊದಲಿಗರು. ಇವರು ಯುವಕರ ಪಾಲಿನ ಸ್ಫೂರ್ತಿಯ ಚಿಲುಮೆ ಆಗಿದ್ದಾರೆ ಎಂದು ಅವರನ್ನು ಸ್ಮರಿಸಿದರು.

ವಿವೇಕಾನಂದರು ತಮ್ಮ ಆಲೋಚನೆ ಹಾಗೂ ಚಿಂತನೆಗಳಿಂದ ಯುವಕರನ್ನು ಒಗ್ಗೂಡಿಸಲು ಬಯಸಿದವರು ಎಂದ ಅವರು, ವಿವೇಕರ ಸವಿ ನೆನಪಿಗಾಗಿ ಭಾರತದಲ್ಲಿ ಪ್ರತಿ ವರ್ಷ ಜ.12ರಂದು ರಾಷ್ಟ್ರೀಯ ಯುವ ದಿನ ಎಂದು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

1984ರಲ್ಲಿ ಭಾರತ ಸರ್ಕಾರವು ಸ್ವಾಮಿ ವಿವೇಕಾನಂದರ ಜನ್ಮ ದಿನವನ್ನು ರಾಷ್ಟ್ರೀಯ ಯುವ ದಿನವನ್ನಾಗಿ ಆಚರಿಸಲು ನಿರ್ಧರಿಸಿತು. 1985ರಲ್ಲಿ ಮೊದಲ ಬಾರಿಗೆ ಭಾರತದಲ್ಲಿ ರಾಷ್ಟ್ರೀಯ ಯುವ ದಿನ ಆಚರಿಸಲಾಯಿತು ಎಂದು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ತಿನ ಸಂಘಟನಾ ಕಾರ್ಯದರ್ಶಿ ವಿಜಯ್ ಕುಮಾರ್, ನಗರ ಕಾರ್ಯದರ್ಶಿ ಅಲೋಕ್, ಎನ್. ವೀರೇಶ್, ನಗರ ಸಹ ಕಾರ್ಯದರ್ಶಿ ತನೋಜ್, ವಿಭಾಗ ಪ್ರಮುಖ ರಾಜಶೇಖರ್, ರಾಷ್ಟ್ರೋತ್ಥಾನ, ಸಿದ್ದಗಂಗಾ, ವೈಷ್ಣವಿ ಚೇತನ ಕಾಲೇಜಿನ ವಿದ್ಯಾರ್ಥಿಗಳು ಹಾಗೂ ವಿದ್ಯಾರ್ಥಿ ಪರಿಷತ್ತಿನ ಕಾರ್ಯಕರ್ತರು ಇದ್ದರು.

# ಬಹುತ್ವ, ಭಾವೈಕ್ಯತೆ ಉಳಿಸುವವನೇ ಕನ್ನಡಿಗ

**(1ನೇ ಪುಟದಿಂದ)** ಕಡಿವಾಣವಿರಲಿ. ಸಾಂಸ್ಕೃತಿಕ ಕಡಿವಾಣ ಹಾಕಬಾರದು. ಎಲ್ಲದಕ್ಕೂ ಸರ್ಕಾರಗಳ ಬಾಗಿಲು ಬಡಿಯಬಾರದು ಎಂದರು.

ಕನ್ನಡ ನಾಡಿನಲ್ಲಿ ಸಾಹಿತಿಗಳು ಬಹಳ ವಿಶೇಷವೇನಲ್ಲ. ಬರೆಯದ ಬರಹಗಾರರನ್ನು, ಹಾಡದ ಹಾಡುಗಾರರನ್ನು, ಓದುಬಾರದ ಸಾಹಿತ್ಯಾಸಕ್ತಿಗಳನ್ನು, ನೃತ್ತಿಸದ ನೃತ್ಯಗಾರರನ್ನು ಗೌರವಿಸುವವರೇ ನಿಜವಾದ ಸಾಹಿತಿಗಳು ಎಂದರು.

ಸಮಾಜದಲ್ಲಿ ಚಿಂತಕರು, ಕಲಾವಿದರು ಜನರಿಂದ ಮನ್ನಣೆ ಬಯಸಿದರೆ, ಜನಗಳಿಗೆ ಜವಾಬ್ದಾರಿಯಾಗುವ ಸಾಹಿತಿಗಳ ಅಗತ್ಯವಿದೆ. ಕನ್ನಡ ಜನರನ್ನು ಉಳಿಸಿದರೆ ಕನ್ನಡ ಭಾಷೆ ಉಳಿಯುವಂತವಾಗಬೇಕು. ಕನ್ನಡದ ಮಾಧ್ಯಮದಲ್ಲಿ ಓದಿದರೆ ಉದ್ಯೋಗ ಸಿಗುತ್ತದೆ ಎಂಬ ವಾತಾವರಣ ನಿರ್ಮಾಣ ವಾಗಬೇಕು ಎಂದರು.

ಜಿಲ್ಲಾಧಿಕಾರಿ ಡಾ. ಜಿ.ಎಂ. ಗಂಗಾಧರಸ್ವಾಮಿ ಮಾತನಾಡಿ, ಮಾತೃಭಾಷೆಯ ಕಲಿಕೆಯಿಂದ ಮಾತ್ರ ಸಾಧನೆ ಮಾಡಲು ಸಾಧ್ಯ ಎಂದರು.

ಬಳ್ಳಾರಿಯಂತಹ ಗಡಿಭಾಗಗಳಲ್ಲಿ ಪತ್ರಿಕಗಳೂ ಅನ್ಯಭಾಷೆಯಲ್ಲಿವೆ. ಕನ್ನಡ ಎಂಬುದು ಹಿರಿಮೆ, ಕೀಳಿರಿಮೆಯಲ್ಲ. ಇಂಗ್ಲೀಷ್ ಮಾಧ್ಯಮದಿಂದ ಸಾಧನೆ ಮಾಡುತ್ತೇವೆ ಎಂಬುದು ಸುಳ್ಳು ಎಂದು ಪ್ರತಿಪಾದಿಸಿದರು.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾದ ಚಿಂತಕ, ಡಾ.ಎ.ಬಿ.ರಾಮಚಂದ್ರಪ್ಪ, ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಯದೇವನಾಯ್ಕ, ಶಾಸಕ ಬಸವಂತಪ್ಪ, ಸರ್ಕಾರಿ ನೌಕರ ಸಂಘದ ತಾಲ್ಲೂಕು ಅಧ್ಯಕ್ಷ ಎ.ಎಲ್. ತಿಪ್ಪೇಸ್ವಾಮಿ, ಕಸಾಪ ಜಿಲ್ಲಾಧ್ಯಕ್ಷ ವಾಮದೇವಪ್ಪ, ಜಿ.ಪಂ ಮಾಜಿ ಸದಸ್ಯ ಕೆಪಿ.ಪಾಲಯ್ಯ, ತಹಶೀಲ್ದಾರ್ ಸೈಯದ್ ಕಲೀಂ ಉಲ್ಲಾ, ನಿಕಟಪೂರ್ವ ಜಿಲ್ಲಾಧ್ಯಕ್ಷ ಮಂಜುನಾಥ್ ಕುರ್ಕಿ, ಮಾಜಿ ಅಧ್ಯಕ್ಷ ಸದಾಶಿವ ಶ್ಯಾಗಲೆ, ಕೆ.ಎಸ್.ಎಸ್ ಶಿಕ್ಷಣ ಸಂಸ್ಥೆಯ ಎಚ್.ಕೆ.ಬಸವರಾಜ್, ಕಸಾಪ ಜಿಲ್ಲಾ ಕೋಶಾಧ್ಯಕ್ಷ ರಾಘವೇಂದ್ರ ನಾಯರಿ, ಕಸಾಪ ಜಿಲ್ಲಾ ಸಹಕಾರ್ಯದರ್ಶಿ ಕೆ.ಎಸ್. ವೀರೇಶ್ ಪ್ರಸಾದ್ ,ಜಿಲ್ಲಾ ಕಸಾಪ ಸಂಘಟನಾ ಕಾರ್ಯದರ್ಶಿ ಜಿಗಳಿ ಪ್ರಕಾಶ್, ಬ್ರಹ್ಮಾಕುಮಾರಿ ಈಶ್ವರಿ ವಿದ್ಯಾಲಯದ ಭಾರತಿ ಅಕ್ಕ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಇ.ಎಂ ಮಂಜುನಾಥ್, ಕಸಾಪ ತಾಲ್ಲೂಕು ಅಧ್ಯಕ್ಷೆ ಸುಜಾತಮ್ಮ ಇದ್ದರು.

> **ವೈಚಾರಿಕತೆ ವೈಜ್ಞಾನಿಕತೆಗೆ ಸಾಕ್ಷಿಯಾಗಿ ಎರಡು ದಿನಗಳ ಕಾಲ 14 ನೇ ಜಿಲ್ಲಾ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಿದೆ. 57 ಕೆರೆ ತುಂಬಿಸುವ ಯೋಜನೆ ಸಾಕಾರಗೊಂಡು ಕೆರೆಗಳು ಕೋಡಿ ಬಿದ್ದ ಜಲ ಸಂಭ್ರಮಕ್ಕಾಗಿ ಇಂದು ಜಲೋತ್ಸವ ಕಾರ್ಯಕ್ರಮ ನಡೆಯಲಿದೆ. ಸರಿಗಮಪ ಖ್ಯಾತ ಗಾಯಕರಾದ ಅರ್ಜುನ್ ಜನ್ಯ, ಅನುರಾಧ ಭಟ್ ಅವರ ತಂಡ ಭಾಗವಹಿಸಲಿದ್ದಾರೆ ಅಧಿಕ ಸಂಖ್ಯೆಯಲ್ಲಿ ಪ್ರೇಕ್ಷಕರು ಆಗಮಿಸಲು ಮನವಿ.**
> **- ಬಿ.ದೇವೇಂದ್ರಪ್ಪ, ಶಾಸಕರು, ಜಗಳೂರು**

# ಇಂದು ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ

**(1ನೇ ಪುಟದಿಂದ)** ಈ ನಡುವೆ ಶನಿವಾರ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್‌ಕೆ ಪಾಟೀಲ್ ಮತ್ತು ಸಾರಿಗೆ ಸಚಿವ ರಾಮಲಿಂಗಾ ರೆಡ್ಡಿ ಅವರು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಮನೆಗೆ ಭೇಟಿ ನೀಡಿದ್ದು, ಈ ಭೇಟಿ ಮಹತ್ವ ಪಡೆದುಕೊಂಡಿದೆ.

ಪರಮೇಶ್ವರ್ ಅವರ ನಿವಾಸದಲ್ಲಿ ನಡೆದ ನಾಯಕರ ಮಾತುಕತೆಗಳು ಸಿಎಲ್‌ಪಿ ಸಭೆಯಲ್ಲಿ ಪ್ರಸ್ತಾಪವಾಗುವ ಸಾಧ್ಯತೆಗಳಿವೆ ಎಂದು ಮೂಲಗಳು ತಿಳಿಸಿವೆ.

2023 ರಲ್ಲಿ ಮಾಡಿಕೊಂಡ ಒಪ್ಪಂದದ ಪ್ರಕಾರ, ಎರಡನೇ ಬಾರಿಗೆ ಮುಖ್ಯಮಂತ್ರಿಯಾಗುವಲ್ಲಿ ಯಶಸ್ವಿಯಾದ ಸಿದ್ದರಾಮಯ್ಯ ಅವರು, ತಮ್ಮ ಅಧಿಕಾರಾವಧಿಯ ಎರಡು ವರ್ಷಗಳನ್ನು ಪೂರ್ಣಗೊಳಿಸಿದ ನಂತರ ಅಧಿಕಾರ ಹಸ್ತಾಂತರಿಸಬೇಕಿದ್ದು, ಇದಕ್ಕೆ ಅವರು ಬದ್ಧರಾಗಿದ್ದಾರೆ. ಆದರೆ, ತಾವು ಆಯ್ಕೆ ಮಾಡಿದ ನಾಯಕ ಮುಖ್ಯಮಂತ್ರಿಯಾಗಬೇಕೆಂದು ಬಯಸುತ್ತಿದ್ದಾರೆಂದು ಉನ್ನತ ಮೂಲಗಳು ಮಾಹಿತಿ ನೀಡಿವೆ.

# ಬಂಧಿಸದಿದ್ದರೆ ಜಮೀರ್ ವಿರುದ್ಧ ಹೋರಾಟ

**(1ನೇ ಪುಟದಿಂದ)** ಹಸುಗಳ ಕೆಚ್ಚಲು ಕೊಯ್ದ ನೀಚರನ್ನು ಬಂಧಿಸದಿದ್ದರೆ ಸಚಿವ ಜಮೀರ್ ಅಹ್ಮದ್ ಖಾನ್ ವಿರುದ್ಧ ಹೋರಾಟ ನಡೆಸಲಾಗುವುದು ಎಂದು ಹೇಳಿದರು.

ಜಮೀರ್ ಅಹ್ಮದ್ ಅವರೇ, ಇದು ನಿಮ್ಮ ಕ್ಷೇತ್ರದಲ್ಲಿ ಆಗಿದೆ. ಇದನ್ನು ತಾವು ಗಂಭೀರವಾಗಿ ತೆಗೆದುಕೊಳ್ಳಬೇಕು. ಹಸು ಹಿಂದೂಗಳಿಗೆ ಅತ್ಯಂತ ಪೂಜ್ಯ ಪ್ರಾಣಿ. ಅದು ಬರೀ ಪ್ರಾಣಿ ಅಲ್ಲಾ, ಅದು ನಮಗೆ ಅನ್ನ ನೀಡುತ್ತದೆ, ಗೊಬ್ಬರ ಕೊಡುತ್ತದೆ, ಔಷಧಿ ಕೊಡುತ್ತದೆ ಹಾಗೂ ರೈತರ ಬೆನ್ನೆಲುಬು ಕೂಡ ಹೌದು. ಅದರ ಕೆಚ್ಚಲು ಕೊಯ್ದ ನೀಚರನ್ನು ಒದ್ದು ಒಳಗಡೆ ಹಾಕದಿದ್ದರೇ ರಾಜ್ಯದಲ್ಲಿ ಹೋರಾಟ ಮಾಡುತ್ತೇವೆ ಎಂದು ಹೇಳಿದರು.

ರಾಜ್ಯದಲ್ಲಿ ಗೋಹತ್ಯೆ ನಿಷೇಧ ಕಾನೂನು ಇದೆ. ಕಾನೂನು ಇದ್ದರೂ ಕಾಂಗ್ರೆಸ್‌ನ ಮುಸ್ಲಿಂ ತುಷ್ಟೀಕರಣ ಹಿನ್ನೆಲೆಯಲ್ಲಿ ನಿರಂತರ ಗೋಹತ್ಯೆ ಆಗುತ್ತಿದೆ. ನಿರಂತರ ಕಸಾಯಿ ಖಾನೆಗೆ ಹಸುಗಳು ಹೋಗುತ್ತಿವೆ. ಅದನ್ನು ತಡೆಯಬೇಕು ಎಂದು ಹೇಳಿದರು.

# ರಾಜ್ಯಾದ್ಯಂತ ಕರಾಳ ಸಂಕ್ರಾಂತಿ: ಅಶೋಕ್

**(1ನೇ ಪುಟದಿಂದ)** ಹೋಗಲಾಯಿತು. ಪ್ರತಿಭಟನೆಯ ಸಮಯದಲ್ಲಿ ಇವೇ ಹಸುಗಳನ್ನು ತೋರಿಸಲಾಗಿತ್ತು. ಅದಕ್ಕಾಗಿಯೇ ಮಚ್ಚು, ಡ್ರ್ಯಾಗರ್ ಬಳಸಿ ಹಸುಗಳ ಕೆಚ್ಚಲು ಕೊಯ್ದು, ಕಾಲು ಕತ್ತರಿಸಲಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈ ಭಾಗದಲ್ಲಿ ಸಿಸಿಟಿವಿ ಕ್ಯಾಮರಾ ಅಳವಡಿಸಿದರೆ ಅದನ್ನು ಕಿತ್ತುಕೊಂಡು ಹೋಗುತ್ತಾರೆ. ಈಗ ಆ ಪ್ರತಿಭಟನೆಯಲ್ಲಿ ಪಾಲ್ಗೊಂಡವರಿಗೆ ಬೆದರಿಕೆ ಹಾಕುವ ಕೆಲಸ ಮಾಡಿದ್ದಾರೆ. ಎಸಿಪಿ ಜೊತೆ ಮಾತಾನಾಡಿದ್ದು, ತಕ್ಷಣ ಕ್ರಮ ವಹಿಸುವಂತೆ ಸೂಚಿಸಿದ್ದೇನೆ. ಇಲ್ಲವಾದರೆ ತೀವ್ರವಾದ ಪ್ರತಿಭಟನೆ ಮಾಡುತ್ತೇವೆ. ಕಾಂಗ್ರೆಸ್ ಸಚಿವರು, ಮುಖ್ಯಮಂತ್ರಿ ಈ ಕಡೆ ತಿರುಗಿಯೂ ನೋಡಲ್ಲ ಎಂದರು.

# ಡಿ.ಕೆ. ಶಿವಕುಮಾರ್ ಸಿಎಂ ಆಗಲಿದ್ದಾರೆ: ಶಾಸಕ ಶಿವಗಂಗಾ

**(1ನೇ ಪುಟದಿಂದ)** ಶಿವಕುಮಾರ್ ಶಕ್ತಿ ಪ್ರದರ್ಶಿಸಿದ್ದಾರೆ. ಹೈಕಮಾಂಡ್ ಇದನ್ನು ಗಮನಿಸಿ ತೀರ್ಮಾನ ಕೈಗೊಳ್ಳುತ್ತದೆ. ಅವರಿಗೆ ಪ್ರತಿಫಲ ಸಿಗುವ ವಿಶ್ವಾಸವಿದೆ ಎಂದು ಜೆಡಿಎಸ್‌ನ 11 ಶಾಸಕರು ಕಾಂಗ್ರೆಸ್‌ಗೆ ಬರಲು ಸಜ್ಜಾಗಿದ್ದಾರೆ. ಪಕ್ಷದ ಹಿತದೃಷ್ಟಿಯಿಂದ ಎಲ್ಲರನ್ನು ಒಗ್ಗೂಡಿಸುವ ಕೆಲಸವನ್ನು ಡಿ.ಕೆ.ಶಿವಕುಮಾರ್ ಮಾಡುತ್ತಿದ್ದಾರೆ. ಮಾತಿಗಿಂತ ಹೆಚ್ಚು ಕೆಲಸ ಮಾಡುವುದು ಅವರ ಕಾರ್ಯವೈಖರಿ. ಕಷ್ಟಪಟ್ಟವರಿಗೆ ಒಳ್ಳೆಯ ದಿನಗಳು ಬರುತ್ತವೆ ಎಂದರು.

# ಮಲಗಿದ್ದ ಹಸುಗಳ ಕೆಚ್ಚಲು ಕೊಯ್ದ ಕಿಡಿಗೇಡಿಗಳು

**(1ನೇ ಪುಟದಿಂದ)** ಹೋರಾಟ ನಿಲುವುದಿಲ್ಲ ಎಂದು ಹೇಳಿದ್ದಾರೆ. ಘಟನೆಗೆ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ್ ತೀವ್ರವಾಗಿ ಕಿಡಿಕಾರಿದ್ದು, ಹಸುಗಳ ಮಾಲೀಕನಿಗೆ ರೂ.1 ಲಕ್ಷ ಪರಿಹಾರ ನೀಡುವುದಾಗಿ ತಿಳಿಸಿದ್ದಾರೆ.

ಗೃಹ ಸಚಿವ ಜಿ.ಪರಮೇಶ್ವರ್ ಅವರು ಪ್ರತಿಕ್ರಿಯೆ ನೀಡಿ, ಘಟನೆ ಸಂಬಂಧ ಪೊಲೀಸರು ತನಿಖೆ ನಡೆಸುತ್ತಿದ್ದಾರೆ, ಪೊಲೀಸರಿಂದ ವರದಿ ಕೇಳಲಾಗಿದ್ದು, ವರದಿ ಬಳಿಕ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದ್ದಾರೆ.

# 'ನಮ್ಮ ಊರು, ನಮ್ಮ ಹೊಣೆ' ತಂಡದಿಂದ ಶ್ರಮದಾನ



ಹರಿಹರ, ಜ.12- ಅಯ್ಯಪ್ಪ ಸ್ವಾಮಿ ದ್ವೀಪೋತ್ಸವದ ನಿಮಿತ್ತ ಅನ್ನಸಂತರ್ಪಣೆ ಹಮ್ಮಿಕೊಂಡಿದ್ದರಿಂದ ಭಾನುವಾರ ಇಲ್ಲಿನ 'ನಮ್ಮ ಊರು, ನಮ್ಮ ಹೊಣೆ' ತಂಡದವರು ತುಂಗಭದ್ರಾ ನದಿಯ ತಟವನ್ನು ಸ್ವಚ್ಛಗೊಳಿಸುವ ಮೂಲಕ ಶ್ರಮದಾನ ಮಾಡಿದರು.

ಈ ವೇಳೆ ತಂಡದ ಮುಖ್ಯಸ್ಥೆ ಅಂಜು ಸುರೇಶ್ ರಾಜೇನವರ್, ರವಿಕುಮಾರ್, ಸಾಕ್ಷಿ ಶಿಂಧೆ, ರಾಘವೇಂದ್ರ ತೆಲ್ಕರ್, ಸಾಕಮ್ಮ, ಪ್ರವೀಣ್ ಮಜ್ಜಿಗಿ, ಗಂಗಾಧರ್ ದುರಗೋಜಿ, ನಾಗರಾಜ್ ತೆಲ್ಕರ್, ಟಿ.ಪಿ. ನಿರಂಜನ, ನವನೀತ, ರೂಪ ಬಳ್ಳಾರಿ, ಅಜಯ್, ಎ. ಶ್ರೀನಿವಾಸ, ಅಂಬುಜಾ ಪಿ ರಾಜೋಳ್ಳಿ, ಲೋಕೇಶ್ ಮೂರ್ಕಲ್, ಅರುಣಾಸ್ವಾಮಿ, ಸಚಿನ್ ಇತರರು ಇದ್ದರು.

# ಸಹಕಾರ ಅಗತ್ಯ: ಶಾಸಕ ಬಸವಂತಪ್ಪ

**(1ನೇ ಪುಟದಿಂದ)** ವೆಚ್ಚದಲ್ಲಿ ಹೈಟೆಕ್ ಶಾಲಾ ಕೊಠಡಿ, ಶೌಚಾಲಯ ನಿರ್ಮಿಸಲಾಗುತ್ತಿದೆ. ಇಂತಹ ಸತ್ಕಾರ್ಯ ಗ್ರಾಮೀಣ ಮಕ್ಕಳ ಶೈಕ್ಷಣಿಕ ಪ್ರಗತಿಗೆ ಆಸರೆಯಾಗಲಿದೆ ಎಂದು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಡಿಡಿಪಿಐ ಕೊಟ್ರೇಶ್, ಕೋಲ್ಕುಂಟೆ ಗ್ರಾಮಾಭ್ಯುದಯ ಸಂಘದ ಗೌರವಾಧ್ಯಕ್ಷ ಸುಚೇಂದ್ರ ಪ್ರಸಾದ್, ಆಹ್ವಾನ ಫೌಂಡೇಶನ್‌ನ ಬ್ರಜ ಕಿಶೋರ್ ಪ್ರಧಾನ್, ಮಾನಸಿ, ಶಾಲೆಯ ಮುಖ್ಯ ಶಿಕ್ಷಕ ಚಂದ್ರಪ್ಪ, ಓಂಕಾರಪ್ಪ, ಚಂದ್ರಪ್ಪ, ಪಿಡಿಒ ಇಸ್ರತ್, ಅಶೋಕ್, ಲೋಕೇಶ್, ಎಸ್‌ಡಿಎಂಸಿ ಸದಸ್ಯರು, ಮಕ್ಕಳು ಹಾಗೂ ಗ್ರಾಮಸ್ಥರು ಇದ್ದರು.

# ನಮ್ಮ ಜೀವನಕ್ಕೆ ಮಾರ್ಗದರ್ಶನ

**(1ನೇ ಪುಟದಿಂದ)** ಕುಸುಮಾ ಲೋಕೇಶ್ವರಪ್ಪ ಅವರಿಗೆ ಇದೇ ವೇಳೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಜಿ.ಪಂ ಮಾಜಿ ಸದಸ್ಯ ಕೆ.ಜಿ. ಬಸವನಗೌಡ್ರು, ದವನ ಕಾಲೇಜಿನ ಬಾತಿ ಬಸವರಾಜ್, ಶರಣ ಸಾಹಿತ್ಯ ಪರಿಷತ್‌ನ ಕಾರ್ಯದರ್ಶಿ ಬಿ.ಟಿ ಪ್ರಕಾಶ್, ಹೆಚ್.ಕೆ ಲಿಂಗರಾಜು, ಕೆ.ಜಿ. ವೀರಬಸಪ್ಪ, ವೀರೇಶ್ ಮತ್ತಿತರರಿದ್ದರು.


**ಸೈಟುಗಳು ಮಾರಾಟಕ್ಕಿವೆ**
ವಾಜಪೇಯಿ ಬಡಾವಣೆ ಪೂರ್ವ-ದಕ್ಷಿಣ ಕಾರ್ನರ್ 50x50. ಜೆ.ಹೆಚ್. ಪಟೇಲ್ ಬಡಾವಣೆ ಪೂರ್ವ 20x30 ಶಿವ-ಪಾರ್ವತಿ ಬಡಾವಣೆ ಪಶ್ಚಿಮ 30x40 ಬನಶಂಕರಿ ಬಡಾವಣೆ ಪೂರ್ವ 40x60 (ಸಂಭ್ರಮ್ ಹೋಟೆಲ್ ಪಕ್ಕ) ಪಶ್ಚಿಮ 30x70 ಅಕ್ಕ-ಪಕ್ಕ (60 ಅಡಿ ರಸ್ತೆ)
ಐಗೂರು ವಿಜಯಕುಮಾರ
99457 02495

**ಸೈಟ್ ಮಾರಾಟಕ್ಕೆ**
ಕರ್ನಾಟಕ ಗೃಹ ಮಂಡಳಿ (KHB) 50x80 ಉತ್ತರ, 40X60 ಉತ್ತರ ಕಮರ್ಷಿಯಲ್ ಡಬಲ್ ರೋಡ್‌ಗೆ
ಕಿರಣ್ ಬೂಸ್ನೂರ್ (ಏಜೆಂಟ್)
97315 63409, 98440 63409

**ಮನೆಗಳು ಮಾರಾಟಕ್ಕಿವೆ**
ಅಪಾರ್ಟ್‌ಮೆಂಟ್‌ನಲ್ಲಿ ಸಿಂಗಲ್ ಬೆಡ್ ರೂಮ್, ಡಬ್ಬಲ್ ಬೆಡ್ ರೂಮ್, ಮೂರು ಬೆಡ್ ರೂಮ್ ಮನೆ. ಅಡ್ವಾನ್ಸ್ ಬುಕ್ಕಿಂಗ್ ಮಾಡಿಕೊಂಡಿರುತ್ತೇವೆ.
ಐನಳ್ಳಿ ಚನ್ನಬಸಪ್ಪ ಏಜೆಂಟ್
99166 12110

**ಮನೆಗಳು ಮಾರಾಟಕ್ಕಿವೆ**
30x50 West ಕೆಳಗಡೆ 2 ಬೆಡ್ ರೂಮ್, ಮೇಲುಗಡೆ 2 ಬೆಡ್ ರೂಮ್, 30x55 North ಮನೆ, 30x50 South ಡುಪ್ಲೆಕ್ಸ್ ಮನೆ.
ಐನಳ್ಳಿ ಚನ್ನಬಸಪ್ಪ ಏಜೆಂಟ್
99166 12110

**ಬೇಕಾಗಿದ್ದಾರೆ**
ಬಟ್ಟೆ ಅಂಗಡಿಯಲ್ಲಿ ಕೆಲಸ ಮಾಡಲು ಮಹಿಳಾ ಮತ್ತು ಪುರುಷ ಅಭ್ಯರ್ಥಿಗಳು ಬೇಕಾಗಿದ್ದಾರೆ. ಪುರುಷ ಅಭ್ಯರ್ಥಿಗಳಿಗೆ ಊಟ ಮತ್ತು ವಸತಿ ಸೌಲಭ್ಯವಿದೆ. ಸಂಪರ್ಕಿಸಿ :
98442 94446

**ಸೈಟುಗಳು, ಮನೆಗಳು ಮಾರಾಟಕ್ಕಿವೆ**
ಬನಶಂಕರಿ ಲೇಔಟ್, ಶಿವ-ಪಾರ್ವತಿ ಲೇಔಟ್, ಡಾಲರ್ಸ್ ಕಾಲೋನಿ, ಎಸ್.ಎಸ್. ಲೇಔಟ್, ವಿದ್ಯಾನಗರ, ಗ್ಲಾಸ್ ಹೌಸ್ ಲೇಔಟ್ ಹಾಗೂ ಕುಂದುವಾಡ, ಯರಗುಂಟೆಯಲ್ಲಿ ಇನ್‌ವೆಸ್ಟ್‌ಮೆಂಟ್ ಸೈಟುಗಳು, ಮನೆಗಳು & ಕಮರ್ಷಿಯಲ್ ಸೈಟ್ ಯೋಗ್ಯ ಬೆಲೆಯಲ್ಲಿ ದೊರೆಯುತ್ತವೆ. 30x40, 40x60, 30x50.
97315 12365

**ಮನೆ ಲೀಸ್‌ಗೆ ಇದೆ**
2BHK 2ನೇ ಮಹಡಿ ಮನೆ, ಲೀಸ್ ಮೊತ್ತ 5 ಲಕ್ಷ, ದೇವರಾಜ ಅರಸ್ ಬಡಾವಣೆ 'ಎ' ಬ್ಲಾಕ್, 2ನೇ ಮೇನ್, 2ನೇ ಕ್ರಾಸ್, ದಾವಣಗೆರೆ. ಬೋರ್ ವೆಲ್/ ಕಾರ್ಪೊರೇಷನ್ ನೀರಿನ ವ್ಯವಸ್ಥೆ ಹಾಗೂ ಕಾರ್ ಪಾರ್ಕಿಂಗ್ ಸೌಲಭ್ಯವಿದೆ.
7349397287, 9741746205

**ಸೈಟುಗಳು ಮಾರಾಟಕ್ಕಿವೆ**
S.S. 'A' ಬ್ಲಾಕ್ (ಕವಿ ಹೋಟೆಲ್ ಹತ್ತಿರ) ದಕ್ಷಿಣ 30x50 KHB ಕಾಲೋನಿ (ಜಡ್ಜ್ ಮನೆ ಡಬ್ಬಲ್ ರೋಡ್ ಮತ್ತು ಸರ್ಕಲ್ ಹತ್ತಿರ) ಉತ್ತರ 50x80 ಹೊಸ ಕುಂದವಾಡ ಸುಶಿ ಕಲ್ಯಾಣ ಮಂಟಪ ಹಿಂಭಾಗ ದಕ್ಷಿಣ 30x40.
ಐಗೂರು ವಿಜಯಕುಮಾರ್
99457 02495

**REQUIRED RECEPTIONIST**
Young Female candidate fluent in English & Computer knowledge. Contact :
9164256425
8660998651

**FOR LEASE / RENT**
20000 Sqft of open land
5000 Sqft of Godown with power, water, safety walls available for Industry / Commercial purpose.
97403 10044

**ಮಾರಾಟಕ್ಕಿದೆ**
ಸಿಮೆಂಟ್ ಇಟ್ಟಿಗೆ ಮಿಷನ್ ಮಾರಾಟಕ್ಕಿದೆ.
94489 24273

**WANTED (English)**
Name :- VC Fibernet
Job type :- Marketing Expert, Sales Executive, Fiber technician Fresher/ experience. Location:- Davanagere. Contact :-
9738830061, 8405050573

**ಬೇಕಾಗಿದ್ದಾರೆ**
ರಾತ್ರಿ ಶಿಫ್ಟ್‌ನಲ್ಲಿ ಕೆಲಸ ಮಾಡಲು ಕಂಪ್ಯೂಟರ್ ಆಪರೇಟರ್ ಬೇಕಾಗಿದ್ದಾರೆ ಖುದ್ದಾಗಿ ಜನತಾವಾಣಿ ಕಚೇರಿಯನ್ನು ಬೆಳಿಗ್ಗೆ 12 ರಿಂದ ಸಂಜೆ 5 ಗಂಟೆಯ ಒಳಗೆ ಸಂಪರ್ಕಿಸಿ

**REQUIRED**
Experienced, Accountant having Tally and GST knowledge are required to work in Office.
REDDY ASSOCIATIES
# 82/19,P B Road, Beside Wellness Stores, Opp: Renuka Manidar, Davangere.
99000 22030

**ಬೇಕಾಗಿದ್ದಾರೆ**
ಪ್ರವಾಸ ಉದ್ಯಮದಲ್ಲಿ ಅನುಭವವಿರುವವರು ಕಾರ್ಯನಿರ್ವಾಹಕರ (Executive) ಹುದ್ದೆಗಳು ಖಾಲಿ ಇದೆ. ಆಸಕ್ತರು ಸಂಪರ್ಕಿಸಿ :
96069 20410
ಸುಶೀಲ್ ಹಾಲಿಡೇಸ್ & ಫಾರೆಕ್ಸ್ ಲಿ. ದಾವಣಗೆರೆ

**ARTIFICIAL INTELLIGENCE (AI)**
Age group 11 years to 18 years, **Bruit Academy**
Nijalingappa Badavane.
97390 66956

**ಮನೆ ಬಾಡಿಗೆಗೆ ಇದೆ**
2BHK & Big Hall with First floor both rooms, #1697/73, 5ನೇ ಮೇನ್, 16ನೇ ಕ್ರಾಸ್, ತರಳಬಾಳು ಬಡಾವಣೆ, ದಾವಣಗೆರೆ.
99720 24250, 95034 49171

**HOUSE FOR LEASE**
**Room for rent**
2 BHK House 1st floor, 2 Rooms 2nd Floor.
Add : Near DC office, PB Road, Behind Global Public School, Davanagere.
91138 07848

**ಬೇಕಾಗಿದ್ದಾರೆ**
ಹದಡಿ ರಸ್ತೆ ಲಕ್ಷ್ಮಿ ವೆಂಕಟೇಶ್ವರ ಗ್ರಾನೈಟ್ ಎದುರಿಗೆ ಹೊಸದಾಗಿ ತೆರೆದಿರುವ 'ವುಮನ್ಸ್ ಹೆಲ್ತ್‌ಕೇರ್ ಮತ್ತು ರಾಜ್ ಫರ್ಟಿಲಿಟಿ ಸೆಂಟರ್' ಕ್ಲಿನಿಕ್‌ಗೆ ನರ್ಸ್ (staff Nurse) ಮತ್ತು ರಿಸೆಪ್ಷನ್ ಕೆಲಸ ಮಾಡಲು PUC ಓದಿರುವ ಯುವತಿಯರು ಬೇಕಾಗಿದ್ದಾರೆ.
98444 81661
ಹತ್ತಿರದವರಿಗೆ ಆದ್ಯತೆ

**ಟ್ಯಾಂಕ್ ಕ್ಲೀನಿಂಗ್**
ಮನೆಯ ನೀರಿನ ತೊಟ್ಟಿ, ಟ್ಯಾಂಕ್‌ಗಳು ಗಲೀಜಾಗಿದ್ದರೆ ಯಂತ್ರಗಳನ್ನು ಬಳಸಿ ನಾವು ಕ್ಲೀನ್ ಮಾಡುತ್ತೇವೆ.
ಅತ್ಯುತ್ತಮ ಸೇವೆಗೆ ಸಂಪರ್ಕಿಸಿ
99863 61250
80739 48857

**TUITIONS**
CBSE / ICSE Boards
Class 8th, 9th, 10th
CRASH COURSES FOR
NEET / CET / IIT - JEE
PUC I / PUC II / PCMB
*NEET Long Term / Supplementary Exams*
97398 65711, 94822 44114

ರಕ್ತದಾನ ಶ್ರೇಷ್ಠದಾನ

**ಓದುಗರ ಗಮನಕ್ಕೆ**
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಪ್ರತಿಪಾದಿತವಾದ ವಸ್ತು, ವಿಷಯ, ವಿಚಾರಗಳು, ಜಾಹೀರಾತುದಾರರ ಅಭಿಪ್ರಾಯ ಆಗಿರುತ್ತವೆಯೇ ಹೊರತು ಆ ಅಭಿಪ್ರಾಯಗಳಿಗೆ ಪತ್ರಿಕೆ ಯಾವುದೇ ರೀತಿಯಿಂದ ಹೊಣೆಯಲ್ಲ.
ಅವುಗಳಲ್ಲಿನ ಮಾಹಿತಿ - ವಸ್ತು ಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

**Avoid Mosquiteos**
Mosquito Nets for doors & windows
**Sri Gowri Enterprises**
#7C2, 4th cross Near Shaneshwara Temple Karur Industrial Area, P.B Road, Davanagere -577006
72049 94628

**ಬೇಕಾಗಿದ್ದಾರೆ**
PUC ಆದ ಮಹಿಳೆಯರು ಸ್ಟಾಕ್ ತೆಗೆಯಲು, ಹೋಲ್‌ಸೇಲ್ ಫಾರ್ಮಾದಲ್ಲಿ ಬಿಲ್ಲಿಂಗ್ ಮಾಡಿರುವ ಅನುಭವವುಳ್ಳ ಮಹಿಳೆಯರು ಬೇಕಾಗಿದ್ದಾರೆ. ಭೇಟಿಯ ಸಮಯ ಸಂಜೆ 6:30 ರ ನಂತರ
ಶ್ರೀ ಗುರು ಎಂಟರ್ ಪ್ರೈಸಸ್
#579, 6ನೇ ಮುಖ್ಯ ರಸ್ತೆ, ಪಿಜೆ ಬಡಾವಣೆ ದಾವಣಗೆರೆ.

**ಮನೆ ಕ್ಲೀನಿಂಗ್ ಮಾಡಿಕೊಡಲಾಗುವುದು**
ಮನೆ ಕ್ಲೀನಿಂಗ್ ಮತ್ತು ಹಳೆಮನೆ ಬಾಡಿಗೆ ಕೊಡುವ ಮನೆಗಳನ್ನು ಕ್ಲೀನಿಂಗ್ ಮಾಡಿಕೊಡಲಾಗುವುದು. ಹಾಗೂ ಬಾತ್ ರೂಂ ಆಸಿಡ್ ವಾಶ್ ಮಾಡಿಕೊಡಲಾಗುವುದು.
99863 61250, 80730 24690

**ರೊಟ್ಟಿ ಮಾಡುವ ಯಂತ್ರ ಮಾರಾಟಕ್ಕಿದೆ.**
91483 57225

**ಗೋಡೌನ್ ಬಾಡಿಗೆಗೆ**
20 HP ಕರೆಂಟ್, 4,000 ಅಡಿ + ಸ್ಟೋರೇಜ್ 2,500 ಅಡಿ ಕರೂರು ಇಂಡಸ್ಟ್ರಿಯಲ್ ಏರಿಯಾ KIADB ಗೋಡೌನ್ ಬಾಡಿಗೆಗೆ ಮತ್ತು ಹಳೆಯ ಡೈನಿಂಗ್ ಚೇರ್‌ಗಳು ಸೇಲ್‌ಗೆ ಇವೆ.
98459 77475
92421 45611

**ಬೇಕಾಗಿದ್ದಾರೆ**
20 ವರ್ಷ ಮೇಲ್ಪಟ್ಟ ಪುರುಷ ಅಭ್ಯರ್ಥಿಗಳು ಅಲ್ಯೂಮಿನಿಯಂ ಫ್ಯಾಬ್ರಿಕೇಷನ್ ಕೆಲಸಕ್ಕೆ ಬೇಕಾಗಿದ್ದಾರೆ.
ಸ್ಥಳ : ದಾವಣಗೆರೆ.
91138 07848

**ಮದ್ಯಪಾನ ಬಿಡಬೇಕೆ ?**
ಉಬ್ಬಸ ರೋಗ, ಕಾಲು ನೋವು, ಅಲರ್ಜಿ, ಮಧುಮೇಹ, ವೈಟ್‌ಗೈನ್ ಮತ್ತು ವೈಟ್ ಲಾಸ್, ಗ್ಯಾಸ್ಟ್ರಿಕ್ ಇತ್ಯಾದಿಗಳಿಗೆ ನಮ್ಮನ್ನು ಸಂಪರ್ಕಿಸಿ. ಪ್ರತಿ ತಿಂಗಳು 12 ಮತ್ತು 13 ರಂದು ವಿಳಾಸ : ಶ್ರೀ ಲಾಡ್ಜ್, ಪಂಜಾಬ್ ನ್ಯಾಷನಲ್ ಬ್ಯಾಂಕ್ ಹತ್ತಿರ, ಪಿ.ಬಿ.ರಸ್ತೆ, ದಾವಣಗೆರೆ.
ಡಾ।। ಶರ್ಮಾ
ಸಮಯ: ಬೆ. 10 ರಿಂದ ಮಧ್ಯಾಹ್ನ 3
ಮೊ. 98869 40831

**ಮನೆ ಬಾಡಿಗೆಗಿದೆ**
ದಾವಣಗೆರೆ ನಗರದ ಕುಂದವಾಡ ರಸ್ತೆ ಮಹಾಲಕ್ಷ್ಮಿ ಲೇಔಟ್ 11ನೇ ಕ್ರಾಸ್, # 4061/25, ಸಿದ್ದೇಶ್ವರ ನಿಲಯ, ನೆಲ ಮಹಡಿ, ಡಬಲ್ ಬೆಡ್ ರೂಂ ಮನೆ ಬಾಡಿಗೆಗೆ ಇದೆ. (ಸಸ್ಯಹಾರಿಗಳಿಗೆ ಮಾತ್ರ)
9110278741, 9620322728

**Receptionist Wanted**
1. Fluent in Kannada, English and Hindi
2. Should be well versed in MS Office
3. Good written and verbal communication skills
88842 40410

**ಶ್ರೀ ಸಾಯಿ ಫೈನಾನ್ಸ್ (ರಿ)**
ಹೋಟೆಲ್, ಬಟ್ಟೆ ಅಂಗಡಿ, ರೆಸ್ಟೋರೆಂಟ್, ಪ್ರಾವಿಜನ್ ಸ್ಟೋರ್, ಫ್ಯಾನ್ಸಿ ಸ್ಟೋರ್, ಬೇಕರಿ ಟೀಸ್ಟಾಲ್, ಫಾಸ್ಟ್ ಫುಡ್ ಹೋಟೆಲ್, ಗ್ಯಾರೇಜ್, ಮೊಬೈಲ್ ಶಾಪ್, ಎಲೆಕ್ಟ್ರಿಕಲ್ ಶಾಪ್, ಚಿಪ್ಸ್ ಶಾಪ್ ಇತ್ಯಾದಿ ಶಾಪ್‌ಗಳಿಗೆ ಫೈನಾನ್ಸ್ ನೀಡಲಾಗುವುದು.
ಕೆಲಸಕ್ಕೆ ಬೇಕಾಗಿದ್ದಾರೆ
ಶ್ರೀಸಾಯಿ ಎಗ್ ಸೆಂಟರ್‌ನಲ್ಲಿ ಕೆಲಸಕ್ಕೆ ಹುಡುಗರು ಬೇಕಾಗಿದ್ದಾರೆ.
ವಿದ್ಯಾರ್ಹತೆ : SSLC ಉತ್ತೀರ್ಣ
96860 22969

**ಬೇಕಾಗಿದ್ದಾರೆ**
ಇಂಗ್ಲೀಷ್‌ನಲ್ಲಿ ಮಾತನಾಡಲು ಬರುವಂತಹ ಮತ್ತು ಬೇಸಿಕ್ ಕಂಪ್ಯೂಟರ್ ತಿಳಿದಿರುವಂತಹ ಮಹಿಳಾ ಅಭ್ಯರ್ಥಿ ಬೇಕಾಗಿದ್ದಾರೆ.
ಸಂಪರ್ಕಿಸಿ :
99006 66122

**ಬೇಕಾಗಿದ್ದಾರೆ**
ಹೋಟೆಲ್‌ನಲ್ಲಿ ಕೆಲಸ ಮಾಡಲು ಅನುಭವವಿರುವ ಸಪ್ಲೈಯರ್ ಮತ್ತು ಕ್ಲೀನರ್ ಬೇಕಾಗಿದ್ದಾರೆ. ಜಯನಗರ 'ಬಿ' ಬ್ಲಾಕ್, ಎಸ್.ಎಸ್. ಹೈಟೆಕ್ ಆಸ್ಪತ್ರೆ ರಸ್ತೆ, ದಾವಣಗೆರೆ. ಸಂಪರ್ಕಿಸಿ :
99861 62462, 97420 97140

## ಮಾಯಕೊಂಡದಲ್ಲಿ ಇಂದು ನಮ್ಮೂರ ಕನ್ನಡ ಹಬ್ಬ

ಕನ್ನಡ ಯುವಶಕ್ತಿ ಕೇಂದ್ರದ ವತಿಯಿಂದ ನಮ್ಮೂರ ಕನ್ನಡ ಕಾರ್ಯಕ್ರಮವು ಆಂಜನೇಯ ಸ್ವಾಮಿ ದೇವಸ್ಥಾನ ವೃತ್ತದಲ್ಲಿ ಇಂದು ಸಂಜೆ 4 ಗಂಟೆಗೆ ನಡೆಯಲಿದೆ ಎಂದು ಜಿ. ಜಗದೀಶ್, ಎಸ್.ಆರ್. ಶರಣಪ್ಪ ತಿಳಿಸಿದ್ದಾರೆ.

ಬೆಳಿಗ್ಗೆ 10.30ಕ್ಕೆ ಶಾಲಾ - ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಜಾನಪದ ಕಲಾ ತಂಡಗಳೊಂದಿಗೆ ಕನ್ನಡ ತಾಯಿ ಭುವನೇಶ್ವರಿಯ ಭವ್ಯ ಮೆರವಣಿಗೆ ನಡೆಯಲಿದೆ. ಬೆಳಿಗ್ಗೆ 11 ಗಂಟೆಗೆ ಮೈಸೂರಿನ ಪ್ರಾಧ್ಯಾಪಕರಾದ ಡಾ. ಉಷಾ ಹೆಗಡೆ ಅವರು ಕನ್ನಡ ಧ್ವಜಾರೋಹಣವನ್ನು ನೆರವೇರಿಸಲಿದ್ದಾರೆ.

ಸಂಜೆ 4 ಗಂಟೆಗೆ ದಿ. ಸಿ.ಕೆ. ಪುಟ್ಟಲಿಂಗಪ್ಪ ವೇದಿಕೆಯಲ್ಲಿ ಸಭಾ ಕಾರ್ಯಕ್ರಮ ಏರ್ಪಾಡಾಗಿದ್ದು, ಮಾಯಕೊಂಡ ಗ್ರಾ.ಪಂ. ಅಧ್ಯಕ್ಷರಾದ ಲತಾ ಮಲ್ಲಿಕಾರ್ಜುನ ಜಿ.ಆರ್. ಅವರು ಅಧ್ಯಕ್ಷತೆಯಲ್ಲಿ ವಹಿಸಲಿದ್ದಾರೆ.

ದಾವಣಗೆರೆ ವಿವಿ ಸಹಾಯಕ ಪ್ರಾಧ್ಯಾಪಕ ಡಾ. ಭೀಮಾಶಂಕರ್ ಜೋಷಿ ಅವರಿಂದ ಕನ್ನಡ ನುಡಿ ನಮನ. ಶಾಸಕ ಕೆ.ಎಸ್. ಬಸವಂತಪ್ಪ, ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಬಿ.ವಾಮದೇವಪ್ಪ, ಪ್ರಾಚಾರ್ಯ ಡಾ. ಸಿ. ಬಸವರಾಜಪ್ಪ, ಪೊಲೀಸ್ ವೃತ್ತ ನಿರೀಕ್ಷಕ ಟಿ. ನಾಗರಾಜ್ ಮುಖ್ಯ ಅತಿಥಿಗಳಾಗಿದ್ದಾರೆ.

ಇದೇ ಸಂದರ್ಭದಲ್ಲಿ ಎಸ್ಸೆಸ್ಸೆಲ್ಸಿ, ಪಿಯುಸಿ, ಪದವಿ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನಡೆಯಲಿದೆ.

ಸಂಜೆ 5.30ಕ್ಕೆ ಗಾಯಕ ಎಸ್. ಸುನಿಲ್ ಕುಮಾರ್ ಅವರಿಂದ ಸಂಗೀತ ಕಾರ್ಯಕ್ರಮ ಹಾಗೂ ಶಾಲಾ - ಕಾಲೇಜು ಮಕ್ಕಳಿಂದ 'ಸಂಕ್ರಾಂತಿ ಬಂತು' ಸಾಂಸ್ಕೃತಿಕ ಕಲರವ ಏರ್ಪಾಡಾಗಿದೆ ಎಂದು ಎಂ.ಜಿ. ಗುರುನಾಥ್, ಸಂಡೂರು ಮಂಜುನಾಥ್ ವಿವರಿಸಿದ್ದಾರೆ.

## ನಗರದಲ್ಲಿ ಇಂದು ಶ್ರೀ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವ



ಡಿಸಿಎಂ ಲೇಔಟ್ ಹಿಂಭಾಗದ ರಾಜೇಂದ್ರ ಬಡಾವಣೆಯಲ್ಲಿರುವ ಶ್ರೀ ಬನಶಂಕರಿ ದೇವಿಯ ದೇವಸ್ಥಾನದಲ್ಲಿ ಬನದ ಹುಣ್ಣಿಮೆ ಪ್ರಯುಕ್ತ 11ನೇ ವರ್ಷದ ಜಾತ್ರಾ ಮಹೋತ್ಸವವನ್ನು ಇಂದು ಹಮ್ಮಿಕೊಳ್ಳಲಾಗಿದೆ.


ಇಂದು ಬೆಳಗ್ಗೆ 6 ಗಂಟೆಗೆ ಪಂಚಾಮೃತ ಅಭಿಷೇಕ, ಬೆಳಿಗ್ಗೆ 10.30 ರಿಂದ ವಿಶೇಷ ಅಲಂಕಾರ ನೆರವೇರಲಿದೆ. ನಂತರ ಮಧ್ಯಾಹ್ನ 12 ಗಂಟೆಗೆ ಅನ್ನ ಸಂತರ್ಪಣೆ ನಡೆಯಲಿದ್ದು, ಮಧ್ಯಾಹ್ನ 3.30ಕ್ಕೆ ಶ್ರೀ ಬನಶಂಕರಿ ದೇವಿಯ ಮೆರವಣಿಗೆ ನಿಟ್ಟುವಳ್ಳಿಯ ರಾಜ ಬೀದಿಗಳಲ್ಲಿ ಸಾಗಲಿದೆ.

## ನಗರದಲ್ಲಿ ಇಂದು ಶ್ರೀ ಉತ್ಸವಾಂಭ ದೇವಿ ಜಾತ್ರೋತ್ಸವ, ಮೆರವಣಿಗೆ



ವಸಂತ ರಸ್ತೆ ಹಾಲೇಶ್ವರ ಪ್ರಿಂಟಿಂಗ್ ಪ್ರೆಸ್ ಹಿಂಭಾಗದಲ್ಲಿರುವ ಶ್ರೀ ಉತ್ಸವಾಂಭದೇವಿ, ಶ್ರೀ ಚೌಡೇಶ್ವರಿದೇವಿ, ಶ್ರೀ ಗಣೇಶ, ಶ್ರೀ ಆದಿಶಕ್ತಿ, ಶ್ರೀ ಮಹಾಲಕ್ಷ್ಮೀದೇವಿ ದೇವಸ್ಥಾನದಲ್ಲಿ ಶ್ರೀ ದೇವಿಯವರ ಜಾತ್ರಾ ಮಹೋತ್ಸವದ ಅಂಗವಾಗಿ ಇಂದು ಬೆಳಗಿನ ಜಾವ 4-30ಕ್ಕೆ ತಾಯಿ ಯವರಿಗೆ ರುದ್ರಾಭಿಷೇಕ, ಸಹಸ್ರ, ಬಿಲ್ವಾರ್ಚನೆ, ಪುಷ್ಪ ಅಲಂಕಾರ ಪೂಜೆ ಹಾಗೂ 9-30 ರಿಂದ ಸರ್ವ ಭಕ್ತಾದಿಗಳಿಗೂ ಉಡಿ ಅಕ್ಕಿ ಸೇವೆ ಮತ್ತು 12-30ಕ್ಕೆ ಪ್ರಸಾದ ವಿನಿಯೋಗ ಕಾರ್ಯಕ್ರಮವಿರುತ್ತದೆ ಮತ್ತು ಸಂಜೆ 5-30ಕ್ಕೆ ಮಾತ್ರೋತ್ರಿಯವರ ಮೆರವಣಿಗೆ ಏರ್ಪಾಡಾಗಿದೆ.

## ಎಸ್ಸೆಸ್ ಭೇಟಿ ಮಾಡಿದ ಲೋಕಿಕೆರೆ ನಾಗರಾಜ್



ಬೆಂಗಳೂರು, ಜ. 12 - ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರನ್ನು ಇಲ್ಲಿನ ಅವರ ನಿವಾಸದಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಲೋಕಿಕೆರೆ ನಾಗರಾಜ್ ಅವರು ಭೇಟಿ ಮಾಡಿ ಯೋಗಕ್ಷೇಮ ವಿಚಾರಿಸಿದರು.

ಈ ಸಂದರ್ಭದಲ್ಲಿ ನಾಗರಾಜ್ ಅವರ ಪುತ್ರ ಅಭಿಷೇಕ್ ಲೋಕಿಕೆರೆ ಉಪಸ್ಥಿತರಿದ್ದರು.

## ನಗರದಲ್ಲಿ ಇಂದು ಗಣೇಶ್ ಪೇಟೆಯ ವಿನಾಯಕ ಸ್ಕೂಲ್ ವಾರ್ಷಿಕೋತ್ಸವ

ಗಣೇಶ್ ಪೇಟೆಯ ವಿನಾಯಕ ಪಬ್ಲಿಕ್ ಸ್ಕೂಲ್ ವಾರ್ಷಿಕೋತ್ಸವ ಕಾರ್ಯಕ್ರಮವು ಗುಂಡಿ ಮಹಾದೇವಪ್ಪ ಕಲ್ಯಾಣ ಮಂಟಪದಲ್ಲಿ ಇಂದು ಸಂಜೆ 4 ಗಂಟೆಗೆ ನಡೆಯಲಿದೆ. ಶಾಲಾ ಕಾರ್ಯದರ್ಶಿ ಡಾ. ವೀರೇಶ್ ಬಿ. ಬಿರಾದಾರ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಾರ್ವಜನಿಕ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಜಿ. ಕೊಟ್ರೇಶ್, ಎಸ್ಪಿ ಶ್ರೀಮತಿ ಉಮಾ ಪ್ರಶಾಂತ್, ಕ್ಷೇತ್ರ ಶಿಕ್ಷಣಾಧಿಕಾರಿ ಶೇರ್ ಅಲಿ, ಜಿಲ್ಲಾ ಶಾಶ್ವತ ಅನುದಾನ ರಹಿತ ಶಾಲಾ - ಕಾಲೇಜು ಆಡಳಿತ ಮಂಡಳಿ ಸಂಘದ ಅಧ್ಯಕ್ಷ ತ್ಯಾವಣಗಿ ವೀರಭದ್ರಸ್ವಾಮಿ, ಬ್ಯಾಂಕ್ ಆಫ್ ಮಹಾರಾಷ್ಟ್ರ ಬ್ರಾಂಚ್ ಮ್ಯಾನೇಜರ್ ಶ್ರೀಮತಿ ಎ. ಪ್ರಿಯಾಂಕ, ಹಿರಿಯ ಪತ್ರಕರ್ತ ಹೆಚ್.ಬಿ. ಮಂಜುನಾಥ್, ನಿಸರ್ಗ ಕಾನ್ವೆಂಟ್ ಕಾರ್ಯದರ್ಶಿ ಹೆಚ್. ಜಿ. ಪ್ರಕಾಶ್, ಸಾಹಿತಿ ಮಂಜುಳಾ ಸಂಗಮೇಶ್, ಹಳೇಪೇಟೆ ಕ್ಲಸ್ಟರ್ ಸಿಆರ್‌ಪಿ ಕೆ.ಎಂ. ಮಲ್ಲಿಕಾರ್ಜುನ್, ಇಂಜಿನಿಯರ್ ಕೆ.ಎಸ್. ಸ್ವರೂಪಾನಂದ ಗೌಡ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

## ಮಂಟರಘಟ್ಟದಲ್ಲಿ ಇಂದು ಗುಗ್ಗಳೋತ್ಸವ

ಚನ್ನಗಿರಿ ತಾಲ್ಲೂಕು ಮಂಟರಘಟ್ಟ ಗ್ರಾಮದಲ್ಲಿ ಜುಂಜೇಶ್ವರ ಸ್ವಾಮಿ ಜಾತ್ರೆ ಪ್ರಯುಕ್ತ ಇಂದು ಬೆಳಿಗ್ಗೆ ಜುಂಜೇಶ್ವರ ಸ್ವಾಮಿಯ ಮಹಾಮಂಗಳಾರತಿ ಹಾಗೂ ಗುಗ್ಗಳೋತ್ಸವ ಜರುಗಲಿದೆ.

# ಮಕ್ಕಳಿಗೆ ನಾರಿಶಕ್ತಿ ಅಹಲ್ಯಾಬಾಯಿ ಪರಿಚಯಿಸುವ ಅಗತ್ಯವಿದೆ



ದಾವಣಗೆರೆ, ಜ. 12- ಅಹಲ್ಯಾಬಾಯಿ ಹೋಳ್ಕರ್‌ಗೆ ಪ್ರಜಾ ಕಲ್ಯಾಣ ಮುಖ್ಯ ಗುರಿಯಾಗಿತ್ತು. ಮಾಳವ ಪ್ರಾಂತ್ಯದ ರಾಣಿಯಾಗಿ, ಸಾಧ್ವಿಯಾಗಿ, ಸುಧಾರಕಳಾಗಿ, ಧರ್ಮನಿಷ್ಠಳಾಗಿ ಸಾಧನೆ ಮಾಡಿದ ಅಗ್ರಗಣ್ಯ ಮಹಿಳೆ ಎಂದು ಸಾಮರಸ್ಯ - ಕರ್ನಾಟಕ ದಕ್ಷಿಣ ಪ್ರಾಂತ ಸಹ ಸಂಯೋಜಕ ಗು. ರುದ್ರಯ್ಯ ಸ್ಮರಿಸಿದರು. ಜಿಲ್ಲಾ ಸಾಮರಸ್ಯ ವೇದಿಕೆ ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ಅವರ ತೃತೀಯ ಜನ್ಮ ಶತಮಾನೋತ್ಸವ ಸಮಿತಿ ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ಅವರ 300 ನೇ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳಿಗೆ ದೇಶದ ನಾರಿಶಕ್ತಿ ಅಹಲ್ಯಾಬಾಯಿ ಹೋಳ್ಕರ್ ಅವರನ್ನು ಪರಿಚಯಿಸಿ ಕೊಡುವ ಅಗತ್ಯವಿದೆ. ಅಹಲ್ಯಾಬಾಯಿ ಅವರ ಜೀವನದ ಯಶೋಗಾಥೆಯನ್ನು ಪ್ರತಿಯೊಬ್ಬರೂ ಸಹ ತಿಳಿಯಬೇಕಾಗಿದೆ ಎಂದರು.

ಇಂದಿನ ಆಧುನಿಕ ಯುಗದಲ್ಲಿ ಮಹಿಳೆಯರು ಎಲ್ಲಾ ರಂಗಗಳಲ್ಲಿ ಮುನ್ನಡೆ ಸಾಧಿಸುತ್ತಿದ್ದಾರೆ. ತನ್ಮೂಲಕ ಮಹಿಳಾ ಸಬಲೀಕರಣ ಸಾಧ್ಯವಾಗಿದೆ. ಆದರೆ ಪ್ರಾಚೀನ ಕಾಲದಲ್ಲೂ ಸಹ ಮಹಿಳೆ ಅತ್ಯಂತ ಸಬಲಳಾಗಿದ್ದಳು. ಕೌಟುಂಬಿಕ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುವ ಜೊತೆಗೆ ರಾಷ್ಟ್ರ ಕಾರ್ಯಗಳಲ್ಲಿ ಸಹ ತೊಡಗಿಸಿಕೊಂಡಿದ್ದನ್ನು ನಾವು ಕಾಣಬಹುದು. ತೊಟ್ಟಿಲ ತೂಗುವ ಕೈ ದೇಶವನ್ನು ಸಹ ಆಳ ಬಲ್ಲದು ಎಂಬುದನ್ನು ವೀರ ವನಿತೆಯರು ತೋರಿಸಿಕೊಟ್ಟಿದ್ದಾರೆಂದು ಹೇಳಿದರು.

ಅಹಲ್ಯಾಬಾಯಿ ಚಿಕ್ಕ ವಯಸ್ಸಿನಲ್ಲಿಯೇ ತನ್ನವರನ್ನು ಕಳೆದುಕೊಂಡಿದ್ದರೂ ಧೃತಿಗೆಡದೇ ಮಾಳವ ಪ್ರಾಂತದ ರಾಣಿಯಾಗಿ ಸಮರ್ಥ ಆಡಳಿತ ನೀಡಿ, ಪ್ರಜಾ ಸೇವೆಯನ್ನು ಅತ್ಯಂತ ಪ್ರಾಮಾಣಿಕವಾಗಿ ಮಾಡಿದರು.

ಶೈಕ್ಷಣಿಕ, ಅಧ್ಯಾತ್ಮಿಕ ಮತ್ತು ಕೈಗಾರಿಕಾ ಕ್ಷೇತ್ರದಲ್ಲೂ ಅಹಲ್ಯಾಬಾಯಿ ಅವರಿಗೆ ಇದ್ದ ದೂರದೃಷ್ಟಿ, ಬದ್ಧತೆ, ಕಾಳಜಿ ಇತರೆ ಆಡಳಿತಗಾರರಿಗೆ ಮಾದರಿಯಾಗಿದೆ ಎಂದರು.

**ಗು. ರುದ್ರಯ್ಯ**

ಎರಡು ಶತಮಾನಗಳ ಹಿಂದೆಯೇ ಮಹಿಳೆಯರಿಗೆ ಯುದ್ಧ ನೈಪುಣ್ಯತೆಯ ತರಬೇತಿ ನೀಡಿ, ಸೈನ್ಯವನ್ನು ಸಂಘಟಿಸಿದ್ದರು. ಕುಲುಮೆಗಳನ್ನು ಸ್ಥಾಪಿಸುವ ಮೂಲಕ ಪುರುಷರಿಗೂ ಉದ್ಯೋಗ ಕಲ್ಪಿಸಿಕೊಟ್ಟಿದ್ದರು. ಆರ್ಥಿಕ ಸ್ವಾವಲಂಬನೆಗಾಗಿ ಅಂದು ಸ್ಥಾಪಿಸಿದ್ದ ಕೈಮಗ್ಗದ ಸೀರೆ ನೇಯ್ಗೆಯು ಇಂದಿಗೂ ಮಹೇಶ್ವರಿ ಬ್ರಾಂಡಿನ ಹೆಸರಿನಲ್ಲಿ ಪ್ರಸಿದ್ಧಿ ಪಡೆದಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ದಾವಣಗೆರೆ ಜನಶಿಕ್ಷಣ ಸಂಸ್ಥೆ ಛೇರ್ಮನ್ ಜಯಲಕ್ಷ್ಮಿ ಎಸ್.ಮಹರ್ವಾಡೆ ಮಾತನಾಡಿ, ಅಹಲ್ಯಾಬಾಯಿ ಅವರಿಗೆ ದೇಶ ಸೇವೆಯೇ ಪರಮ ಗುರಿಯಾಗಿತ್ತು. 300 ವರ್ಷಗಳು ಗತಿಸಿದರೂ ಸ್ಮರಿಸುವ ಕೆಲಸವನ್ನು ಮಾಡಿದ್ದಾರೆ. ಕೇವಲ ಸ್ವಾರ್ಥಕ್ಕಾಗಿ ಜೀವನ ಸಾಗಿಸದೇ ಸಮಾಜದ ಋಣ ತೀರಿಸುವ ಕೆಲಸವನ್ನು ಮಾಡಬೇಕೆಂದರು.

ಮಕ್ಕಳಿಗೆ ಕೇವಲ ಅಂಕ ಗಳಿಕೆಯ ಶಿಕ್ಷಣ ನೀಡದೇ ಸಂಸ್ಕೃತಿ, ಸಂಸ್ಕಾರ ನೀಡಬೇಕಾಗಿದೆ. ಮಕ್ಕಳಿಗೆ ಅಹಲ್ಯಾಬಾಯಿ ಅವರ ಧೀರತನ, ಸೇವಾ ಗುಣಗಳನ್ನು ಮಕ್ಕಳಿಗೆ ತಿಳಿಸಿಕೊಡುವ ಅಗತ್ಯವಿದೆ ಎಂದರು.

ಲೋಕಮಾತಾ ಅಹಲ್ಯಾಬಾಯಿ ಹೋಳ್ಕರ್ ತ್ರಿಶತಾಬ್ದಿ ಜನ್ಮದಿನಾಚರಣೆ ಸಮಿತಿ ಪದಾಧಿಕಾರಿಗಳಾದ ಗೀತಾ ಬಾಲಚಂದ್ರ, ಶೋಭಾ ಕೊಟ್ರೇಶ್, ಅನಿತಾ ಪಟ್ಟಣಶೆಟ್ಟಿ, ವಿಜಯಲಕ್ಷ್ಮಿ ಹಿರೇಮಠ, ಡಾ.ಆರತಿ ಸುಂದರೇಶ್, ಬಸವರಾಜ್ ಮತ್ತಿತರರು ಭಾಗವಹಿಸಿದ್ದರು.

## ಬಾಲಕಿಯರು ರಾಷ್ಟ್ರಮಟ್ಟಕ್ಕೆ ಬೆಳೆದು, ಹೆಸರು ಮಾಡಲಿ




ದಾವಣಗೆರೆ, ಜ. 12- ದಾವಣಗೆರೆ ಜಿಲ್ಲಾ ಫುಟ್‌ಬಾಲ್ ಅಸೋಸಿಯೇಷನ್ ಹಾಗೂ ಲಯನ್ಸ್ ಕ್ಲಬ್ ವತಿಯಿಂದ ಕ್ರೀಡೆಗಳ ಮೂಲಕ ಶಾಲಾ ಬಾಲಕಿಯರ ಸಬಲೀಕರಣಕ್ಕಾಗಿ ಖೇಲೋ ಇಂಡಿಯಾ ಅಡಿಯಲ್ಲಿ ಅಧ್ಯಕ್ಷ ದಿನೇಶ್ ಕೆ ಶೆಟ್ಟಿ ನೇತೃತ್ವದಲ್ಲಿ ನಡೆಯುತ್ತಿರುವ ನಗರದ ಲೂರ್ಡ್ಸ್ ಬಾಯ್ಸ್ ಸ್ಕೂಲ್ ಆವರಣದಲ್ಲಿ ರಾಜ್ಯಮಟ್ಟದ ಬಾಲಕಿಯರ ಫುಟ್ಬಾಲ್ ಪಂದ್ಯಾವಳಿಯನ್ನು ಉದ್ಘಾಟಿಸಿ ಮಹಿಳೆಯರ ತಂಡಗಳು ರಾಷ್ಟ್ರ ಮಟ್ಟದಲ್ಲಿ ಹೆಸರು ಮಾಡಲಿ ಎಂದು ಲಯನ್ಸ್ ಕ್ಲಬ್ ಅಧ್ಯಕ್ಷ ಉಳವಯ್ಯ ತಿಳಿಸಿದರು.

13 ವರ್ಷದೊಳಗಿನ ಬಾಲಕಿಯರ ವಿಭಾಗದಲ್ಲಿ ನಡೆಯುವ ಪಂದ್ಯಾವಳಿಗಳಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸ್ಪರ್ಧಾಳುಗಳಿಗೆ ದಾವಣಗೆರೆಯ ಪ್ರಸಿದ್ಧ ಬೆಣ್ಣೆ ದೋಸೆ ತಿಂದು ಖುಷಿಯಿಂದ ಸ್ಪರ್ಧೆಗಳನ್ನು ಆಡಿ ಎಂದು ಮಹಾನಗರ ಪಾಲಿಕೆಯ ಮಾಜಿ ವಿರೋಧ ಪಕ್ಷದ ನಾಯಕರಾದ ಜಿ.ಎಸ್. ಮಂಜುನಾಥ್ ಗಡಿಗುಡಾಳ್ ಮಕ್ಕಳಿಗೆ ಪ್ರೋತ್ಸಾಹ ನೀಡಿದರು.

**ಲಯನ್ಸ್ ಕ್ಲಬ್ ಅಧ್ಯಕ್ಷ ಎಸ್.ಜಿ. ಉಳವಯ್ಯ**

ಲಯನ್ಸ್ ಕ್ಲಬ್ ಕಾರ್ಯದರ್ಶಿಗಳಾದ ಅಜಯ್ ಅವರು ಇಂತಹ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಮಕ್ಕಳಿಗೆ ಸರ್ಕಾರಿ ಕೆಲಸ ಸರ್ಕಾರಿ ಸೌಲಭ್ಯಗಳು ಲಭಿಸುವುದರಿಂದ ಉತ್ತಮ ಆಟಗಳನ್ನು ಪ್ರದರ್ಶಿಸಿ ಅಂತಹ ಸವಲತ್ತುಗಳನ್ನು ಪಡೆಯಿರಿ ಎಂದು ಮಕ್ಕಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಫುಟ್ಬಾಲ್ ಅಧ್ಯಕ್ಷರಾದ ದಿನೇಶ್ ಕೆ. ಶೆಟ್ಟಿ, ಮಹಾನಗರ ಪಾಲಿಕೆಯ ಸದಸ್ಯರಾದ ಉದಯಕುಮಾರ್ ಯುವರಾಜ್ ತರಬೇತುದಾರ ಮುಸ್ತಫ ಚೇತನ್ ಕುಮಾರ್ ಮುಂತಾದವರಿದ್ದರು.

## ಸಿಎಂ ಕುರ್ಚಿ ಖಾಲಿ ಇಲ್ಲ : ಸಚಿವ ಮಹದೇವಪ್ಪ

ಮೈಸೂರು, ಜ.12- ರಾಜ್ಯದಲ್ಲಿ ಮುಖ್ಯಮಂತ್ರಿ ಕುರ್ಚಿ ಖಾಲಿ ಇಲ್ಲ. ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಕೆಲಸ ಮಾಡುತ್ತಿದ್ದು, ಅವರೇ ಮುಂದುವರೆಯುತ್ತಾರೆ ಎಂದು ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಹೇಳಿದ್ದಾರೆ.

ಭಾನುವಾರ ಪತ್ರಕರ್ತರ ಜೊತೆ ಮಾತನಾಡಿದ ಅವರು ಮುಖ್ಯಮಂತ್ರಿ ಕುರ್ಚಿ ವಿಚಾರವಾಗಿ ನಮ್ಮಲ್ಲಿ ಯಾವುದೇ ಚರ್ಚೆ ಆಗುತ್ತಿಲ್ಲ. ನಾವು ಯಾರೂ ಒಬ್ಬರಿಗೊಬ್ಬರು ಗುಂಪುಗಾರಿಕೆ ಮಾಡುತ್ತಿಲ್ಲ. ಒಟ್ಟಿಗೆ ಕುಳಿತು ಊಟ ಮಾಡುವುದು ಅಪರಾಧವೇ? ಎಂದು ಪ್ರಶ್ನಿಸಿದರು.

ಮುಖ್ಯಮಂತ್ರಿ ಬದಲಾವಣೆಗೂ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆಗೂ ಸಂಬಂಧ ಇಲ್ಲ. 21ರಂದು ಕಾಂಗ್ರೆಸ್ ಸಮಾವೇಶ ನಡೆಯಲಿದ್ದು, ಆ ಸಂಬಂಧ ಚರ್ಚೆಗೆ ಎಐಸಿಸಿ ರಾಜ್ಯ ಉಸ್ತುವಾರಿ ರಣದೀಪ ಸಿಂಗ್ ಸುರ್ಜೇವಾಲಾ ಕರ್ನಾಟಕಕ್ಕೆ ಬರುತ್ತಿದ್ದಾರೆ ಎಂದರು. 'ಬಜೆಟ್ ತರುವಾಯ ಸಿದ್ದರಾಮಯ್ಯ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ' ಎಂಬ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿಕೆ ಕುರಿತು ಪ್ರತಿಕ್ರಿಯಿಸಿ ' ಈ ಬಗ್ಗೆ ಹೇಳಲು ಅವರೇನು ಕಾಂಗ್ರೆಸ್ ಹೈಕಮಾಂಡೇ?' ಎಂದು ಪ್ರಶ್ನಿಸಿದರು.

## 'ಸರಸ್ವತಿ ಸಾಧಕ ಸಿರಿ' ರಾಷ್ಟ್ರ ಪ್ರಶಸ್ತಿಗೆ ಅರ್ಜಿ ಆಹ್ವಾನ

ದಾವಣಗೆರೆ, ಜ. 12- ಉಡುಪಿ ಜಿಲ್ಲೆಯ ಸಾಲಿಗ್ರಾಮದ ಶ್ರೀಮತಿ ಸರಸ್ವತಿ ದಾಸಪ್ಪ ಶೆಣೈ ಪ್ರತಿಷ್ಠಾನದ ಆಶ್ರಯದಲ್ಲಿ 70ನೇ ವರ್ಷದ ಕನ್ನಡ ನಿತ್ಯೋತ್ಸವದ ಪ್ರಯುಕ್ತ ಹಮ್ಮಿಕೊಳ್ಳಲಾಗಿರುವ 'ಸರಸ್ವತಿ ಸಾಧಕ ಸಿರಿ' ರಾಷ್ಟ್ರ ಪ್ರಶಸ್ತಿಗೆ ವಿವಿಧ ಕ್ಷೇತ್ರಗಳ ಸಾಧಕರ ಒತ್ತಾಯದ ಮೇರೆಗೆ ಅರ್ಜಿ ಸಲ್ಲಿಸುವ ದಿನಾಂಕ ವಿಸ್ತರಿಸಲಾಗಿದೆ.

ಸಾಧಕರಿಗೆ ಸಾಧಕರ ಭಾವಚಿತ್ರವಿರುವ ಸನ್ಮಾನ ಪತ್ರ, ಶಾರದ ಮಾತೆಯ ಸ್ಮರಣಿಕೆಯೊಂದಿಗೆ ಸನ್ಮಾನಿಸಲಾಗುವುದು ಎಂದು ಡಾ. ನಾಗೇಶ ಸಂಜೀವ ಕಿಣಿ ಪ್ರಕಟಿಸಿದ್ದಾರೆ.

ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಹಯೋಗದೊಂದಿಗೆ ನಡೆಯಲಿರುವ ಈ ಪ್ರತಿಷ್ಠಿತ ಪ್ರಶಸ್ತಿಗೆ ಹೆಸರು ನೋಂದಾಯಿಸಲು ಇದೇ ದಿನಾಂಕ 15 ಕೊನೆಯ ದಿನ. ಹೆಚ್ಚಿನ ಮಾಹಿತಿಗೆ ವಿವಿಧ ಕ್ಷೇತ್ರಗಳ ಸಾಧಕರು 9538732777 ಸಂಪರ್ಕಿಸಬಹುದು ಎಂದು ಸಾಲಿಗ್ರಾಮ ಗಣೇಶ್ ಶೆಣೈ, ಶ್ರೀಪತಿ ರಾಘವೇಂದ್ರ ಶೆಣೈ ವಿನಂತಿಸಿದ್ದಾರೆ.

## ಅದಮ್ಯ ಕಲಾ ಸಂಸ್ಥೆಯಿಂದ 'ನುಡಿ ಹಬ್ಬ'



ದಾವಣಗೆರೆ, ಜ.12- ನಗರದ ಸೀತಮ್ಮ ಪದವಿಪೂರ್ವ ಕಾಲೇಜಿನ ಆವರಣದಲ್ಲಿ ಅದಮ್ಯ ಕಲಾ ಸಂಸ್ಥೆ ವತಿಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಅದಮ್ಯ ಆರ್ಟ್ಸ್ ಫೌಂಡೇಷನ್‌ನ ಸಹಯೋಗದೊಂದಿಗೆ ಕನ್ನಡ ಗೀತೆಗಳ 'ನುಡಿ ಹಬ್ಬ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಪತ್ರಕರ್ತ ಬಾ.ಮ. ಬಸವರಾಜಯ್ಯ ಕಾರ್ಯಕ್ರಮ ಉದ್ಘಾಟಿಸಿ, ಕನ್ನಡ ಭಾಷೆಯ ಹಿರಿಮೆ ಹಾಗೂ ಅದನ್ನು ಉಳಿಸಿ ಬೆಳೆಸುವ ಬಗ್ಗೆ ವಿವರವಾಗಿ ಮಾತನಾಡಿದರು.

ನಂತರ ಪೃಥ್ವಿ ಇವರ ವೀಣಾವಾದನ, ಕಾಂತರಾಜು ಚಾಮರಾಜನಗರ ಇವರ ಸುಗಮ ಸಂಗೀತ, ಅರುಣ್ ಎಸ್. ತೋರವಳ್ಳಿ ಮತ್ತು ಶ್ರೀ ವೀರೇಶ್ವರ ಪುಣ್ಯಾಶ್ರಮದ ಕಲಾವಿದರ ಹಾಡುಗಾರಿಕೆ ನೆರೆದವರ ಮನಸೂರೆಗೊಂಡಿತು. ಸದಾಶಿವ ಹೂಗಾರ್ ತಬಲಾ ಸಾಥ್ ನೀಡಿದರೆ, ಹಾರ್ಮೋನಿಯಂನಲ್ಲಿ ಮಹಾಂತೇಶ್ ಗದಗ ಸಾಥ್ ನೀಡಿದರು.

ಅಧ್ಯಕ್ಷತೆಯನ್ನು ಅದಮ್ಯ ಕಲಾ ಸಂಸ್ಥೆ ಅಧ್ಯಕ್ಷ ಡಾ. ಎ.ಎಂ. ಶಿವಕುಮಾರ್ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ರೆಡ್‌ಕ್ರಾಸ್‌ನ ರವಿಕುಮಾರ್ ಎ.ಜೆ., ಇನಾಯತ್ ವುಲ್ಲಾ, ಸೀತಮ್ಮ ಕಾಲೇಜಿನ ಉಪ ಪ್ರಾಚಾರ್ಯ ಮಂಜಪ್ಪ, ಸಂಸ್ಥೆಯ ಅನಿತಾ ಬಸವರಾಜ್ ಮತ್ತಿತರರು ಉಪಸ್ಥಿತರಿದ್ದರು. ಗುರುರಾಜ್ ಪೂಜಾರ್ ಕಾರ್ಯಕ್ರಮ ನಿರೂಪಿಸಿದರೆ, ಶ್ರೀಮತಿ ಗೀತಾ ಮಾಲತೇಶ್ ಸ್ವಾಗತಿಸಿದರು.

## ಭರಮಸಾಗರದಲ್ಲಿ ಇಂದು ಉಚಿತ ನೇತ್ರ ತಪಾಸಣಾ ಶಿಬಿರ

ಎಸ್.ಎಂ.ಎಲ್ ಚಾರಿಟೇಬಲ್ ಟ್ರಸ್ಟ್ ಸಂಯುಕ್ತಾಶ್ರಯದಲ್ಲಿ ಸಮುದಾಯ ಆರೋಗ್ಯ ಕೇಂದ್ರ (ಸರ್ಕಾರಿ ಆಸ್ಪತ್ರೆ) ಭರಮಸಾಗರ ಇಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಹಮ್ಮಿಕೊಂಡಿದ್ದು, ಬೆಳಿಗ್ಗೆ 9 ರಿಂದ ಮಧ್ಯಾಹ್ನ 1 ರವರೆಗೆ ನಡೆಯಲಿದೆ.

ಶಿಬಿರಕ್ಕೆ ಬರುವವರು ಕಡ್ಡಾಯವಾಗಿ 2 ಫೋಟೋ, 2 ರೇಷನ್ ಕಾರ್ಡ್, ಮತದಾನ ಪತ್ರ ಜೆರಾಕ್ಸ್ ಕಡ್ಡಾಯವಾಗಿ ತರಬೇಕು ಹಾಗೂ ಮೊಬೈಲ್ ಸಂಖ್ಯೆ ಹಾಗೂ ಜೊತೆಗೆ ಸಂಬಂಧಿಕರನ್ನು ಕರೆದುಕೊಂಡು ಬರಲು ತಿಳಿಸಿದ್ದಾರೆ. ವಿವರಕ್ಕೆ ಎಸ್‌ಎಮ್‌ಎಲ್ ನಾಗರಾಜ್ (98444 778800), ಎಸ್‌ಎಮ್‌ಎಲ್ ಸಂತೋಷ್ (99727 04777), ಸ್ಟುಡಿಯೋ ಸಂತೋಷ್ (97415 57539) ಅವರನ್ನು ಸಂಪರ್ಕಿಸಬಹುದು.

## ಎಸ್ಸೆಸ್ ಆರೋಗ್ಯ ವಿಚಾರಿಸಿದ ರೈತ ಸಂಘದ ಅಧ್ಯಕ್ಷ ಎಸ್.ಕೆ. ಪವಿತ್ರ



ಬೆಂಗಳೂರು, ಜ. 12 - ಹಿರಿಯ ಶಾಸಕರಾದ ಶಾಮನೂರು ಶಿವಶಂಕರಪ್ಪ ಅವರನ್ನು ಇಲ್ಲಿನ ಅವರ ನಿವಾಸದಲ್ಲಿ ದಿ|| ಶಾಮನೂರು ಸಂಗಪ್ಪನವರ ಮಕ್ಕಳಾದ ಎಸ್.ಎಸ್. ಜಯಣ್ಣ, ಎಸ್.ಎಸ್. ಶಿವಸಂಗಪ್ಪ, ಎಸ್.ಎಸ್. ಬಸವಲಿಂಗಪ್ಪ ಮತ್ತು ದಿ|| ಎಸ್. ಕಲ್ಲೇಶಪ್ಪನವರ ಪುತ್ರ ಮತ್ತು ರೈತ ಸಂಘದ ಅಧ್ಯಕ್ಷ ಎಸ್.ಕೆ. ಪವಿತ್ರ, ನಿರ್ದೇಶಕ ಪಿ.ಎಸ್. ಸತೀಶ್ ಭೇಟಿ ಮಾಡಿ ಆರೋಗ್ಯ ವಿಚಾರಿಸಿದರು.

## ನಗರಕ್ಕೆ ಇಂದು ಸಾತಿ ಸುಂದರೇಶ್

**ನಿವೇಶನ ಮತ್ತು ವಸತಿ ರಹಿತರ ಕಾರ್ಯಾಗಾರ**




ಸಿಪಿಐ ರಾಜ್ಯ ಕಾರ್ಯದರ್ಶಿ ಸಾತಿ ಸುಂದರೇಶ್ ಅವರು ಇಂದು ನಗರಕ್ಕೆ ಆಗಮಿಸಲಿದ್ದಾರೆ ಎಂದು ಸಿಪಿಐ ಜಿಲ್ಲಾ ಕಾರ್ಯದರ್ಶಿ ಕಾಂ. ಆವರಗೆರೆ ಚಂದ್ರು ತಿಳಿಸಿದ್ದಾರೆ.

ಬೆಳಿಗ್ಗೆ 11 ಗಂಟೆಗೆ ದಾವಣಗೆರೆ ಅಶೋಕ ರಸ್ತೆಯಲ್ಲಿರುವ ಪಂಪಾಪತಿ ಭವನದಲ್ಲಿ ನಿವೇಶನ ಮತ್ತು ವಸತಿ ರಹಿತರ ಸೌಲಭ್ಯ ಪಡೆಯುವ ಮಾಹಿತಿ ಕಾರ್ಯಾಗಾರವನ್ನು ಸಿಪಿಐ ರಾಜ್ಯ ಕಾರ್ಯದರ್ಶಿ ಕಾಂ. ಸಾತಿ ಸುಂದರೇಶ್ ಉದ್ಘಾಟಿಸುವರು.

ಮಾಹಿತಿ ಕಾರ್ಯಾಗಾರಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಕಾಂ. ಕೆಎಸ್ ಜನಾರ್ಧನ, ಕಾಂ. ಎಚ್.ಎಂ. ಸಂತೋಷ್ ರವರುಗಳು ಕೂಡ ಆಗಮಿಸುವರು.

ಸಿಪಿಐ ಜಿಲ್ಲಾ ಕಾರ್ಯದರ್ಶಿ ಕಾಂ. ಆವರಗೆರೆ ಚಂದ್ರು, ಸಹಕಾರ್ಯದರ್ಶಿ ಕಾಂ. ಹೆಚ್.ಜಿ. ಉಮೇಶ್, ಖಜಾಂಚಿ ಕಾಂ ಮಹಮ್ಮದ್ ರಫೀಕ್ ಸೇರಿದಂತೆ ಸಿಪಿಐ ನ ಜಿಲ್ಲಾ ಇತರೆ ಮುಖಂಡರುಗಳು ಉಪಸ್ಥಿತರಿರುವರು.

## ಬಿಜೆಪಿ ಮಂಡಲ ಅಧ್ಯಕ್ಷರುಗಳ ಆಯ್ಕೆ

ದಾವಣಗೆರೆ, ಜ.12- ಭಾರತೀಯ ಜನತಾ ಪಕ್ಷದ ಮಂಡಲ ಅಧ್ಯಕ್ಷರುಗಳನ್ನು ಆಯ್ಕೆ ಮಾಡಲಾಗಿದ್ದು, ಚನ್ನಗಿರಿಗೆ ಕುಮಾರಸ್ವಾಮಿ ಮಲಹಾಳ್, ಹೊನ್ನಾಳಿಗೆ ಎ.ಎಂ. ನಾಗರಾಜ್ ಅರಕೆರೆ ಮತ್ತು ಜಗಳೂರಿಗೆ ಶ್ರೀನಿವಾಸ ಜೆ. ಸೊಕ್ಕೆ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ.

ಪಕ್ಷದ ಸಂಘಟನಾ ಪರ್ವ ಕಾರ್ಯದಲ್ಲಿ ಜಿಲ್ಲೆಯ ಚನ್ನಗಿರಿ, ಹೊನ್ನಾಳಿ ಮತ್ತು ಜಗಳೂರು ಮಂಡಲಗಳಲ್ಲಿ ಕಾರ್ಯಕರ್ತರು ಭಾಗವಹಿಸಿ ಯಶಸ್ವಿಯಾಗಿ ಸಾಮಾನ್ಯ ಸದಸ್ಯತ್ವ, ಸಕ್ರಿಯ ಸದಸ್ಯತ್ವ ಮತ್ತು ಭೂತ್ ಸಮಿತಿ ರಚನೆ ಯಶಸ್ವಿಯಾಗಿದೆ ಎಂದು ಜಿಲ್ಲಾಧ್ಯಕ್ಷ ರಾಜಶೇಖರ್ ನಾಗಪ್ಪ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಉರ್ದು ಶಾಲೆಗಳು ಕುಂಠಿತ : ಎಂ.ಎಲ್ಸಿ ಜಬ್ಬಾರ್ ಕಳವಳ



ದಾವಣಗೆರೆ, ಜ. 12- ಜಿಲ್ಲೆಯಲ್ಲಿನ ಉರ್ದು ಶಾಲೆಗಳು ಕುಂಠಿತಗೊಂಡಿರುವ ಬಗ್ಗೆ ವಿಧಾನ ಪರಿಷತ್ ಸದಸ್ಯ ಕೆ. ಅಬ್ದುಲ್ ಜಬ್ಬಾರ್ ಅವರು ಕಳವಳ ವ್ಯಕ್ತಪಡಿಸಿದರು.

ಕರ್ನಾಟಕ ಉರ್ದು ಅಕಾಡೆಮಿ ವತಿಯಿಂದ ಗೋಲ್ಡನ್ ಪ್ಯಾಲೇಸ್‌ನಲ್ಲಿ ಹಮ್ಮಿಕೊಂಡಿದ್ದ ಮುಷಾ ಇರಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಸ್ಪರ್ಧಾತ್ಮಕ ಯುಗದ ಇಂದಿನ ದಿನಗಳಲ್ಲಿ ಶಿಕ್ಷಣ ಸಂಸ್ಥೆಗಳನ್ನು ನಡೆಸುವುದು ಬಹಳ ಕಷ್ಟ. ನೂತನವಾಗಿ ಶಾಲೆಗಳನ್ನು ತೆರೆದು ಶಿಕ್ಷಣ ನೀಡುವ ಬದಲು ಸರ್ಕಾರಿ ಶಾಲೆಗಳನ್ನು ದತ್ತು ಪಡೆದು ಅಭಿವದ್ಧಿಪಡಿಸಿದರೆ ಉರ್ದು ಭಾಷೆ ಬೆಳವಣಿಗೆಗೆ ಮಾರ್ಗವಾಗುತ್ತದೆ ಎಂದು ಕರೆ ನೀಡಿದರು.

ಕರ್ನಾಟಕ ಉರ್ದು ಅಕಾಡೆಮಿ ಅಧ್ಯಕ್ಷ ಮಹಮ್ಮದ್ ಅಲಿ ಅವರು ಮಾತನಾಡಿ, ಈ ಹಿಂದಿನ ಸರ್ಕಾರಗಳು ಉರ್ದು ಅಕಾಡೆಮಿಗೆ ಕಡಿಮೆ ಅನುದಾನ ನೀಡುತ್ತಿದ್ದರು. ಪ್ರಸ್ತುತ ಕಾಂಗ್ರೆಸ್ ಸರ್ಕಾರದ ಸಿದ್ಧರಾಮಯ್ಯ ಅವರು ಮುಖ್ಯಮಂತ್ರಿಯಾದ ನಂತರ 1.50 ಕೋಟಿ ರೂ.ಗಳ ಅನುದಾನ ನೀಡಲು ಮುಂದಾಗಿದ್ದಾರೆ. ಸಚಿವ ಬಿ. ಝಡ್. ಜಮೀರ್ ಅಹಮ್ಮದ್ ಅವರು ಉರ್ದು ಭಾಷೆ ಅಭಿವೃದ್ಧಿಗಾಗಿ ಬಜೆಟ್‌ನಲ್ಲಿ 10 ಕೋಟಿ ರೂ.ಗಳ ಪ್ರಸ್ತಾವನೆ ಇಟ್ಟಿದ್ದಾರೆ ಎಂದು ಹೇಳಿದರು.

ಪಾಲಿಕೆ ಮಹಾಪೌರರಾದ ಕೆ. ಚಮನ್ ಸಾಬ್ ಮಾತನಾಡಿ ಅಧಿಕಾರ ಶಾಶ್ವತ ಅಲ್ಲ, ಸಮಯಕ್ಕೆ ಅನುಗುಣವಾಗಿ ಬರುತ್ತದೆ, ಹೋಗುತ್ತದೆ. ಆದರೆ, ಈ ನಡುವೆ ನಾವುಗಳು ಮಾಡುವ ಸೇವೆಗಳೇ ಶಾಶ್ವತ ಎಂದು ಹೇಳಿ ನಾನು ಅಧ್ಯಕ್ಷನಾದ ಮೇಲೆ ಸಮಾಜದ ಚಿಂತನೆಯನ್ನಿಟ್ಟುಕೊಂಡು ಮಾಡಿದಂತಹ ಸೇವೆ ನಮಗೆ ತೃಪ್ತಿ ನೀಡಿದೆ ಎಂದು ವಿವರಿಸಿದ ಅವರು ಮನುಷ್ಯ ಗುರಿಯನ್ನು ತಲುಪಲು ಪ್ರಯತ್ನ ಬಹಳ ಅವಶ್ಯ ಎಂದರು.

ರಾಜ್ಯದ ವಿವಿಧ ಜಿಲ್ಲೆಗಳು ಸೇರಿದಂತೆ ಗುಜರಾತ್‌ನ ಆಹಮ್ಮದ್ ನಗರ, ಜಬಲ್ಪುರ್‌ನಿಂದ ಕವಿಗಳು ಪಾಲ್ಗೊಂಡಿದ್ದರು. ಟಾರ್ಗೆಟ್ ಮಹಮ್ಮದ್ ಅಸ್ಲಂ ಅವರಿಗೆ ಗೌರವಿಸಿ, ಪುರಸ್ಕರಿಸಲಾಯಿತು.

ವಕ್ಫ್ ಬೋರ್ಡ್ ಅಧ್ಯಕ್ಷ ಸಿರಾಜ್ ಆಹ್ಮದ್, ಅಬ್ದುಲ್ ಘನಿ ಅಕಾಡೆಮಿ ಮಾಜಿ ಅಧ್ಯಕ್ಷರು ವೇದಿಕೆಯಲ್ಲಿದ್ದರು.

ಆರಂಭದಲ್ಲಿ ಪ್ರಾಸ್ತಾವಿಕ ಭಾಷಣ ಮಾಡಿದ ಅಕಾಡೆಮಿ ಸದಸ್ಯ ದಾವೂದ್ ಮೊಹಸೀನ್ ಅವರು ತಪ್ಪು ಮಾಹಿತಿ ನೀಡಿದ್ದಾರೆ ಎಂದು ಅಹಮ್ಮದ್ ಷರೀಫ್ ಎಂಬುವವರು ವಾಗ್ವಾದ ಮಾಡಿದಾಗ ಕೊಂಚಕ್ಷಣ ಸಭಿಕರು ದಿಗ್ಭ್ರಮೆಗೊಂಡರು. ನಂತರ ಅಕಾಡೆಮಿ ಅಧ್ಯಕ್ಷರು ಸಮಜಾಯಿಷಿ ಉತ್ತರ ನೀಡಿ ಸ್ಥಿತಿಯನ್ನು ತಹಬಂದಿಗೆ ತಂದರು.

WANTED

1) Applications are invited for the post of Audit Assistant.
2) No. of Vacancies - 2
3) Minimum Qualification : Any Graduations with Computer & Tally Knowledge
4) Minimum Experience : Minimum 2 Years Experience with any Auditor
5) Remuneration : Rs. 20,000 to 30,000 Depending upon Experience and Knowledge.

From : Shankar & Co., Auditor & Tax Practitioner
AMARAVATHI HOUSING COLONY, DOGGALLI ROAD, HARIHAR - 577 601. Mobile : 98808 77101

## ಎಸ್ಸೆಸ್‌ಗೆ ಕಾಡಸಿದ್ದೇಶ್ವರ ಶ್ರೀ ಆಶೀರ್ವಾದ



ಬೆಂಗಳೂರು, ಜ. 12 - ಅಖಿಲ ಭಾರತ ವೀರಶೈವ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರೂ ಮತ್ತು ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರನ್ನು ಇಲ್ಲಿನ ಅವರ ನಿವಾಸದಲ್ಲಿ ನೊಣವಿನಕೆರೆ ಶ್ರೀ ಕಾಡಸಿದ್ದೇಶ್ವರ ಮಠದ ಮ.ನಿ.ಪ್ರ. ಡಾ. ಕರಿವೃಷಭ ದೇಶಿಕೇಂದ್ರ ಶಿವಯೋಗೀಶ್ವರ ಮಹಾಸ್ವಾಮೀಜಿ ಭೇಟಿ ಮಾಡಿ ಆಶೀರ್ವದಿಸಿದರು.

ಎಸ್ಸೆಸ್ ಅವರು ಶತಾಯುಷಿಗಳಾಗಲಿ ಹಾಗೂ ಇನ್ನಷ್ಟು ಕಾಲ ಸಮಾಜವನ್ನು ಮುನ್ನಡೆಸಲಿ ಎಂದು ಹಾರೈಸಿದರು.

## ಆವರಗೆರೆಯಲ್ಲಿ ಇಂದು ಶ್ರೀ ಬನಶಂಕರಿ ದೇವಿ ಜಾತ್ರಾ ಮಹೋತ್ಸವ



ಆವರಗೆರೆಯಲ್ಲಿರುವ ಶ್ರೀ ಬನಶಂಕರಿ ದೇವಿ ದೇವಸ್ಥಾನದಲ್ಲಿ ಬನದ ಹುಣ್ಣಿಮೆ ಪ್ರಯುಕ್ತ ಇಂದು ಜಾತ್ರಾ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ.

ಇಂದು ಬೆಳಿಗ್ಗೆ 5 ಗಂಟೆಗೆ ಶ್ರೀ ದೇವಿಗೆ ರುದ್ರಾಭಿಷೇಕ, ಬಿಲ್ವಾರ್ಚನೆ, ಕುಂಕುಮಾರ್ಚನೆ, ಮಹಾಮಂಗಳಾರತಿ, ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ. ಸಂಜೆ 7 ಗಂಟೆಯಿಂದ ಶ್ರೀ ಬನಶಂಕರಿ ದೇವಿಯ ಮೆರವಣಿಗೆಯು ಪ್ರಮುಖ ಬೀದಿಗಳಲ್ಲಿ ನಡೆಯಲಿದೆ ಎಂದು ಹಿರಿಯ ನ್ಯಾಯವಾದಿ ಎಸ್.ಪರಮೇಶ್ ತಿಳಿಸಿದ್ದಾರೆ.

## ತಮಿಳುನಾಡು ಉಪಚುನಾವಣೆ ಬಹಿಷ್ಕರಿಸಿದ ಬಿಜೆಪಿ

ಚೆನ್ನೈ, ಜ.12- ಕಾಂಗ್ರೆಸ್‌ನ ಇವಿಕೆಎಸ್ ಇಳಾಂಗೋವನ್ ನಿಧನದಿಂದ ಘೋಷಣೆಯಾಗಿರುವ ಉಪ ಚುನಾವಣೆಯಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಅಭ್ಯರ್ಥಿ ಸ್ಪರ್ಧಿಸುವುದಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಕೆ. ಅಣ್ಣಾಮಲೈ ಘೋಷಣೆ ಮಾಡಿದ್ದಾರೆ. ಭಾನುವಾರ ನಡೆದ ಪಕ್ಷದ ರಾಜ್ಯ ಕಾರ್ಯಕಾರಿ ವರ್ಚ್ಯುವಲ್ ಕಾರ್ಯಕ್ರಮದಲ್ಲಿ ಅವರು ಈ ಘೋಷಣೆ ಮಾಡಿದರು.

ಮುಂಬರುವ ಫೆಬ್ರವರಿ 5ರಂದು ನಿಗದಿಯಾಗಿರುವ ಈರೋಡ್ ಪೂರ್ವ ವಿಧಾನಸಭೆ ಉಪ ಚುನಾವಣೆಗೆ ಡಿಎಂಕೆ ಮೈತ್ರಿ ಅಭ್ಯರ್ಥಿಯಾಗಿ ವಿ.ಸಿ. ಚಂದ್ರಕುಮಾರ್ ಎನ್ನುವರ ಹೆಸರನ್ನು ಘೋಷಣೆ ಮಾಡಿದೆ.

ಡಿಎಂಕೆ–ಕಾಂಗ್ರೆಸ್ ರಾಜ್ಯದಲ್ಲಿ ವ್ಯಾಪಕ ಭ್ರಷ್ಟಾಚಾರ, ದುರಾಡಳಿತದಲ್ಲಿ ಮುಳುಗಿವೆ. ವಾಮಮಾರ್ಗದಲ್ಲಿ ಚುನಾವಣೆ ಗೆಲ್ಲಲು ಎಲ್ಲ ತಯಾರಿ ಮಾಡಿಕೊಂಡಿದೆ. ಹೀಗಾಗಿ ನಾವು ಮುಂಬರುವ (2026) ಸಾರ್ವತ್ರಿಕ ಚುನಾವಣೆಯಲ್ಲಿ ಡಿಎಂಕೆಯನ್ನು ಮನೆಗೆ ಕಳುಹಿಸುವ ಕೆಲಸದಲ್ಲಿ ತಲ್ಲೀನರಾಗುತ್ತೇವೆ. ಈ ಉಪ ಚುನಾವಣೆಗೆ ಸ್ಪರ್ಧಿಸುವುದಿಲ್ಲ ಎಂದು ಅಣ್ಣಾಮಲೈ ಹೇಳಿದ್ದಾರೆ. ಈಗಾಗಲೇ ಎಐಎಡಿಎಂಕೆ ಸಹ ಈ ಉಪ ಚುನಾವಣೆಯನ್ನು ಬಹಿಷ್ಕರಿಸಿದ್ದು, ಮುಂದಿನ ವರ್ಷಾಂತ್ಯಕ್ಕೆ ತಮಿಳುನಾಡು ವಿಧಾನಸಭೆ ಚುನಾವಣೆ ನಡೆಯಲಿದೆ.

## ನಗರದ ಅಕ್ಕಮಹಾದೇವಿ ಸಮಾಜದಲ್ಲಿ ಇಂದು ಬನದ ಹುಣ್ಣಿಮೆ ಕಾರ್ಯಕ್ರಮ

ಅಕ್ಕಮಹಾದೇವಿ ಸಮಾಜದಲ್ಲಿ ಇಂದು ಸಂಜೆ 5.30 ಕ್ಕೆ ಬನದ ಹುಣ್ಣಿಮೆ ಕಾರ್ಯಕ್ರಮ ಏರ್ಪಡಿಸಲಾಗಿದೆ.

ಶ್ರೀಮತಿ ಕೆ. ಸುಶೀಲಮ್ಮ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಶ್ರೀಮತಿ ದೊಗ್ಗಳ್ಳಿ ಸುವರ್ಣಮ್ಮ ಅವರ ಉಪಸ್ಥಿತಿಯಲ್ಲಿ ಶ್ರೀಮತಿ ಶೋಭಾ ಕಣವಿ ಧನುರ್ಮಾಸ ವಿಶೇಷತೆ ಬಗ್ಗೆ ಮಾತನಾಡುವರು. ಶ್ರೀಮತಿ ಶಾಂತ ಯಾವಗಲ್ ಅವರಿಂದ ದೇವಿ ಸ್ತೋತ್ರ ಗಾಯನ, ಶ್ರೀಮತಿ ಸೌಭಾಗ್ಯ ಹಿರೇಮಠ್ ಬನದ ಹುಣ್ಣಿಮೆ ಬಗ್ಗೆ ಮಾತನಾಡುವರು. ಶ್ರೀಮತಿ ನೀಲಗುಂದ ಜಯಮ್ಮ ನವರಿಂದ ಚಿಂತನ - ಮಂಥನ ನಡೆಯಲಿದೆ ಎಂದು ಹುಣ್ಣಿಮೆ ಸಂಚಾಲಕರಾದ ಶ್ರೀಮತಿ ಜಯದೇವಮ್ಮ ಹಾಗು ಉಮಾ ಎಮ್ಮಿ ತಿಳಿಸಿದ್ದಾರೆ.

## ಈಶ್ವರ ಪಾರ್ವತಿ ಗಣಪತಿ ದೇವಸ್ಥಾನಕ್ಕೆ ಡಾ. ಪ್ರಭಾ ಮಲ್ಲಿಕಾರ್ಜುನ್ ಭೇಟಿ



ದಾವಣಗೆರೆ, ಜ. 12 - ವಿದ್ಯಾನಗರದ ಶ್ರೀ ಈಶ್ವರ ಪಾರ್ವತಿ ಗಣಪತಿ ದೇವಸ್ಥಾನಕ್ಕೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಭೇಟಿ ನೀಡಿದರು.

ಈ ಸಂದರ್ಭದಲ್ಲಿ ದೇವಸ್ಥಾನದ ಅಧ್ಯಕ್ಷ ಬೆಳವನೂರು ನಾಗರಾಜಪ್ಪ, ಗುರುಸ್ವಾಮಿ, ಮರಡಿ ರಾಜಣ್ಣ ಅವರು ದೇವಸ್ಥಾನದ ಸಮಿತಿಯ ಸದಸ್ಯರಿಂದ ಸನ್ಮಾನಿಸಿದರು.

# ರೈತ ಹೋರಾಟಗಾರ ದಲ್ಲೈವಾಲಾ ಪ್ರತಿಭಟನೆಗೆ ಸ್ಪಂದಿಸದ ಕೇಂದ್ರ

### ರಾಜ್ಯ ರೈತ ಸಂಘಗಳ ಒಕ್ಕೂಟದಿಂದ ಪ್ರತಿಭಟನೆ, ಪ್ರತಿಕೃತಿ ದಹನ



ದಾವಣಗೆರೆ, ಜ.12- ಪಂಜಾಬ್‌ನ ಸಂಯುಕ್ತ ಕಿಸಾನ್ ಮೋರ್ಚಾ ಸಂಘಟನೆಯ ರಾಷ್ಟ್ರೀಯ ಸಂಚಾಲಕ, ರೈತ ಹೋರಾಟಗಾರ ಜಗಜಿತ್ ಸಿಂಗ್ ದಲ್ಲೈವಾಲಾ ಅವರ ಹೋರಾಟವನ್ನು ನಿರ್ಲಕ್ಷಿಸುತ್ತಿರುವ ಕೇಂದ್ರ ಸರ್ಕಾರದ ಧೋರಣೆ ಖಂಡಿಸಿ ಕರ್ನಾಟಕ ರಾಜ್ಯ ರೈತ ಸಂಘಗಳ ಒಕ್ಕೂಟದಿಂದ ಭಾನುವಾರ ಜಯದೇವ ವೃತ್ತದಲ್ಲಿ ಪ್ರತಿಭಟನೆ ನಡೆಸಲಾಯಿತು.

ಪ್ರಧಾನಿ ನರೇಂದ್ರ ಮೋದಿ ಅವರ ಪ್ರತಿಕೃತಿಯನ್ನು ದಹಿಸಿದ ಪ್ರತಿಭಟನಾಕಾರರು, ಕೇಂದ್ರದ ವಿರುದ್ಧ ತೀವ್ರ ಆಕ್ರೋಶ ಹೊರ ಹಾಕಿದರು. ಪೊಲೀಸರು ಕೂಡಲೇ ದಹಿಸಲಾಗುತ್ತಿದ್ದ ಪ್ರತಿಕೃತಿಯನ್ನು ನಂದಿಸಿದರು.

ಕಳೆದ 45 ದಿನಗಳಿಂದ ಜಗಜಿತ್ ಸಿಂಗ್ ದಲ್ಲೈವಾಲಾ ಅವರು ಉಪವಾಸ ಸತ್ಯಾಗ್ರಹ ನಡೆಸುತ್ತಿದ್ದಾರೆ. ಆದಾಗ್ಯೂ ಕೇಂದ್ರ ಸರ್ಕಾರ ರೈತರ ಬೇಡಿಕೆಗಳನ್ನು ಈಡೇರಿಸಲು ಮುಂದಾಗುತ್ತಿಲ್ಲ ಎಂದು ಹಸಿರು ಸೇನೆ ರಾಜ್ಯಾಧ್ಯಕ್ಷ ಕರಿಬಸಪ್ಪ ಗೌಡ್ರು ಆಕ್ರೋಶ ವ್ಯಕ್ತಪಡಿಸಿದರು.

ಕನಿಷ್ಟ ಬೆಂಬಲ ಬೆಲೆಗಾಗಿ ಕಳೆದ ಫೆಬ್ರವರಿಯಿಂದ ಹೋರಾಟ ನಡೆಸುತ್ತಿದ್ದರೂ, ಕೇಂದ್ರ ಸರ್ಕಾರವು ದಲ್ಲೈವಾಲಾ ಅವರ ಮನವಿಗೆ ಕಿಂಚಿತ್ತೂ ಸ್ಪಂದಿಸುತ್ತಿಲ್ಲ. ಅವರ ಆರೋಗ್ಯ ಸ್ಥಿತಿ ಗಂಭೀರವಾಗಿದ್ದರೂ ಸರ್ಕಾರ ನಿರ್ಲಕ್ಷ್ಯ ವಹಿಸುತ್ತಿರುವುದು ಖಂಡನೀಯ ಎಂದರು.

ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಬಲ್ಲೂರು ರವಿಕುಮಾರ್ ಮಾತನಾಡಿ, ಕೇಂದ್ರ ಸರ್ಕಾರ ಕೂಡಲೇ ಮಾತುಕತೆ ನಡೆಸಿ ದಲ್ಲೈವಾಲಾ ಅವರ ಪ್ರಾಣ ಉಳಿಸಬೇಕು. ಕೃಷಿ ಉತ್ಪನ್ನಗಳಿಗೆ ಎಂಎಸ್‌ಪಿ ಗ್ಯಾರಂಟಿ ಕಾನೂನು ಜಾರಿಗೆ ತರಬೇಕು ಎಂದು ಒತ್ತಾಯಿಸಿದರು.

ರೈತರನ್ನು ನಿರ್ಲಕ್ಷಿಸಿ ಈಗಾಗಲೇ ಕೇಂದ್ರ ಬಿಜೆಪಿ ಸರ್ಕಾರ ಕಳೆದ ಲೋಕಸಭಾ ಚುನಾವಣೆಯಲ್ಲಿ ಪೆಟ್ಟು ತಿಂದಿದೆ. ಕಳೆದ ಚುನಾವಣೆಯಲ್ಲಿ ಪೂರ್ಣ ಬಹುಮತದೊಂದಿಗೆ ಆಯ್ಕೆಯಾಗಿದ್ದ ಬಿಜೆಪಿ ಸರ್ಕಾರ, ಈ ಬಾರಿ ಚುನಾವಣೆಯಲ್ಲಿ ಕಿಚಡಿ ಸರ್ಕಾರ ರಚಿಸಿದೆ. ಇದೇ ರೀತಿ ರೈತ ನಿರ್ಲಕ್ಷ್ಯ ಧೋರಣೆ ಅನುಸರಿಸಿದರೆ ಮುಂದಿನ ದಿನಗಳಲ್ಲಿ ಪಚಡಿ ಸರ್ಕಾರವಾಗಲಿದೆ ಎಂದು ಎಚ್ಚರಿಸಿದರು.

ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಷಾ ಹಾಗೂ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ವಿರುದ್ಧ ಘೋಷಣೆ ಕೂಗಲಾಯಿತು.

ಹಸಿರು ಸೇನೆ ಅಧ್ಯಕ್ಷ ಕರಿಬಸಪ್ಪ ಗೌಡ, ನಿಟುವಳ್ಳಿಯ ಅಂಜಿನಪ್ಪ ಪೂಜಾರ್, ಬಸವನಗೌಡ್ರು, ಮಿಯ್ಯಾಪುರದ ತಿರುಮಲೇಶ್, ಗುರುಮೂರ್ತಿ, ವಿ.ಹೆಚ್. ಸೋಮಗೊಂಡ, ದಶರಥ, ಜಯಾನಾಯ್ಕ, ಕರಿಬಸಪ್ಪ ಬೆಳವನೂರು ಇತರರು ಪ್ರತಿಭಟನೆಯಲ್ಲಿದ್ದರು.



### ರಾಷ್ಟ್ರೀಯ ಯುವ ದಿನಾಚರಣೆ ಸಾಮೂಹಿಕ ಮ್ಯಾರಥಾನ್

ದಾವಣಗೆರೆ, ಜ. 12- ಸ್ವಾಮಿ ವಿವೇಕಾನಂದರ ಹುಟ್ಟುಹಬ್ಬದ 'ರಾಷ್ಟ್ರೀಯ ಯುವ ದಿನಾಚರಣೆ' ಅಂಗವಾಗಿ ನಗರದಲ್ಲಿ ಭಾನುವಾರ 5 ಕಿಲೋ ಮೀಟರ್ ಸಾಮೂಹಿಕ ಮ್ಯಾರಥಾನ್ ಆಯೋಜಿಸಲಾಗಿತ್ತು. ನಗರದ ಜಯದೇವ ವೃತ್ತದಿಂದ ಓಟ ಪ್ರಾರಂಭಿಸಿ ಎಂ.ಸಿ.ಸಿ. ಎ ಬ್ಲಾಕ್‌ನ ರಾಮಕೃಷ್ಣ ಮಿಷನ್‌ನಲ್ಲಿ ಕೊನೆಗೊಂಡಿತು. ರಾಮಕೃಷ್ಣ ಮಿಷನ್ ಕಾರ್ಯದರ್ಶಿ ಸ್ವಾಮಿ ತ್ಯಾಗೀಶ್ವರಾನಂದ ಅವರು ಓಟಕ್ಕೆ ಚಾಲನೆ ನೀಡಿದರು. ಇದೇ ವೇಳೆ ವಿವೇಕಾನಂದರ ವೇಷಧಾರಿ ಮಕ್ಕಳಿಗೆ ಪುರಸ್ಕರಿಸಲಾಯಿತು.

## ನಗರದ ವೀರೇಶ್ವರ ಪುಣ್ಯಾಶ್ರಮದಲ್ಲಿ ಇಂದು ಬನದ ಹುಣ್ಣಿಮೆ, ಶಿವಾನುಭವ ಗೋಷ್ಠಿ

ಬಾಡಾ ಕ್ರಾಸ್‌ನಲ್ಲಿರುವ ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಇಂದು ಬೆಳಿಗ್ಗೆ 11.30 ಗಂಟೆಗೆ 285ನೇ ಬನದ ಹುಣ್ಣಿಮೆ ಶಿವಾನುಭವ ಗೋಷ್ಠಿ ಮತ್ತು ಸಂಗೀತ ಕಾರ್ಯಕ್ರಮ ನಡೆಯಲಿದೆ. ಸಾನ್ನಿಧ್ಯವನ್ನು ಶ್ರೀ ಓಂಕಾರ ಶಿವಾಚಾರ್ಯ ಸ್ವಾಮೀಜಿ ಮತ್ತು ಶ್ರೀ ಕಲ್ಲಯ್ಯಜ್ಜ ವಹಿಸುವರು. ಶಾಸಕ ಶಾಮನೂರು ಶಿವಶಂಕರಪ್ಪ, ಡಾ. ಅಥಣಿ ಎಸ್. ವೀರಣ್ಣ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಶ್ರೀಮತಿ ಶಶಿಕಲಾ ಮೂರ್ತಿ, ಎಸ್.ಕೆ. ವೀರಣ್ಣ, ಡಾ. ಜೆ.ಎನ್. ಕರಿಬಸಪ್ಪ ಉಪಸ್ಥಿತರಿರುವರು. ಗಣೇಶ್ ಹುಲಗೂರು, ಸುರೇಶ ಕೊಪ್ಪಳ, ಭಾಗ್ಯವಂತ, ಆದಿತ್ಯ ಚಗಿಳಿ, ಭುವನ ಅವರಿಂದ ಸಂಗೀತ ಕಾರ್ಯಕ್ರಮ ಜರುಗಲಿದೆ.

# ಅಧಿಕಾರ ಇರಲಿ, ಇಲ್ಲದಿರಲಿ ನಿಮ್ಮ ಸಂಕಷ್ಟಗಳಿಗೆ ಸ್ಪಂದಿಸುವೆ : ಗಡಿಗುಡಾಳ್ ಮಂಜುನಾಥ್



### 'ಐದು ವರ್ಷ ಪೂರೈಸಿದ ಮನೆ ಬಾಗಿಲಿಗೆ ನಿಮ್ಮ ಸೇವಕ' ವಿನೂತನ ಕಾರ್ಯಕ್ರಮ

ದಾವಣಗೆರೆ, ಜ. 12 - ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ವಿನೂತನ ಪ್ರಯತ್ನವಾಗಿ ಮನೆ ಬಾಗಿಲಿಗೆ ನಿಮ್ಮ ಸೇವಕ ಕಾರ್ಯಕ್ರಮ ಆರಂಭಿಸಿದ್ದ ಮಹಾನಗರ ಪಾಲಿಕೆಯ 38ನೇ ವಾರ್ಡ್ ಎಂಸಿಸಿ ಬಿ ಬ್ಲಾಕ್‌ನ ಸದಸ್ಯ ಗಡಿಗುಡಾಳ್ ಮಂಜುನಾಥ್ ಅವರ ಅಭಿಯಾನವು ಐದು ವರ್ಷ ಪೂರೈಸಿದೆ. ಈ ಹಿನ್ನೆಲೆಯಲ್ಲಿ ವಾರ್ಡ್‌ನ ಪ್ರಮುಖರ ಮನೆಗೆ ತೆರಳಿ ಐದು ವರ್ಷಗಳ ಸಾಧನೆಯ ಕಿರು ಹೊತ್ತಿಗೆ ನೀಡಿ ಸನ್ಮಾನಿಸಿದರು. ಇದಕ್ಕೆ ವಾರ್ಡ್ ನವರು ಸಂತಸ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಗಡಿಗುಡಾಳ್ ಮಂಜುನಾಥ್ ಅವರು, ನಾನು ಕಳೆದ ಐದು ವರ್ಷಗಳ ಹಿಂದೆ ಮನೆ ಬಾಗಿಲಿಗೆ ನಿಮ್ಮ ಸೇವಕ ಕಾರ್ಯಕ್ರಮ ಆರಂಭಿಸುವಾಗ ಆತಂಕ ಇತ್ತು. ಆದ್ರೆ, ದಿನ ಕಳೆದಂತೆ ವಾರ್ಡ್‌ನ ಜನರು ತೋರಿದ ಪ್ರೀತಿ, ಸಹಕರಿಸಿದ ರೀತಿ ಮನಸ್ಸು ತುಂಬಿ ಬಂತು. ಕಾರ್ಯಕ್ರಮವೂ ಯಶಸ್ವಿಯಾಯಿತು. ವಾರಕ್ಕೊಮ್ಮೆ ಜನರ ಮನೆ ಬಾಗಿಲಿಗೆ ಹೋಗಿ ನೂರಾರು ಸಂಕಷ್ಟಗಳನ್ನು ಅರಿತು, ಪರಿಹರಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದೆ. ಇದು ಜನರ ಮನಸ್ಸು ಗೆದ್ದಿದೆ ಎಂಬ ಭಾವನೆ ನನ್ನದು ಎಂದು ಹೇಳಿದರು.

ಅಧಿಕಾರದಲ್ಲಿ ಇರಲಿ, ಇಲ್ಲದಿರಲಿ ಜನರ ಸಂಕಷ್ಟಗಳಿಗೆ ಯಾವಾಗಲೂ ಸ್ಪಂದಿಸುವೆ. ಅವರ ಜೊತೆ ನಾನು ಇರುವೆ. ಮುಂದೆಯೂ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸ ಮಾಡುತ್ತೇನೆ. ವಾರ್ಡ್‌ನ ಜನರು ನೀಡಿರುವ ಪ್ರೀತಿ, ಕೊಟ್ಟಿರುವ ಗೌರವ ಮರೆಯಲು ಸಾಧ್ಯವಿಲ್ಲ ಎಂದು ಹೇಳಿದರು.

ಬಿದ್ದಿದ್ದ ಕಸದ ರಾಶಿ, ಸತ್ತಿರುವ ಪ್ರಾಣಿ, ಮರದ ಕಸದ ಫೋಟೋಗಳನ್ನು ಆರೋಗ್ಯಾಧಿಕಾರಿ ಹಾಗೂ ದಫೇದಾರ್ ಅವರ ಮೊಬೈಲ್‌ಗೆ ಕಳಿಸುವ ವ್ಯವಸ್ಥೆ ಮಾಡಿದ್ದೆ. ಪ್ರತಿಯೊಂದು ರಸ್ತೆಯ ಚರಂಡಿ ಸ್ವಚ್ಛಗೊಳಿಸಿ ಸೊಳ್ಳೆಗಳು, ಕ್ರಿಮಿಕೀಟಗಳು ಬರದಂತೆ ಎಚ್ಚರ ವಹಿಸಿದ್ದೇನೆ. ವಾರಕ್ಕೆ 2 ಬಾರಿ ಫಾಗಿಂಗ್ ನಡೆಸಿ ಸೊಳ್ಳೆಗಳ ಕಾಟಕ್ಕೆ ಮುಕ್ತಿ ನೀಡಲಾಗಿದೆ. ದೀಪಗಳನ್ನು ಎಲ್ಲಾ ಕಡೆಗಳಲ್ಲಿಯೂ ಅಳವಡಿಸಿ ತೊಂದರೆಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಕಾಂಗ್ರೆಸ್ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಎಸ್. ಎಸ್. ಮಲ್ಲಿಕಾರ್ಜುನ್, ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರ ಮಾರ್ಗದರ್ಶನದಂತೆ ಅಭಿವೃದ್ಧಿಯ ಮಹಾಪೂರವೇ ಹರಿದು ಬಂದಿದೆ. ವಾರ್ಡ್‌ನ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಿದ್ದೇನೆ. ಮುಂದೆಯೂ ಕಷ್ಟಪಟ್ಟು ಶ್ರಮ ವಹಿಸುತ್ತೇನೆ. ಮುಂದಿನ ದಿನಗಳಲ್ಲಿಯೂ ಇದೇ ರೀತಿಯ ಸಹಕಾರ, ಪ್ರೀತಿ ತೋರುತ್ತೀರಾ ಎಂಬ ವಿಶ್ವಾಸ ನನಗಿದೆ ಎಂದು ಗಡಿಗುಡಾಳ್ ಮಂಜುನಾಥ್ ಹೇಳಿದರು.

ಪಾಲಿಕೆ ಸದಸ್ಯನಾಗಿ ಗೆದ್ದ ಬಳಿಕ ಅನೇಕ ರಸ್ತೆಗಳು ಹಾಳಾಗಿದ್ದವು. ಈ ಸಮಸ್ಯೆ ಮನಗಂಡು ಅನೇಕ ರಸ್ತೆಗಳನ್ನು ಕಾಂಕ್ರೀಟ್ ರಸ್ತೆಗಳನ್ನಾಗಿಸಿರುವೆ. ಆರೋಗ್ಯ ಶಿಬಿರ ಏರ್ಪಡಿಸಿ ವಯೋವೃದ್ಧರು, ಮಕ್ಕಳು, ಹಿರಿಯರು, ಪುರುಷರು, ಮಹಿಳೆಯರು, ಯುವಕ-ಯುವತಿಯರಿಗೆ ಆರೋಗ್ಯ ತಪಾಸಣೆ ನಡೆಸಲಾಗಿದೆ. ಒಟ್ಟಾರೆ ಕಳೆದ 5 ವರ್ಷಗಳಲ್ಲಿ ಇಷ್ಟೊಂದು ಕೆಲಸ ಮಾಡಲು ನೀವು ಕೊಟ್ಟ ಸಹಕಾರ ಕಾರಣ ಎಂದು ಹೇಳಿದರು.

ವಾರ್ಡ್‌ನ ಪ್ರಮುಖರು ಮಾತನಾಡಿ, ಅಧಿಕಾರ ಮುಗಿಯುತ್ತಾ ಬಂದಿದ್ದರೂ ನಮ್ಮನ್ನೆಲ್ಲಾ ಗುರುತಿಸಿ, ಮನೆ ಬಾಗಿಲಿಗೆ ಬಂದು ಸನ್ಮಾನಿಸುತ್ತಿರುವ ಗಡಿಗುಡಾಳ್ ಮಂಜುನಾಥ್ ಅವರನ್ನು ನೋಡಿದರೆ ಇದ್ದರೆ ಜನ ಪ್ರತಿನಿಧಿ ನಿಮ್ಮಂತೆ ಇರಬೇಕು ಎಂದು ಹಾರೈಸಿದರು.


## ಛತ್ತೀಸ್ ಗಢದಲ್ಲಿ ಪೊಲೀಸರ ಎನ್‌ಕೌಂಟರ್‌ಗೆ 5 ನಕ್ಸಲೀಯರ ಬಲಿ

ಬಿಜಾಪುರ, ಜ.12- ಭದ್ರತಾ ಪಡೆಗಳೊಂದಿಗೆ ನಡೆಸಿದ ಎನ್ ಕೌಂಟರ್ ನಲ್ಲಿ ಇಬ್ಬರು ಮಹಿಳೆಯರು ಸೇರಿದಂತೆ ಐವರು ನಕ್ಸಲೀಯರು ಹತ್ಯೆಯಾಗಿರುವ ಘಟನೆ ಛತ್ತೀಸ್ ಗಢದ ಬಿಜಾಪುರ ಜಿಲ್ಲೆಯಲ್ಲಿ ಭಾನುವಾರ ನಡೆದಿದೆ.

ಭದ್ರತಾ ಪಡೆಗಳ ಜಂಟಿ ತಂಡವೊಂದು ನಕ್ಸಲ್ ವಿರೋಧಿ ಕಾರ್ಯಾಚರಣೆಯಲ್ಲಿ ತೊಡಗಿದಾಗ ಮದ್ದೇಡ್ ಪೊಲೀಸ್ ಠಾಣಾ ವ್ಯಾಪ್ತಿಯ ಬಂಡೆಪಾರ-ಕೊರಂಜೆಡ್ ಗ್ರಾಮಗಳ ಅರಣ್ಯ ಪ್ರದೇಶದಲ್ಲಿ ಇಂದು ಬೆಳಗ್ಗೆ ಎನ್ ಕೌಂಟರ್ ನಡೆದಿದೆ ಎಂದು ಬಸ್ತಾರ್ ವಲಯದ ಐಜಿಪಿ ಪಿ. ಸುಂದರ್ ರಾಜ್ ತಿಳಿಸಿದ್ದಾರೆ.

ಇಂದ್ರವತಿ ರಾಷ್ಟ್ರೀಯ ಉದ್ಯಾನವನದಲ್ಲಿ ಬರುವ ಅರಣ್ಯ ಪ್ರದೇಶದಲ್ಲಿ ನಕ್ಸಲೀಯರ ಚಲನವಲನದ ಬಗ್ಗೆ ಮಾಹಿತಿ ಸಿಕ್ಕ ನಂತರ ಜಿಲ್ಲಾ ಮೀಸಲು ಪಡೆ, ವಿಶೇಷ ಕಾರ್ಯ ಪಡೆ ಶನಿವಾರ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಇಂದು ಮಧ್ಯಾಹ್ನ 3-4 ಗಂಟೆಯವರೆಗೂ ಗುಂಡಿನ ಚಕಮಕಿ ನಡೆದಿದ್ದು, ಇಬ್ಬರು ಮಹಿಳೆಯರು ಸೇರಿದಂತೆ ಐವರು ನಕ್ಸಲೀಯರ ಮೃತದೇಹಗಳು ಪತ್ತೆಯಾಗಿವೆ ಎಂದು ಅವರು ಮಾಹಿತಿ ನೀಡಿದ್ದಾರೆ.

## ನಗರದ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಇಂದು ಬನದ ಹುಣ್ಣಿಮೆ, ವಿಶೇಷ ಪೂಜೆ



ಇಲ್ಲಿನ ಡಿ. ದೇವರಾಜ ಅರಸು ಬಡಾವಣೆ 'ಎ' ಬ್ಲಾಕ್‌ನಲ್ಲಿರುವ ಶ್ರೀ ಮಾತಾ ಅನ್ನಪೂರ್ಣೇಶ್ವರಿ ದೇವಸ್ಥಾನದಲ್ಲಿ ಬನದ ಹುಣ್ಣಿಮೆ ಪ್ರಯುಕ್ತ ಇಂದು ನವಗ್ರಹ ಹೋಮ, ಶ್ರೀ ಸತ್ಯನಾರಾಯಣ ಸ್ವಾಮಿ ಪೂಜಾ ಕಥಾ, ಪ್ರಧಾನ ದೇವತೆ ಶ್ರೀ ಮಾತಾ ಅನ್ನಪೂರ್ಣೇಶ್ವರಿಗೆ ಮಂಗಳಾರತಿ ಮತ್ತು ತೀರ್ಥ ಪ್ರಸಾದ ವಿನಿಯೋಗ ನಡೆಯಲಿದೆ ಎಂದು ದೇವಸ್ಥಾನ ಸಮಿತಿ ಗೌರವ ಅಧ್ಯಕ್ಷ ಆರ್.ಜಿ. ನಾಗೇಂದ್ರ ಪ್ರಕಾಶ್ ತಿಳಿಸಿದ್ದಾರೆ.

ಕೀರ್ತಿಶೇಷ ಶ್ರೀಮತಿ ನಾಗರತ್ನಮ್ಮ ನೀಲಕಂಠಪ್ಪ, ಗುತ್ತಿದುರ್ಗ ಮತ್ತು ಕುಟುಬದವರು ಸೇವಾಕರ್ತರಾಗಿದ್ದಾರೆ ಎಂದು ದೇವಸ್ಥಾನ ಸಮಿತಿ ಅಧ್ಯಕ್ಷ ಪ್ರಕಾಶ್ ಪಾಟೀಲ್ ವಿವರಿಸಿದ್ದಾರೆ.

## ಸಿ.ಟಿ.ರವಿಯನ್ನು ರಾಜಕೀಯವಾಗಿ ಮುಗಿಸುವ ಹುನ್ನಾರ: ಶೆಟ್ಟರ್ ಆರೋಪ

ಬೆಳಗಾವಿ, ಜ.12- ಹಿಂದುತ್ವದ ಬಗ್ಗೆ ಹೋರಾಡುವ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರನ್ನು ರಾಜಕೀಯವಾಗಿ ಮುಗಿಸುವ ಹುನ್ನಾರ ನಡೆದಿದೆ ಎಂದು ಸಂಸದ ಜಗದೀಶ್ ಶೆಟ್ಟರ್ ಆರೋಪಿಸಿದ್ದಾರೆ.

ಭಾನುವಾರ ಸುದ್ದಿಗಾರರ ಜತೆ ಮಾತನಾಡಿದ ಅವರು, ವಿಧಾನಮಂಡಲ ಚಳಿಗಾಲ ಅಧಿವೇಶನದ ವೇಳೆ, ವಿಧಾನ ಪರಿಷತ್‌ನಲ್ಲಿ ನಡೆದ ಘಟನೆ ಬಗ್ಗೆ ತನಿಖೆ ಪ್ರಗತಿಯಲ್ಲಿದೆ. ರವಿ ಅವರನ್ನು ಕಾನೂನು ಬಾಹಿರವಾಗಿ ಬಂಧಿಸಲಾಗಿತ್ತು. ಈಗ ಅವರಿಗೆ ಬೆದರಿಕೆ ಪತ್ರ ಬರೆಯಲಾಗಿದೆ. ಇದರಿಂದ ರಾಜ್ಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆ ಸಾಕಷ್ಟು ಹದಗೆಟ್ಟಿದೆ. ಅರಾಜಕತೆ ಸೃಷ್ಟಿಯಾಗಿದೆ ಎಂಬುದು ತಿಳಿಯುತ್ತದೆ ಎಂದು ದೂರಿದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರದ ಏಜೆಂಟರಂತೆ ಪೊಲೀಸರು ವರ್ತಿಸುವುದು ಸರಿಯಲ್ಲ. ಇಲ್ಲಿನ ಗೂಂಡಾ ಸಂಸ್ಕೃತಿಯನ್ನು ಜನರು ವಿರೋಧಿಸುತ್ತಾರೆ. ಸುವರ್ಣ ವಿಧಾನಸೌಧದಲ್ಲಿ ಗೂಂಡಾಗಿರಿ ಮಾಡಿದವರು ಮತ್ತು ಈಗ ರವಿ ಅವರಿಗೆ ಬೆದರಿಕೆ ಪತ್ರ ಬರೆದವರನ್ನು ಮೊದಲು ಬಂಧಿಸುವ ಕೆಲಸವಾಗಬೇಕು ಎಂದು ಒತ್ತಾಯಿಸಿದರು.

## ದೇವರಬೆಳೆಕೆರೆ : ಇಂದು ಭಂಡಾರದ ಹುಣ್ಣಿಮೆ



ಹರಿಹರ ತಾಲ್ಲೂಕಿನ ದೇವರಬೆಳಕೆರೆ ಗ್ರಾಮದ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಇಂದು ಸಂಜೆ 7.30 ರಿಂದ ಶ್ರೀ ಮೈಲಾರಲಿಂಗೇಶ್ವರ ಸ್ವಾಮಿ ಭಂಡಾರದ ಹುಣ್ಣಿಮೆ ಮತ್ತು ಭಂಡಾರ ಹಣಿಯುವುದು ಮತ್ತು ರಾತ್ರಿ 8.30 ರಿಂದ ಶ್ರೀ ಸ್ವಾಮಿಯ ಪಲ್ಲಕ್ಕಿ ಉತ್ಸವ ಜರುಗುವುದು.

ನಾಳೆ ಮಂಗಳವಾರ ಸಂಜೆ 7 ಗಂಟೆಗೆ ಭಂಡಾರ ಹಳೆಯುವುದು ಮತ್ತು ಪ್ರಸಾದ ವಿತರಣೆ ಕಾರ್ಯಕ್ರಮಗಳು ನಡೆಯಲಿವೆ.

## ನಾಗನೂರು ಪತ್ತಿನ ಸಹಕಾರ ಸಂಘಕ್ಕೆ ಅವಿರೋಧ ಆಯ್ಕೆ



ದಾವಣಗೆರೆ, ಜ. 12 - ತಾಲ್ಲೂಕಿನ ನಾಗನೂರು ಕೃಷಿ ಪತ್ತಿನ ಸಹಕಾರ ಸಂಘದ ಆಡಳಿತ ಮಂಡಳಿಗೆ ಅವಿರೋಧವಾಗಿ ಆಯ್ಕೆ ಮಾಡಲಾಗಿದೆ. ಅಧ್ಯಕ್ಷರಾಗಿ ಎನ್.ಜಿ. ಚಂದ್ರಶೇಖರ್, ಉಪಾಧ್ಯಕ್ಷರಾಗಿ ಎನ್.ಬಿ. ಶಿವಕುಮಾರ್ ಹಾಗೂ ನಿರ್ದೇಶಕರುಗಳಾಗಿ ಎನ್.ಎಂ. ಬಸವರಾಜಪ್ಪ, ಲಲಿತಮ್ಮ, ಸರೋಜಮ್ಮ, ಹೆಚ್. ನಿಂಗಪ್ಪ, ಎನ್.ಕೆ. ತಿಪ್ಪೇಶ್, ನಾಗರಾಜಪ್ಪ, ಎನ್.ಹೆಚ್. ಪರಮೇಶ್ವರಪ್ಪ, ಕೋಡಿಹಳ್ಳಿ ಕರಿಬಸಪ್ಪ ಮತ್ತು ಕೆ.ವಿ. ಮಹೇಶ್ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ.

## ನಗರದಲ್ಲಿ ಇಂದು ಹೆಲ್ಮೆಟ್ ಜಾಗೃತಿ ಆಂದೋಲನ

ಆಮ್ ಆದ್ಮಿ ಪಕ್ಷದಿಂದ ಹೆಲ್ಮೆಟ್ ಧರಿಸಿ ಪ್ರಾಣ ಉಳಿಸಿ ಆಂದೋಲನದ ಅಂಗವಾಗಿ ಸಾರ್ವಜನಿಕರಿಗೆ ಕರಪತ್ರ ಹಂಚುವ ಉದ್ಘಾಟನಾ ಕಾರ್ಯಕ್ರಮವನ್ನು ಇಂದು ಬೆಳಿಗ್ಗೆ 10 ಗಂಟೆಗೆ ಅಕ್ತರ್ ರಜಾ ಸರ್ಕಲ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್ ಉದ್ಘಾಟಿಸಲಿದ್ದಾರೆ ಎಂದು ಜಿಲ್ಲಾಧ್ಯಕ್ಷ ಕೆ.ಎಸ್. ಶಿವಕುಮಾರಪ್ಪ ತಿಳಿಸಿದ್ದಾರೆ.

## ಭಾರತೀಯ ಹೈಕಮೀಷನರ್‌ಗೆ ಸಮನ್ಸ್

ಢಾಕಾ, ಜ.12- ಗಡಿ ಉದ್ವಿಗ್ನತೆ ಕುರಿತು ಬಾಂಗ್ಲಾದೇಶದ ವಿದೇಶಾಂಗ ಸಚಿವಾಲಯ ಭಾನುವಾರ ಭಾರತೀಯ ಹೈಕಮೀಷನರ್ ಪ್ರಣಯ್ ವರ್ಮಾ ಅವರಿಗೆ ಸಮನ್ಸ್ ನೀಡಿದೆ. ಭಾರತ ದ್ವಿಪಕ್ಷೀಯ ಒಪ್ಪಂದವನ್ನು ಉಲ್ಲಂಘಿಸಿ ಬಾಂಗ್ಲಾ ಗಡಿಯ ಐದು ಸ್ಥಳಗಳಲ್ಲಿ ಬೇಲಿಗಳನ್ನು ನಿರ್ಮಿಸಲು ಪ್ರಯತ್ನಿಸುತ್ತಿದೆ ಎಂದು ಢಾಕಾ ಆರೋಪಿಸಿದ ಕೆಲವೇ ಗಂಟೆಗಳ ನಂತರ ಈ ಬೆಳವಣಿಗೆ ನಡೆದಿದೆ.

ವರ್ಮಾ ಮಧ್ಯಾಹ್ನ 3:00 ಗಂಟೆಯ ಸುಮಾರಿಗೆ ಸಚಿವಾಲಯಕ್ಕೆ ಭೇಟಿ ನೀಡಿ ಚರ್ಚಿಸಿದ್ದಾರೆ. ವಿದೇಶಾಂಗ ಕಾರ್ಯದರ್ಶಿ ಜಾಶಿಮ್ ಉದ್ದೀನ್ ಅವರೊಂದಿಗಿನ ಸುಮಾರು 45 ನಿಮಿಷಗಳ ಕಾಲ ಸಭೆ ನಡೆಸಿದ್ದಾರೆ. ಚರ್ಚೆಯ ಕುರಿತು ಮಧ್ಯಂತರ ಸರ್ಕಾರವು ಯಾವುದೇ ಅಧಿಕೃತ ಹೇಳಿಕೆಯನ್ನು ಬಿಡುಗಡೆ ಮಾಡದಿದ್ದರೂ, ಅಧಿಕಾರಿಗಳು ರಾಯಭಾರಿಗೆ ಸಮನ್ಸ್ ನೀಡಿರುವುದನ್ನು ಖಚಿತಪಡಿಸಿದ್ದಾರೆ.

ಹೃದಯಪೂರ್ವಕ ಕೃತಜ್ಞತೆಗಳು

ಶ್ಯಾಬನೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರಾಗಿ ನಾನು ಅವಿರೋಧವಾಗಿ ಆಯ್ಕೆಯಾಗಲು ಸಹಕರಿಸಿದ ಸಂಘದ ನಿರ್ದೇಶಕರಿಗೂ ಮತ್ತು ಪ್ರತ್ಯಕ್ಷ - ಪರೋಕ್ಷವಾಗಿ ಸಹಕರಿಸಿದ ಶ್ಯಾಬನೂರು ಗ್ರಂಥಾಲಯ ಸ್ನೇಹ ಬಳಗಕ್ಕೂ, ಶಿರಮಗೊಂಡನಹಳ್ಳಿಯ ಹೊರ ಬೀರಲಿಂಗೇಶ್ವರ ದೇವಸ್ಥಾನ ಸ್ನೇಹ ಬಳಗಕ್ಕೂ, ಸಂಘದ ಸಿಬ್ಬಂದಿ ವರ್ಗಕ್ಕೂ

ನನ್ನ ಹೃದಯಪೂರ್ವಕ ಕೃತಜ್ಞತೆಗಳು.




ಶ್ರೀ ಎಸ್. ಹಾಲಪ್ಪ
ಅಧ್ಯಕ್ಷರು,
ಶ್ಯಾಬನೂರು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ, ಶ್ಯಾಬನೂರು.

ಉಚಿತ ಕಣ್ಣಿನ ಪರೀಕ್ಷೆ

5ನೇ ವಾರ್ಷಿಕೋತ್ಸವದ ಪ್ರಯುಕ್ತ

ದಿನಾಂಕ : 13.01.2025 ರಿಂದ 31.01.2025 ರವರೆಗೆ
ಸಮಯ : ಬೆಳಗ್ಗೆ 10.30 ರಿಂದ ಮಧ್ಯಾಹ್ನ 1.30 ರವರೆಗೆ
ಮಧ್ಯಾಹ್ನ 3.00 ರಿಂದ ಸಂಜೆ 6.00 ಗಂಟೆವರೆಗೆ
ಭಾನುವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 12 ಗಂಟೆಯ ವರೆಗೆ





ದೃಷ್ಟಿ ದೋಷವುಳ್ಳವರಿಗೆ ಜಪಾನ್ ನಿರ್ಮಿತ ಕಂಪ್ಯೂಟರ್‌ನಿಂದ ಕಣ್ಣಿನ ಪರೀಕ್ಷೆ ಮಾಡಲಾಗುವುದು.

ಕಣ್ಣಿನ ಪೊರೆ ಬಂದಿರುವ ರೋಗಿಗಳಿಗೆ ಲೆನ್ಸ್ ಅಳವಡಿಸಿ, ಉಚಿತ ಶಸ್ತ್ರಚಿಕಿತ್ಸೆಗೆ ಹೆಸರು, ವಿಳಾಸ, ದೂರವಾಣಿ ಸಂಖ್ಯೆ, ನೋಂದಾಯಿಸಿಕೊಳ್ಳಲಾಗುವುದು.

ಸ್ಥಳ : ದೀಪ್ತಿ ಆಪ್ಟಿಕಲ್ಸ್
(ಕಂಪ್ಯೂಟರೀಕೃತ ಕಣ್ಣಿನ ಪರೀಕ್ಷಾ ಕೇಂದ್ರ)
ಚಿರಂಜೀವಿ ಮೆಡಿಕಲ್ಸ್‌ಪಕ್ಕ, ಸರ್ಕಾರಿ ಆಸ್ಪತ್ರೆ ಹತ್ತಿರ, ಇಂದಿರಾ ನಗರ, ಹರಿಹರ.

ಸಂಪರ್ಕಿಸಿ : 91647 58836

KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas